VOLUME: 16 | 06 JUNE 2026 | ಶನಿವಾರ | RS: 2 | PAGE: 06 ISSUE: 117 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಮದುವೆಯ ನಂತರ ಸಾಮಾಜಿಕ ಜಾಲತಾಣಗಳಲ್ಲಿ ಅಷ್ಟೇನೂ ಫೋಟೋಗಳನ್ನು ರಶ್ಮಿಕಾ ಅಪ್‌ಡೇಟ್ ಮಾಡುತ್ತಿರಲ್ಲ. ಆದರೆ ಕಳೆದ 10 ದಿನಗಳಿಂದ ಅಪ್‌ಲೋಡ್ ಮಾಡಿದ ಇವರ ಎಲ್ಲಾ ಚಿತ್ರಗಳಿಗೆ ಹೆಚ್ಚು ಲೈಕ್ ಮತ್ತು ಕಮೆಂಟ್ ಬಂದಿವೆ....

BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಇಬ್ಬರು ಭಯೋತ್ಪಾದಕರ ಬಂಧನ

ದಾವಣಗೆರೆ: ಭಾರತದಲ್ಲಿ ವಿಧ್ವಂಸಕ ಕೃತ್ಯ ನಡೆಸಲು ಸಜ್ಜಾಗಿದ್ದ ಇಬ್ಬರು ಶಂಕಿತ ಭಯೋತ್ಪಾದಕರನ್ನು ತುಮಕೂರು ಪೊಲೀಸರು ದಾವಣಗೆರೆಯಲ್ಲಿ ಬಂಧಿಸಿದ್ದಾರೆ.

ದಾವಣಗೆರೆಯ ಬಿಡಿ ಲೇಔಟ್‌ನ ಜಮೀರ್ ಖಾನ್ (22), ತುಮಕೂರಿನ ಅಲ್ಲಾಭಕ್ಷಿ ಬಂಧಿತರು. ಈ ಇಬ್ಬರೂ ಪಾಕ್‌ನ ಐಎಸ್‌ಎಸ್ ಫಂಡಿಂಗ್ ಮಾಡುತ್ತಿದ್ದ ಉಗ್ರರಾದ ಶಾಬಾಸ್ ಭುಟ್ಟಿ ಹಾಗೂ ರಾಣಾ ಉನೇನ್ ಜೊತೆ ನಿರಂತರ ಸಂಪರ್ಕದಲ್ಲಿದ್ದರು. ಈ ಬಗ್ಗೆ ಗುಪ್ತಚರ ಇಲಾಖೆ ಮಾಹಿತಿ ನೀಡಿತ್ತು. ಮಾಹಿತಿ ಆಧರಿಸಿ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ.

ಈ ಇಬ್ಬರೂ ಸೇರಿ ದುರಂದರ್ ಶೈಲಿಯಲ್ಲಿ ಭಾರತದಲ್ಲಿ ವಿಧ್ವಂಸಕ ಕೃತ್ಯಗಳನ್ನು ನಡೆಸಲು ಸಂಚು ರೂಪಿಸಿದ್ದರು. ದುರಂದರ್ ಸಿನಿಮಾದಲ್ಲಿ ಹೇಗೆ ಪಾಕಿಸ್ತಾನದಲ್ಲಿ ಬಾಂಬ್ ಸ್ಫೋಟ ಮಾಡಿದ್ರೋ ಅದೇ ರೀತಿ ಭಾರತದಲ್ಲಿ ನಡೆಸಲು ಸಂಚು ರೂಪಿಸಿದ್ದರು ಎಂದು ತಿಳಿದುಬಂದಿದೆ. ಈ ಇಬ್ಬರನ್ನು ಪಿಐಒಗಳಾಗಿ (ಪಾಕಿಸ್ತಾನ್ ಇಂಟಲಿಜೆನ್ಸ್ ಅಪರೇಟರ್ಸ್) ಉಗ್ರರು ಬಳಕೆ ಮಾಡಿಕೊಂಡಿದ್ದರು.

ವಾಟ್ಸಾಪ್, ಇನ್ಸ್ಟಾಗ್ರಾಂ ಸೇರಿದಂತೆ ಸಾಮಾಜಿಕ ಜಾಲತಾಣದಲ್ಲಿ ನಿರಂತರವಾಗಿ ಉಗ್ರರ ಸಂಪರ್ಕದಲ್ಲಿದ್ದರು. ದೇಶದಲ್ಲಿ ಸಂಚು ನಡೆಸಲು ಭಾರತದ ಮುಸ್ಲಿಂ ಯುವಕರನ್ನು ಬಳಕೆ ಮಾಡಿಕೊಂಡು ಐಎಸ್‌ಎಸ್ ಭಯೋತ್ಪಾದಕ ಸಂಘಟನೆ ವಿಸ್ತರಿಸಲು ಸಂಚು ರೂಪಿಸಿದ್ದರು. ಈಗಾಗಲೇ ಇಬ್ಬರು ಯುವಕರಿಗೆ ಉಗ್ರರು ಮುಂಬೈನಲ್ಲಿ ಉದ್ಯಮಿಯೊಬ್ಬನನ್ನು ಮುಗಿಸಲು ಟಾಸ್ಕ್ ನೀಡಿದ್ದರು. ಅಷ್ಟರೊಳಗೆ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ.

ದಾವಣಗೆರೆಯ ಬಿಡಿ ಲೇಔಟ್ ನಿವಾಸಿಯಾಗಿದ್ದ ಶಂಕಿತ ಭಯೋತ್ಪಾದಕ, ಕಟ್ಟಡ ನಿರ್ಮಾಣ ಕೆಲಸ ಮಾಡಿಕೊಂಡು ಜೀವನ ನಡೆಸುತ್ತಿದ್ದ. ಹಾಸನ ಸೇರಿದಂತೆ ಹಲವು ಕಡೆಗಳಲ್ಲಿ ಕೆಲಸಕ್ಕಾಗಿ ಹೋಗುತ್ತಿದ್ದ. ತಂದೆ ತಾಯಿ ಇಬ್ಬರು ಸಹೋದರರ ಜೊತೆ ದಾವಣಗೆರೆಯಲ್ಲಿ ವಾಸವಿದ್ದ. ಇನ್‌ಸ್ಟಾಗ್ರಾಮ್ ಮೂಲಕ ಪಾಕಿಸ್ತಾನದ ಶಾಬಾಸ್ ಭುಟ್ಟಿ ಹಾಗೂ ರಾಣಾ ಉನೇನ್ ಜೊತೆ ಈತನಿಗೆ ಸಂಪರ್ಕವಿತ್ತು. ಅವರ ನಿರ್ದೇಶನದಂತೆ ಭಾರತದಲ್ಲಿ ಸಂಚು ರೂಪಿಸುತ್ತಿದ್ದ ವಿಚಾರ ಪ್ರಾಥಮಿಕ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

## ಜಮ್ಮುವಿನಲ್ಲಿ ಮೇಘಸ್ಫೋಟ

ಶ್ರೀನಗರ: ಜಮ್ಮು–ಕಾಶ್ಮೀರದ ರಿಯಾಸಿ ಜಿಲ್ಲೆಯಲ್ಲಿ ಮೇಘ ಸ್ಫೋಟ ಸಂಭವಿಸಿ ಹಠಾತ್ ಜಲಪ್ರವಾಹ ಉಂಟಾಗಿದೆ. ಘಟನೆಯಿಂದ ಹಲವು ಮನೆಗಳಿಗೆ ಹಾನಿಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

ರಿಯಾಸಿ ಜಿಲ್ಲೆಯ ಮಹೋರ್ ಉಪವಿಭಾಗದ ಬಥೋಯಿ ಗ್ರಾಮದಲ್ಲಿ ಗುರುವಾರ ತಡರಾತ್ರಿ ಮೇಘ ಸ್ಫೋಟ ಸಂಭವಿಸಿದೆ. ಭಾರೀ ಮಳೆಯೊಂದಿಗೆ ನೀರು ಏಕಾಏಕಿ ಗ್ರಾಮಕ್ಕೆ ನುಗ್ಗಿ ಹಲವು ಮನೆಗಳಿಗೆ ಹಾನಿ ಉಂಟಾಗಿದೆ. ಮಾಹಿತಿ ತಿಳಿಯುತ್ತಿದ್ದಂತೆ ರಕ್ಷಣಾ ಮತ್ತು ಪರಿಹಾರ ತಂಡಗಳು ಸ್ಥಳಕ್ಕೆ ಧಾವಿಸಿ ಕಾರ್ಯಾಚರಣೆ ಆರಂಭಿಸಿವೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭಾರೀ ಮಳೆಯಿಂದ ಜಾಮ್ಲಾನ್ ಸೇತುವೆ ಸಮೀಪ ನೀರಿನ ಮಟ್ಟ ಏರಿಕೆಯಾಗಿದ್ದು, ಕೆಲಕಾಲ ವಾಹನ ಸಂಚಾರ ಸ್ಥಗಿತಗೊಳಿಸಲಾಗಿತ್ತು.



ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ನಡೆಯಲಿರುವ ಚುನಾವಣೆಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನಖರ್ಗೆ ಅವರು ತಮ್ಮ ನಾಮಪತ್ರ ಸಲ್ಲಿಸಿದರು. ವಿಧಾನಸೌಧದ ಮೊದಲನೆ ಮಹಡಿಯಲ್ಲಿರುವ ಚುನಾವಣಾಧಿಕಾರಿಯೂ ಆಗಿರುವ ವಿಧಾನಸಭೆಯ ಕಾರ್ಯದರ್ಶಿ ವಿಶಾಲಾಕ್ಷಿ ಅವರಿಗೆ ಮಲ್ಲಿಕಾರ್ಜುನಖರ್ಗೆ ಅವರು ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು.

**ಮನವೊಲಿಕೆ ಪ್ರಯತ್ನ ನಡೆದರೆ ಒಪ್ಪಿಕೊಳ್ಳುತ್ತೀರಾ? ಅಥವಾ ಖಾತೆ ಬದಲಾ ವಣೆಯಾದರೆ ಸಚಿವರಾಗಿ ಮುಂದುವರೆ ಯುತ್ತೀರಾ? ಎಂಬೆಲ್ಲಾ ಪ್ರಶ್ನೆಗಳಿಗೆ ತಾವು ಉತ್ತರಿಸುವುದಿಲ್ಲ ಎಂದು ತಿಳಿಸಿದರು. 1973ರಲ್ಲಿ ತಾವು ವಿದ್ಯಾರ್ಥಿ ಸಂಘಕ್ಕೆ ಆಯ್ಕೆಯಾಗಿದ್ದೆ. ನಂತರ ಎನ್‌ಎಸ್‌ಯುಐ ಸೇರಿ ಸುದೀರ್ಘವಾಗಿ 53 ವರ್ಷಗಳ ಕಾಲ ಕಾಂಗ್ರೆಸ್ ಪಕ್ಷದಲ್ಲಿ ವಿದ್ಯಾರ್ಥಿ ಘಟಕ, ಯುವ ಘಟಕ, ಬ್ಲಾಕ್ ಕಾಂಗ್ರೆಸ್, ಜಿಲ್ಲಾ ಕಾಂಗ್ರೆಸ್, ಕೆಪಿಸಿಸಿ ಕಾರ್ಯಾಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ.**

# ರಾಮಲಿಂಗಾರೆಡ್ಡಿ ರಾಜೀನಾಮೆ

ಬೆಂಗಳೂರು: ಬೆಂಗಳೂರು ನಗರಾಭಿವೃದ್ಧಿ ಇಲಾ ಖೆಗಾಗಿ ಒತ್ತಡ ಹೇರಿದ್ದ ರಾಮಲಿಂಗಾ ರೆಡ್ಡಿ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಬಿಟಿಎಂಲೇ ಔಟ್ ವಿಧಾನಸಭಾ ಕ್ಷೇತ್ರದ ಕೋರಮಂಗಲದಲ್ಲಿರುವ ಶಾಸಕರ ಕಚೇರಿಯಲ್ಲಿ ತುರ್ತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಖಾತೆ ಹಂಚಿಕೆ ವಿಚಾರವಾಗಿ ತಮ್ಮನ್ನು ಪದೇಪದೇ ಕುಗ್ಗಿಸಲಾಗುತ್ತಿದೆ.

ಆತ್ಮಸಾಕ್ಷಿಗೆ ಧಕ್ಕೆಯಾಗಿರುವುದರಿಂದ ಅದನ್ನು ಸಹಿಸಿಕೊಂಡು ಕೆಲಸ ಮಾಡಲು ಸಾಧ್ಯವಿಲ್ಲ. ಅದಕ್ಕಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಹೇಳಿದರು.

ಸಚಿವ ಸ್ಥಾನಕ್ಕೆ ನಾನು ರಾಜೀನಾಮೆ ನೀಡುತ್ತಿದ್ದೇನೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ನೇರವಾಗಿ ರಾಜೀನಾಮೆ ನೀಡಲು ನನಗೆ ಇಷ್ಟವಿಲ್ಲ. ಅದಕ್ಕಾಗಿ ತಮ ಆಪ್ತಕಾರ್ಯದರ್ಶಿ ಮೂಲಕ ಬೆಂಬಲಿಗರಾದ ಮಂಜುನಾಥರೆಡ್ಡಿ ಅವರೊಂದಿಗೆ ರಾಜೀನಾಮೆ ಪತ್ರವನ್ನು ಮುಖ್ಯಮಂತ್ರಿ ಅವರ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರಿಗೆ ತಲುಪಿಸುತ್ತಿದ್ದೇನೆ ಎಂದು ಹೇಳಿದ್ದಾರೆ.

ತಾವು ಕಾಂಗ್ರೆಸ್ ಪಕ್ಷದಲ್ಲೇ ಇರಲಿದ್ದು, ಶಾಸಕನಾಗಿ ಮುಂದುವರೆಯುತ್ತೇನೆ. ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಹೈಕಮಾಂಡ್ ನಾಯಕರು ಸೇರಿದಂತೆ ಯಾರ ಮೇಲೂ ನನಗೆ ಕೋಪವಿಲ್ಲ. ಯಾರೊಂದಿಗೂ ಮಾತುಕತೆ ಅಥವಾ



ಸಂಧಾನ ಪ್ರಕ್ರಿಯೆ ಬಯಸುವುದಿಲ್ಲ ಎಂದು ದೃಢವಾಗಿ ಹೇಳಿದರು.

ರಾಜೀನಾಮೆ ನೀಡುವ ವಿಚಾರವನ್ನು ಪತ್ನಿ, ಪುತ್ರಿ ಹಾಗೂ ಮಗನ ಜೊತೆ ಕೂಡ ಚರ್ಚೆ ಮಾಡಿಲ್ಲ. ನಿನ್ನೆ ದಿನ ಡಿ.ಕೆ.ಶಿವಕುಮಾರ್ ಅವರ ಜೊತೆ ನಡೆದ ಮಾತುಕತೆಗಳ ಬಗ್ಗೆ ವಿವರಣೆ ನೀಡಲು ಇಷ್ಟ ಪಡುವುದಿಲ್ಲ.

ಈ ವಿಚಾರವಾಗಿ ತಾವು ಹೆಚ್ಚು ಮಾತನಾಡಲು ಬಯಸುವುದಿಲ್ಲ. ಅನಗತ್ಯ ಪ್ರಶ್ನೆಗಳನ್ನು ಕೇಳಬೇಡಿ ಎಂದು ಖಡಾ ಖಂಡಿತವಾಗಿ ಹೇಳಿದರು.

ಮನವೊಲಿಕೆ ಪ್ರಯತ್ನ ನಡೆದರೆ ಒಪ್ಪಿಕೊಳ್ಳುತ್ತೀರಾ? ಅಥವಾ ಖಾತೆ ಬದಲಾ ವಣೆಯಾದರೆ ಸಚಿವರಾಗಿ ಮುಂದುವರೆ ಯುತ್ತೀರಾ? ಎಂಬೆಲ್ಲಾ ಪ್ರಶ್ನೆಗಳಿಗೆ ತಾವು ಉತ್ತರಿಸುವುದಿಲ್ಲ ಎಂದು ತಿಳಿಸಿದರು.

1973ರಲ್ಲಿ ತಾವು ವಿದ್ಯಾರ್ಥಿ ಸಂಘಕ್ಕೆ ಆಯ್ಕೆಯಾಗಿದ್ದೆ. ನಂತರ ಎನ್‌ಎಸ್‌ಯುಐ ಸೇರಿ ಸುದೀರ್ಘವಾಗಿ 53 ವರ್ಷಗಳ ಕಾಲ ಕಾಂಗ್ರೆಸ್ ಪಕ್ಷದಲ್ಲಿ ವಿದ್ಯಾರ್ಥಿ ಘಟಕ, ಯುವ ಘಟಕ, ಬ್ಲಾಕ್ ಕಾಂಗ್ರೆಸ್, ಜಿಲ್ಲಾ ಕಾಂಗ್ರೆಸ್, ಕೆಪಿಸಿಸಿ ಕಾರ್ಯಾಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ.

1985ರಲ್ಲಿ ತಾವು ಬೆಂಗಳೂರಿನ ಕಾರ್ಪೊರೇಟರ್ ಆಗಿದ್ದೆ. ತಮ ತಂದೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿದ್ದರು. ಆ ವೇಳೆ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸಲು ಅರ್ಜಿ ಹಾಕಿದ್ದಾಗ ಆಗಿನ ಮುಖ್ಯಮಂತ್ರಿಯಾಗಿದ್ದ ವೀರಪ್ಪಮೊಯ್ಲಿ ಅವರು ತಮ್ಮನ್ನು ಕರೆದು ಕಾಂಗ್ರೆಸ್ ಟಿಕೆಟ್ ಕೊಟ್ಟರು.

# ಕೇದಾರನಾಥ ದರ್ಶನ ಸ್ಥಗಿತ

ನವದೆಹಲಿ: ಉತ್ತರಾಖಂಡದ ಪವಿತ್ರ ಕೇದಾರನಾಥ ಧಾಮಕ್ಕೆ ತೆರಳಲು ಯೋಜನೆ ಮಾಡಿಕೊಂಡಿದ್ದ ಭಕ್ತರಿಗೆ ಮಹತ್ವದ ಮಾಹಿತಿ ಹೊರಬಿದ್ದಿದೆ. ರಾಜ್ಯದ ಹಲವು ಪ್ರದೇಶಗಳಲ್ಲಿ ನಿರಂತರವಾಗಿ ಸುರಿಯುತ್ತಿರುವ ಭಾರೀ ಮಳೆ ಹಾಗೂ ಪ್ರತಿಕೂಲ ಹವಾಮಾನ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಕೇದಾರನಾಥ ಯಾತ್ರೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಯಾತ್ರಾ ಮಾರ್ಗಗಳಲ್ಲಿ ಭೂಕುಸಿತದ ಅಪಾಯ ಹೆಚ್ಚಾಗಿದ್ದು, ಕೆಲವೆಡೆ ರಸ್ತೆ ಸಂಪರ್ಕಕ್ಕೂ ಹಾನಿಯಾಗಿದೆ. ಭಕ್ತರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಸ್ಥಳೀಯ ಆಡಳಿತ, ವಿಪತ್ತು ನಿರ್ವಹಣಾ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ಈ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದಾರೆ.

ಕೇದಾರನಾಥ ಯಾತ್ರೆಗೆ ತೆರಳಲು ಸಿದ್ಧರಾಗಿರುವ ಭಕ್ತರು ಅಧಿಕೃತ ಪ್ರಕಟಣೆಗಳನ್ನು ಪರಿಶೀಲಿಸಿದ ನಂತರವೇ ಪ್ರಯಾಣ



ಆರಂಭಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಈಗಾಗಲೇ ಯಾತ್ರಾ ಮಾರ್ಗದಲ್ಲಿರುವವರು ಸುರಕ್ಷಿತ ಸ್ಥಳಗಳಲ್ಲಿ ತಂಗಿ, ಆಡಳಿತದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ. ಹವಾಮಾನ ಇಲಾಖೆ ಮುಂದಿನ ಕೆಲ ದಿನಗಳವರೆಗೆ ಭಾರೀ ಮಳೆಯ ಸಾಧ್ಯತೆ ಇದೆ ಎಂದು ಎಚ್ಚರಿಕೆ ನೀಡಿರುವ ಹಿನ್ನೆಲೆಯಲ್ಲಿ ಯಾತ್ರೆಯನ್ನು ತಾತ್ಕಾಲಿಕವಾಗಿ ನಿಲ್ಲಿಸಲಾಗಿದೆ. ಪರಿಸ್ಥಿತಿ ಸುಧಾರಿಸಿದ ಬಳಿಕ ಯಾತ್ರೆಯನ್ನು ಪುನರಾರಂಭಿಸುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗುತ್ತದೆ.

ಪ್ರತಿ ವರ್ಷ ಲಕ್ಷಾಂತರ ಭಕ್ತರು ಕೇದಾರನಾಥ ಧಾಮಕ್ಕೆ ಭೇಟಿ ನೀಡುತ್ತಾರೆ. ಆದರೆ ಮಳೆಗಾಲದಲ್ಲಿ ಪರ್ವತ ಪ್ರದೇಶಗಳಲ್ಲಿ ಭೂಕುಸಿತ, ರಸ್ತೆ ಕುಸಿತ, ಪ್ರವಾಹ ಹಾಗೂ ಕಲ್ಲುಗಳು ಉರುಳುವಂತಹ ಅಪಾಯಗಳು ಹೆಚ್ಚಾಗುತ್ತವೆ. ಈ ಕಾರಣದಿಂದ ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಯಾತ್ರೆಯನ್ನು ಸ್ಥಗಿತಗೊಳಿಸಲಾಗಿದೆ.

## ಶೇ.7.7ಕ್ಕೆ ತಲುಪಿದ ಜಿಡಿಪಿ

ನವದೆಹಲಿ: ಯುದ್ಧ ಹಾಗೂ ಜಾಗತಿಕ ಆರ್ಥಿಕ ಅನಿಶ್ಚಿತತೆಯ ನಡುವೆಯೂ ಭಾರತದ ಆರ್ಥಿಕತೆಯ ಬೆಳವಣಿಗೆ ಕಳೆದ ವರ್ಷಕ್ಕಿಂತ ಉತ್ತಮ ರೀತಿಯಲ್ಲಿದೆ. ದೇಶದ 2026ರ ವಾರ್ಷಿಕ ಜಿಡಿಪಿ ಬೆಳವಣಿಗೆ ಶೇಕಡಾ 7.7ಕ್ಕೆ ತಲುಪಿದೆ.

ಕಳೆದ ವರ್ಷ ಜಿಡಿಪಿ ಪ್ರಮಾಣ ಶೇಕಡ 7.1ರಷ್ಟಿತ್ತು. ಯುದ್ಧ ಹಾಗೂ ಜಾಗತಿಕ ಅಸ್ಥಿರತೆಯ ನಡುವೆಯೂ ಭಾರತ ತನ್ನ ಆರ್ಥಿಕ ಚೈತನ್ಯವನ್ನು ಗಟ್ಟಿಯಾಗಿ ಉಳಿಸಿಕೊಂಡಿದೆ ಎಂದು ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಅಂಕಿ ಅಂಶಗಳು ತಿಳಿಸುತ್ತಿವೆ. ಅಂಕಿ ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ನೀಡಿದ ಮಾಹಿತಿ ಪ್ರಕಾರ 2026 ಜನವರಿಯಿಂದ ಮಾರ್ಚ್‌ವರೆಗೆ ಶೇಕಡ 7.8ರಷ್ಟು ಆರ್ಥಿಕ ಬೆಳವಣಿಗೆ ಕಂಡು ಬಂದಿದೆ ಎಂದು ತಿಳಿಸಿದೆ.

2022–23ರಲ್ಲಿ ಜಿಡಿಪಿಯನ್ನು 2026ಕ್ಕೆ 323.12 ಲಕ್ಷ ಕೋಟಿಗೆ ತಲುಪಿಸುವ ಗುರಿ ಹೊಂದಲಾಗಿತ್ತು. ನಾಮಿನಲ್ ಜಿಡಿಪಿ 2025ರಲ್ಲಿ 318.07 ಲಕ್ಷ ಕೋಟಿ ರೂಪಾಯಿ ಇದ್ದಿದ್ದು, 2026ರ ಸಾಲಲ್ಲಿ 8.9ರಷ್ಟು ಹಣದುಬ್ಬರದ ನಡುವೆಯೂ 346.36 ಲಕ್ಷ ಕೋಟಿಗೆ ಹೆಚ್ಚಾಗಿದೆ.

## ಅಧಿಕಾರ ವಹಿಸಿಕೊಂಡ ಖಾದರ್

ಬೆಂಗಳೂರು: ಡಿ.ಕೆ. ನೂತನ ಸರ್ಕಾರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಯು.ಟಿ. ಖಾದರ್ ಅವರು ತಮ್ಮ ಇಲಾಖೆಯ ಆಡಳಿತ ಸುಧಾರಣೆಗೆ ಅಡಿ ಇಟ್ಟಿದ್ದಾರೆ.

ಖಾತೆ ವಹಿಸಿಕೊಂಡ ಬಳಿಕ ಸುದ್ದಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆರೋಗ್ಯ ಇಲಾಖೆಯನ್ನು ಕಟ್ಟ ಕಡೆಯ ವ್ಯವಸ್ಥೆಯಿಂದ ಸಬಲೀಕರಿಸಲು ಪ್ರಮುಖ ನಿರ್ಧಾರಗಳನ್ನು ಕೈಗೊಂಡಿರುವುದಾಗಿ ತಿಳಿದ್ದಾರೆ. ಆರೋಗ್ಯ ಕ್ಷೇತ್ರವು ಅತ್ಯಂತ ವಿಶಾಲವಾಗಿದ್ದು, ಸಾರ್ವಜನಿಕರ ಜೀವನದೊಂದಿಗೆ ನೇರ ಸಂಪರ್ಕ ಹೊಂದಿದೆ.

ಗ್ರಾಮೀಣ ಭಾಗದಲ್ಲಿ ವೈದ್ಯರ ಕೊರತೆ ಇರುಬ ಬಗ್ಗೆ ಮಾಹಿತಿ ಇದ್ದು, ವೈದ್ಯರ ಕೊರತೆ ನೀಗಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ. ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಹೊಸ ಆರೋಗ್ಯ ನೀತಿಗಳ ಜಾರಿ ಹಾಗೂ ಸರ್ಕಾರದ ಉಚಿತ ಚಿಕಿತ್ಸಾ ಯೋಜನೆಗಳನ್ನು ಪ್ರತಿಯೊಬ್ಬ ನಾಗರಿಕನಿಗೂ ತಲುಪಿಸುವುದು ನಮ್ಮ ಮುಖ್ಯ ಗುರಿಯಾಗಿದೆ ಎಂದರು.

ಗುರುವಾರದಿಂದಲೇ ವಿಧಾನಸೌಧದಲ್ಲಿ ಸಕ್ರಿಯರಾಗಿರುವ ಅವರು, ಮಾಜಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರ ಅವಧಿಯಲ್ಲಿ ಚಾಲ್ತಿಯಲ್ಲಿರುವ ಆರೋಗ್ಯ ಸಂಬಂಧಿ ಜನಪರ ಯೋಜನೆಗಳು ಮತ್ತು ಉತ್ತಮ ಕಾರ್ಯಕ್ರಮಗಳನ್ನು ಮುಂದುವರಿಸುವುದಾಗಿ ಹೇಳಿದ್ದಾರೆ. ಸಾರ್ವಜನಿಕರಿಗೆ ಯಾವುದೇ ಅಡೆತಡೆಯಿಲ್ಲದೆ ಇನ್ನಷ್ಟು ಸೌಲಭ್ಯಗಳೊಂದಿಗೆ ಇಲಾಖೆಯನ್ನು ಸಮರ್ಥವಾಗಿ ನಡೆಸಿಕೊಂಡು ಹೋಗುವುದಾಗಿ ತಿಳಿಸಿದ್ದಾರೆ. ಸರ್ಕಾರಿ ಆಸ್ಪತ್ರೆಗಳಿಗೆ ಬರುವ ಜನಸಾಮಾನ್ಯರಿಗೆ ಯಾವುದೇ ಸಮಸ್ಯೆ ಆಗದಂತೆ ಸರ್ಕಾರಿ ಮಟ್ಟದಲ್ಲಿ ಉಚಿತ ಹಾಗೂ ಉನ್ನತ ಮಟ್ಟದ ವೈದ್ಯಕೀಯ ಚಿಕಿತ್ಸೆ ಒದಗಿಸಲು ಕ್ರಮಗಳನ್ನು ಕೈಗೊಳ್ಳುತ್ತಿರುವುದಾಗಿ ಹೇಳಿದರು.

ಇಲಾಖೆಯ ಹೊಣೆ ಹೊರುತ್ತಿದ್ದಂತೆಯೇ 'ಆಯುಷ್ಮಾನ್ ಕರ್ನಾಟಕ' ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಯು.ಟಿ. ಖಾದರ್, ಬಡ ರೋಗಿಗಳಿಂದ ಹೆಚ್ಚುವರಿ ಹಣ ವಸೂಲಿ ಮಾಡುವ ಖಾಸಗಿ ಆಸ್ಪತ್ರೆಗಳ ದರ್ಪಕ್ಕೆ ಬ್ರೇಕ್ ಹಾಕಲು ಅಧಿಕಾರಿಗಳಿಗೆ ಸೂಚಿಸಿದರು. ರಾಜ್ಯದಲ್ಲಿರುವ ಅಂತಹ ಆಸ್ಪತ್ರೆಗಳ ವಿರುದ್ಧ ನಿಗಾ ಇರಿಸಿ, ಕಾನೂನು ಕ್ರಮ ಜರುಗಿಸಲು ಅಧಿಕಾರಿಗಳಿಗೆ ಸಲಹೆಗಳನ್ನು ನೀಡಿದರು. ಅವರಿಗೆ ನೇಮಕಾತಿ ಆದೇಶ ಪತ್ರ ನೀಡಿ ಆಸ್ಪತ್ರೆಗಳಿಗೆ ನಿಯೋಜಿಸಬೇಕು ಎಂದು ಅಧಿಕಾರಿಗಳಿಗೆ ಗಡುವು ನೀಡಿರುವುದಾಗಿ ತಿಳಿಸಿದರು.

# ದಂಡ ಪಾವತಿಗೆ ಮತ್ತೆ ಶೇ.50ರಷ್ಟು ಮೀಸಲಾತಿ

ಬೆಂಗಳೂರು: ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಇತ್ಯರ್ಥಪಡಿಸಲು ರಾಜ್ಯ ಸರ್ಕಾರ ಮತ್ತೊಮ್ಮೆ ಮಹತ್ವದ ನಿರ್ಧಾರ ಕೈಗೊಂಡಿದ್ದು, ಸಂಚಾರ ಇ–ಚಲನ್ ಹಾಗೂ ಸಾರಿಗೆ ಇಲಾಖೆಯ ಹಳೆಯ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿದೆ.

ಈ ಬಗ್ಗೆ ಸಾರಿಗೆ ಇಲಾಖೆಯ ಅಧೀನ ಕಾರ್ಯದರ್ಶಿ ಪುಷ್ಪ ವಿ.ಎಸ್. ಅವರು ಆದೇಶ ಹೊರಡಿಸಿದ್ದಾರೆ. 2026ರ ಮೇ ತಿಂಗಳ ಮೊದಲು ಪೊಲೀಸ್ ಇಲಾಖೆಯ ಸಂಚಾರ ಇ–ಚಲನ್‌ನಲ್ಲಿ ದಾಖಲಾಗಿರುವ ಮತ್ತು ಪಾವತಿಯಾಗದೆ ಬಾಕಿ ಇರುವ ಪ್ರಕರಣಗಳಿಗೆ ರಿಯಾಯಿತಿ



ಅನ್ವಯವಾಗಲಿದೆ. ಅಲ್ಲದೇ, ಸಾರಿಗೆ ಇಲಾಖೆಯಲ್ಲಿ 1991ರಿಂದ 2022ರ ಅವಧಿಯಲ್ಲಿ ದಾಖಲಾಗಿದ್ದು, ಬಾಕಿ ಉಳಿದಿರುವ ಪ್ರಕರಣಗಳಿಗೂ ಶೇ.50 ರಷ್ಟು ದಂಡ ವಿನಾಯಿತಿ ನೀಡಲಾಗಿದೆ ಎಂದು ಅವರು ಆದೇಶದಲ್ಲಿ ಉಲ್ಲೇಖಿಸಿದ್ದಾರೆ.

ಸಂಚಾರ ನಿಯಮ ಉಲ್ಲಂಘನೆ ಪ್ರಕರಣದಲ್ಲಿ ಬಾಕಿ ಇರುವ ದಂಡದ ಮೊತ್ತವನ್ನು ಪಾವತಿಸಲು ವಾಹನ ಮಾಲೀಕರಿಗೆ ಜೂ. 21ರಿಂದ ಜು.10ರವರೆಗೆ ಕಾಲಾವಕಾಶ ನೀಡಲಾಗಿದೆ. ಈ ಅವಧಿಯಲ್ಲಿ ಬಾಕಿ ದಂಡದ ಅರ್ಧ ಮೊತ್ತ ಪಾವತಿಸುವ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

ಈ ಹಿಂದೆ ರಾಜ್ಯ ಸರ್ಕಾರವು, ಹಲವು ಬಾರಿ ಇ–ಚಲನ್ ಪ್ರಕರಣಗಳಿಗೆ ಶೇ.50 ರಷ್ಟು ರಿಯಾಯಿತಿ ಘೋಷಿಸಿತ್ತು. 2025ರ ನವೆಂಬರ್‌ನಲ್ಲಿ ನೀಡಿದ್ದ ರಿಯಾಯಿತಿಯ ಅವಧಿಯಲ್ಲಿ ಪೊಲೀಸ್ ಇಲಾಖೆಯ ಸುಮಾರು 77.41 ಲಕ್ಷ ಪ್ರಕರಣಗಳು ಇತ್ಯರ್ಥಗೊಂಡಿದ್ದು, ಇದರಿಂದ ಸುಮಾರು 201 ಕೋಟಿ ರೂ.ದಂಡದ ಮೊತ್ತ ಸಂಗ್ರಹವಾಗಿತ್ತು. ಇದೇ ವೇಳೆ, ಸಾರಿಗೆ ಇಲಾಖೆಯ 902 ಪ್ರಕರಣಗಳು ಇತ್ಯರ್ಥಗೊಂಡು ಸುಮಾರು 29.66 ಲಕ್ಷ ರೂ.ದಂಡ ಪಾವತಿಯಾಗಿತ್ತು.

ಇ–ಚಲನ್ ಎಂಬುದು ಸಂಚಾರಿ ನಿಯಮಗಳ ಉಲ್ಲಂಘನೆ ಹಾಗೂ ದಂಡದ ವಿವರಗಳನ್ನೊಳಗೊಂಡ ಡಿಜಿಟಲ್ ದಾಖಲೆ. ಇದನ್ನು ಪಡೆಯಲು ಸಂಚಾರಿ ಪೊಲೀಸ್ ಸಿಬ್ಬಂದಿ ನಿರ್ದಿಷ್ಟ ಸ್ವೈಪಿಂಗ್ ಸಾಧನ ಹೊಂದಿರಲಿದ್ದಾರೆ. ಸಂಚಾರ ನಿಯಮ ಉಲ್ಲಂಘನೆಗೆ ಇ–ಚಲನ್ ಮೂಲಕ ಚಲನ್ ಪಡೆದಾಗ ಪೊಲೀಸ್ ಇಲಾಖೆಯ ಸರ್ವರ್ ನಲ್ಲಿಯೂ ಇದು ದಾಖಲಿಸಲ್ಪಡುತ್ತದೆ.

ಇದರಿಂದಾಗಿ ಲಂಚ ಪಡೆದು ರಶೀದಿ ರದ್ದು ಮಾಡಲು (ಹರಿದು ಹಾಕಲು) ಸಾಧ್ಯವಾಗುವುದಿಲ್ಲ. ಸಂಚಾರ ನಿರ್ವಹಣೆಯನ್ನು ಡಿಜಿಟಲೀಕರಣಗೊಳಿಸುವ ಹಾಗೂ ಪಾರದರ್ಶಕತೆಯನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಇದು ಕಾಗದರಹಿತ ಹಾಗೂ ಕೆಲಸವನ್ನು ತಗ್ಗಿಸಲಿದೆ.

ಸದ್ಯ ಈ ವ್ಯವಸ್ಥೆಗಾಗಿ ಎಸ್‌ಬಿಐ ಬ್ಯಾಂಕ್ ನೊಂದಿಗೆ ರಾಜ್ಯ ಪೊಲೀಸ್ ಇಲಾಖೆಯು ಒಪ್ಪಂದ ಮಾಡಿಕೊಂಡಿದ್ದು, ವಾಹನ ಸವಾರರು ಪಾವತಿಸುವ ಹಣ ನೇರವಾಗಿ ಇಲಾಖೆಯ ಅಧಿಕೃತ ಖಾತೆಗೆ ಜಮೆಯಾಗಲಿದೆ.

ಭಾರತ ಸಾರಥಿ
06/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ದಿ ಒಡಿಸ್ಸಿ’ಗೆ ಭಾರತದಲ್ಲಿ ಐಮ್ಯಾಕ್ಸ್ ಅಡ್ವಾನ್ಸ್ ಬುಕಿಂಗ್ ಆರಂಭ

ಬೆಂಗಳೂರು

ಖ್ಯಾತ ನಿರ್ದೇಶಕ ಕ್ರಿಸ್ಟೋಫರ್ ನೋಲನ್ ಅವರ ಬಹುನಿರೀಕ್ಷಿತ ಪೌರಾಣಿಕ ಆಕ್ಷನ್ ಮಹಾಕಾವ್ಯ ಚಿತ್ರ ‘ದಿ ಒಡಿಸ್ಸಿ’ಗೆ ಭಾರತದಲ್ಲಿ ಐಮ್ಯಾಕ್ಸ್ ಅಡ್ವಾನ್ಸ್ ಬುಕಿಂಗ್ ಜೂನ್ 8ರಿಂದ ಆರಂಭವಾಗಲಿದೆ.




ಜುಲೈ 17, 2026ರಂದು ವಿಶ್ವದಾದ್ಯಂತ ಬಿಡುಗಡೆಯಾಗಲಿರುವ ಈ ಚಿತ್ರ, ಸಂಪೂರ್ಣವಾಗಿ ಐಮ್ಯಾಕ್ಸ್ ಕ್ಯಾಮೆರಾಗಳಲ್ಲಿ ಚಿತ್ರೀಕರಿಸಲಾದ ವಿಶ್ವದ ಮೊದಲ ಸಿನಿಮಾ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಹೊಚ್ಚ ಹೊಸ ಐಮ್ಯಾಕ್ಸ್ ಚಲನಚಿತ್ರ ತಂತ್ರಜ್ಞಾನವನ್ನು ಬಳಸಿ ಪ್ರಪಂಚದ ವಿವಿಧ ಭಾಗಗಳಲ್ಲಿ ಚಿತ್ರವನ್ನು ನಿರ್ಮಿಸಲಾಗಿದೆ.

ಅಕಾಡೆಮಿ ಪ್ರಶಸ್ತಿ ವಿಜೇತ ನಿರ್ದೇಶಕ ಕ್ರಿಸ್ಟೋಫರ್ ನೋಲನ್ ಬರೆದು ನಿರ್ದೇಶಿಸಿರುವ ಈ ಸಿನಿಮಾ, ಹೋಮರ್ ರಚಿಸಿದ ಪೌರಾಣಿಕ ಮಹಾಕಾವ್ಯ ‘ಒಡಿಸ್ಸಿ’ ಆಧಾರಿತವಾಗಿದೆ. ಟ್ರಾಯ್ ಯುದ್ಧದ ನಂತರ ಇಥಾಕಾದ ರಾಜ ಒಡಿಸ್ಸಿಯಸ್ ಮನೆಗೆ ಮರಳುವ ಅಪಾಯಕಾರಿ ಪಯಣವನ್ನು ಚಿತ್ರದಲ್ಲಿ ಅನಾವರಣಗೊಳಿಸಲಾಗಿದೆ.

ಚಿತ್ರದಲ್ಲಿ ಹಾಲಿವುಡ್ ನಟ ಮ್ಯಾಟ್ ಡ್ಯಾಮನ್ ಒಡಿಸ್ಸಿಯಸ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದು, ಟಾಮ್ ಹಾಲೆಂಡ್ ಟೆಲಿಮಾಕಸ್ ಪಾತ್ರ ನಿರ್ವಹಿಸಿದ್ದಾರೆ.

ಪೆನೆಲೋಪ್ ಪಾತ್ರದಲ್ಲಿ ಆನ್ ಹ್ಯಾಥ್ವೇ ನಟಿಸಿದ್ದು, ಝೆಂಡಾಯಾ, ರಾಬರ್ಟ್ ಪ್ಯಾಟಿನ್ಸನ್, ಲುಪಿಟಾ ನ್ಯೊಂಗೊ, ಚಾರ್ಲಿಜ್ ಥೆರಾನ್ ಮತ್ತು ಜಾನ್ ಬರ್ನ್‌ಥಾಲ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.

ವಾರ್ನರ್ ಬ್ರದರ್ಸ್ ಡಿಸ್ಕವರಿ ಇಂಡಿಯಾದ ಉಪಾಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಡೆನ್ಜಿಲ್ ಡಯಾಸ್ ಮಾತನಾಡಿ, “ಸಂಪೂರ್ಣವಾಗಿ ಐಮ್ಯಾಕ್ಸ್ ಕ್ಯಾಮೆರಾಗಳಲ್ಲಿ ಚಿತ್ರೀಕರಿಸಲಾದ ಮೊದಲ ಚಿತ್ರ ‘ದಿ ಒಡಿಸ್ಸಿ’ ಕ್ರಿಸ್ಟೋಫರ್ ನೋಲನ್ ಅವರ ಸುಮಾರು ಎರಡು ದಶಕಗಳ ಕನಸಿನ ಯೋಜನೆ. ಭಾರತದಲ್ಲಿನ ಅಭಿಮಾನಿಗಳು ಜೂನ್ 8ರಿಂದಲೇ ವಿಶ್ವದ ಇತರ ಅಭಿಮಾನಿಗಳೊಂದಿಗೆ ತಮ್ಮ ಆಸನಗಳನ್ನು ಮುಂಗಡವಾಗಿ ಕಾಯ್ದಿರಿಸಬಹುದಾಗಿದೆ” ಎಂದು ಹೇಳಿದರು.

# “ಇಂಡಿಯನ್ ಆರ್ಟಿಸನ್ಸ್ ಬಜಾರ್” ಉದ್ಘಾಟನೆ

ಬೆಂಗಳೂರು

ಗ್ರ್ಯಾಂಡ್ ಫ್ಲೀ ಮಾರ್ಕೆಟ್ ಆಯೋಜಿಸಿದ್ದ “ಇಂಡಿಯನ್ ಆರ್ಟಿಸನ್ಸ್ ಬಜಾರ್” ಪ್ರದರ್ಶನವನ್ನು ಇಂದು ಬೆಂಗಳೂರಿನ ಕರ್ನಾಟಕ ಚಿತ್ರಕಲಾ ಪರಿಷತ್ ಆವರಣದಲ್ಲಿ ಖ್ಯಾತ ಲೈಫ್‌ಸ್ಟೈಲ್ ಕ್ರಿಯೇಟರ್ ಪ್ರಿಯಾಂಕಾ ಅಗರ್ವಾಲ್ ಉದ್ಘಾಟಿಸಿದರು.



ಭಾರತದ ವಿವಿಧ ಭಾಗಗಳಿಂದ ಆಗಮಿಸಿದ ಕುಶಲಕರ್ಮಿಗಳು, ಕಲಾವಿದರು ಹಾಗೂ ಸಣ್ಣ ಉದ್ಯಮಿಗಳಿಗೆ ತಮ್ಮ ಕೈಚಳಕದ ಉತ್ಪನ್ನಗಳನ್ನು ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಈ ಮೇಳವು ಉತ್ತಮ ವೇದಿಕೆಯನ್ನು ಒದಗಿಸಿದೆ. ಹಸ್ತಕಲಾ ವಸ್ತುಗಳು, ಸಾಂಪ್ರದಾಯಿಕ ಉತ್ಪನ್ನಗಳು, ಆಭರಣಗಳು, ಗೃಹ ಅಲಂಕಾರ ವಸ್ತುಗಳು, ಉಡುಪುಗಳು ಸೇರಿದಂತೆ ವಿವಿಧ ಉತ್ಪನ್ನಗಳು ಪ್ರದರ್ಶನದಲ್ಲಿ ಗಮನ ಸೆಳೆದವು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಿಯಾಂಕಾ ಅಗರ್ವಾಲ್, ಭಾರತೀಯ ಕಲಾವಿದರು ಮತ್ತು ಕುಶಲಕರ್ಮಿಗಳಿಗೆ ಉತ್ತೇಜನ ನೀಡುವ ಇಂತಹ ಕಾರ್ಯಕ್ರಮಗಳ ಅಗತ್ಯತೆಯನ್ನು ಒತ್ತಿ ಹೇಳಿದರು. ಸ್ಥಳೀಯವಾಗಿ ತಯಾರಾಗುವ ಕೈಚಳಕದ ಉತ್ಪನ್ನಗಳನ್ನು ಖರೀದಿಸುವ ಮೂಲಕ ಕಲಾವಿದರನ್ನು ಬೆಂಬಲಿಸುವಂತೆ ಸಾರ್ವಜನಿಕರಿಗೆ ಕರೆ ನೀಡಿದರು.

ಉದ್ಘಾಟನಾ ದಿನವೇ ಪ್ರದರ್ಶನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಅನೇಕ ಸಂದರ್ಶಕರು ಮತ್ತು ಖರೀದಿದಾರರು ಭಾಗವಹಿಸಿದರು. ಪ್ರದರ್ಶನದಲ್ಲಿ ಭಾಗವಹಿಸಿದ ಕಲಾವಿದರು ಮತ್ತು ಉದ್ಯಮಿಗಳು ಕಾರ್ಯಕ್ರಮದ ಬಗ್ಗೆ ಸಂತಸ ವ್ಯಕ್ತಪಡಿಸಿದರು.

ಈ ಬಜಾರ್ ಜೂನ್ 14, 2026ರವರೆಗೆ ನಡೆಯಲಿದ್ದು, ಸಾರ್ವಜನಿಕರಿಗೆ ವಿವಿಧ ರೀತಿಯ ಹಸ್ತಕಲಾ ಹಾಗೂ ಸೃಜನಾತ್ಮಕ ಉತ್ಪನ್ನಗಳನ್ನು ವೀಕ್ಷಿಸಿ ಖರೀದಿಸಲು ಅವಕಾಶ ಕಲ್ಪಿಸಿದೆ.

# ಕರ್ನಾಟಕಕ್ಕೆ ‘ವಿಕಾಸಶೀಲ ಇನ್ಸಾನ್ ಪಾರ್ಟಿ’ ಅಧಿಕೃತ ಎಂಟ್ರಿ

ಬೆಂಗಳೂರು

ಕರ್ನಾಟಕ ರಾಜಕೀಯ ಅಂಗಳಕ್ಕೆ ಮತ್ತೊಂದು ಹೊಸ ರಾಜಕೀಯ ಪಕ್ಷ ಅಧಿಕೃತವಾಗಿ ಪದಾರ್ಪಣೆ ಮಾಡಿದ್ದು, ಅತಿ ಹಿಂದುಳಿದ ವರ್ಗಗಳ ಧ್ವನಿಯನ್ನು ಶಾಸನಸಭೆಯಲ್ಲಿ ಪ್ರತಿನಿಧಿಸುವ ಉದ್ದೇಶದೊಂದಿಗೆ ‘ವಿಕಾಸಶೀಲ ಇನ್ಸಾನ್ ಪಾರ್ಟಿ’ ತನ್ನ ರಾಜಕೀಯ ಪಯಣ ಆರಂಭಿಸಿದೆ.



ರಾಜ್ಯದಲ್ಲಿ ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ನಡುವೆ ಹೊಸ ರಾಜಕೀಯ ಶಕ್ತಿಯಾಗಿ ಹೊರಹೊಮ್ಮುವ ಗುರಿ ಹೊಂದಿರುವ ಪಕ್ಷ, ಸಂಘಟನೆ ಬಲವರ್ಧನೆಗಾಗಿ ರಾಜ್ಯದ ನಾಲ್ಕೂ ಕಂದಾಯ ವಿಭಾಗಗಳಲ್ಲಿ ಸರಣಿ ಪತ್ರಿಕಾಗೋಷ್ಠಿಗಳನ್ನು ನಡೆಸುತ್ತಿದೆ.

ಈ ಅಭಿಯಾನದ ಭಾಗವಾಗಿ, ಜೂನ್ 7ರಂದು ಬೆಂಗಳೂರಿನ ಪ್ರತಿಷ್ಠಿತ ಅಶೋಕ ಹೋಟೆಲ್‌ನಲ್ಲಿ ಪಕ್ಷದ ಬೃಹತ್ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಪಕ್ಷದ ಉದ್ದೇಶಗಳು ಮತ್ತು ಮುಂದಿನ ರಾಜಕೀಯ ರೂಪುರೇಷೆಗಳ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಪಕ್ಷದ ರಾಜ್ಯ ಉಪಾಧ್ಯಕ್ಷ ಮೋಹನ್ ಕುಮಾರ್ ಬಿ.ಕೆ., “ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಸಮರ್ಪಕ ರಾಜಕೀಯ ಪ್ರಾತಿನಿಧ್ಯ ಸಿಗುತ್ತಿಲ್ಲ. ಇದೇ ಕಾರಣಕ್ಕಾಗಿ ಅತಿ ಹಿಂದುಳಿದ ಸಮುದಾಯಗಳ ಧ್ವನಿಯಾಗಲು ಪಕ್ಷ ಸ್ಥಾಪಿಸಲಾಗಿದೆ” ಎಂದು ಹೇಳಿದರು.

ಮಹರ್ಷಿ ವಾಲ್ಮೀಕಿ, ಅಂಬಿಗರ ಚೌಡಯ್ಯ, ಬಸವಣ್ಣ, ಬುದ್ಧ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವ ಮತ್ತು ಆದರ್ಶಗಳ ಆಧಾರದ ಮೇಲೆ ಪಕ್ಷವನ್ನು ಮುನ್ನಡೆಸಲಾಗುವುದು ಎಂದು ಅವರು ತಿಳಿಸಿದರು.

“ರಾಜ್ಯದಲ್ಲಿ ಕೋಲಿ, ಗಂಗಾಮತ ಮತ್ತು ಬೆಸ್ತ ಸಮುದಾಯಗಳ ಜನಸಂಖ್ಯೆ ಸುಮಾರು 60 ರಿಂದ 70 ಲಕ್ಷದಷ್ಟಿದೆ. ಆದರೆ ಇಷ್ಟು ದೊಡ್ಡ ಸಮುದಾಯಕ್ಕೆ ಶಾಸನಸಭೆಯಲ್ಲಿ ಸಮರ್ಪಕ ಪ್ರಾತಿನಿಧ್ಯವಿಲ್ಲ. ಇದು ಅತ್ಯಂತ ಬೇಸರದ ಸಂಗತಿ” ಎಂದು ಅವರು ಅಭಿಪ್ರಾಯಪಟ್ಟರು.

ಕಳೆದ ಹಲವು ದಶಕಗಳಿಂದ ಪ್ರಮುಖ ರಾಜಕೀಯ ಪಕ್ಷಗಳು ಹಿಂದುಳಿದ ವರ್ಗಗಳನ್ನು ಕೇವಲ ಮತ ಬ್ಯಾಂಕ್ ಆಗಿ ಬಳಸಿಕೊಂಡು ಅಧಿಕಾರಕ್ಕೆ ಬಂದ ಬಳಿಕ ನಿರ್ಲಕ್ಷ್ಯ ಮಾಡಿವೆ. ಪ್ರಬಲ ಸಮುದಾಯಗಳೇ ಅಧಿಕಾರದ ಪಾಲು ಹಂಚಿಕೊಂಡಿದ್ದು, ಅತಿ ಹಿಂದುಳಿದ ಮತ್ತು ಅಲೆಮಾರಿ ಸಮುದಾಯಗಳು ರಾಜಕೀಯವಾಗಿ ಕಡೆಗಣನೆಗೆ ಒಳಗಾಗಿವೆ ಎಂದು ಆರೋಪಿಸಿದರು.

ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಯಾವುದೇ ಸರ್ಕಾರ ರಚನೆಯಾಗಬೇಕಾದರೂ ತಮ್ಮ ಪಕ್ಷದ ಬೆಂಬಲ ನಿರ್ಣಾಯಕವಾಗಲಿದೆ ಎಂಬ ವಿಶ್ವಾಸವನ್ನೂ ಪಕ್ಷದ ನಾಯಕರು ವ್ಯಕ್ತಪಡಿಸಿದರು.

# ವೋಗ್ ಐವೇರ್ ಪ್ರಚಾರ ರಾಯಭಾರಿಯಾಗಿ ಕೃತಿ ಸನೋನ್ ಸೇರ್ಪಡೆ

ಬೆಂಗಳೂರು

ಫ್ಯಾಷನ್ ಮತ್ತು ಸ್ವಯಂ-ಅಭಿವ್ಯಕ್ತಿಯ ಪ್ರತೀಕವಾಗಿರುವ ವೋಗ್ ಐವೇರ್ ತನ್ನ ಹೊಸ ಬ್ರಾಂಡ್ ಅಭಿಯಾನ “ವೋಗ್ ಐವೇರ್ ಜರ್ನೀಸ್” ಅನ್ನು ಅನಾವರಣಗೊಳಿಸಿದ್ದು, ಖ್ಯಾತ ನಟಿ ಕೃತಿ ಸನೋನ್ ಅವರನ್ನು ಮಹಿಳಾ ಬ್ರಾಂಡ್ ರಾಯಭಾರಿಯಾಗಿ ಘೋಷಿಸಿದೆ. ನಟ ಶಾಹಿದ್ ಕಪೂರ್ ಬ್ರಾಂಡ್ ಜೊತೆಗಿನ ತಮ್ಮ ದೀರ್ಘಕಾಲದ ಬಾಂಧವ್ಯವನ್ನು ಮುಂದುವರಿಸಿದ್ದಾರೆ.

ಹೊಸ ತಲೆಮಾರಿನ ವೈಯಕ್ತಿಕತೆ, ಆತ್ಮವಿಶ್ವಾಸ ಮತ್ತು ಸ್ವಯಂ-ಅಭಿವ್ಯಕ್ತಿಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಉದ್ದೇಶದಿಂದ ಈ ಅಭಿಯಾನ ರೂಪಿಸಲಾಗಿದೆ.



“ಫ್ಯಾಷನಬಲ್, ರಿಲೇಟಬಲ್ ಮತ್ತು ಥಾಟ್‌ಫುಲ್” ಪರಿಕಲ್ಪನೆಯೊಂದಿಗೆ ಮೂಡಿಬಂದಿರುವ ಈ ಅಭಿಯಾನ ಜೀವನದ ವಿವಿಧ ಹಂತಗಳಲ್ಲಿ ವ್ಯಕ್ತಿಯ ಸ್ವ-ಆವಿಷ್ಕಾರ ಮತ್ತು ಶೈಲಿಯ ಪಯಣವನ್ನು ಬಿಂಬಿಸುತ್ತದೆ.

ರಾಷ್ಟ್ರಪ್ರಶಸ್ತಿ ಪುರಸ್ಕೃತ ನಟಿ ಕೃತಿ ಸನೋನ್, ತಮ್ಮ ವಿಶಿಷ್ಟ ಶೈಲಿ ಮತ್ತು ಯುವಜನರೊಂದಿಗೆ ಹೊಂದಿರುವ ಆಪ್ತ ಸಂಪರ್ಕದ ಮೂಲಕ ವೋಗ್ ಐವೇರ್‌ಗೆ ಸಮಕಾಲೀನ ಸ್ಪರ್ಶ ನೀಡಿದ್ದಾರೆ. ಯುವ ಮತ್ತು ಫ್ಯಾಷನ್ ಪ್ರಜ್ಞೆಯ ಪ್ರೇಕ್ಷಕರೊಂದಿಗೆ ಅವರ ಪ್ರಭಾವಿ ಸಂಪರ್ಕ ಬ್ರಾಂಡ್‌ನ ಮೌಲ್ಯಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಕಂಪನಿ ತಿಳಿಸಿದೆ.

ಈ ಹೊಸ ಅಭಿಯಾನವು “ಫ್ಯಾಷನ್ ಎಂದರೆ ಕೇವಲ ಸ್ಥಿರ ರೂಪವಲ್ಲ; ಅದು ಸ್ವಯಂ-ಆವಿಷ್ಕಾರದ ಪಯಣ” ಎಂಬ ಸಂದೇಶವನ್ನು ಸಾರುತ್ತದೆ. ಅಭಿಯಾನದಲ್ಲಿ ಪ್ರಮುಖ ಪಾತ್ರ ತನ್ನದೇ ವಿಭಿನ್ನ ಆವೃತ್ತಿಗಳನ್ನು ಅನ್ವೇಷಿಸುವ ಮೂಲಕ ಆತ್ಮಪರಿಚಯದ ಹುಡುಕಾಟದಲ್ಲಿ ತೊಡಗಿರುವಂತೆ ಚಿತ್ರಿಸಲಾಗಿದೆ.

# ಡಿಜಿಟಲ್ ಆಡಳಿತಕ್ಕೆ ಹೊಸ ಬಲ

ಬೆಂಗಳೂರು

ಸಂಪರ್ಕಿತ ಹಾಗೂ ನಾಗರಿಕ ಕೇಂದ್ರಿತ ಡಿಜಿಟಲ್ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಛತ್ತೀಸ್‌ಗಢ ಮಾಹಿತಿ ತಂತ್ರಜ್ಞಾನ ಪ್ರೋತ್ಸಾಹ ಸಂಸ್ಥೆ, ವಿಶ್ವದ ಪ್ರಮುಖ ಕೃತಕ ಬುದ್ಧಿಮತ್ತೆ ಆಧಾರಿತ ಗ್ರಾಹಕ ನಿರ್ವಹಣಾ ಸಂಸ್ಥೆಯಾದ ಸೇಲ್ಸ್‌ಫೋರ್ಸ್ ಜೊತೆಗೆ ಕಾರ್ಯತಂತ್ರದ ಸಹಭಾಗಿತ್ವ ಘೋಷಿಸಿದೆ.

ಈ ಸಹಭಾಗಿತ್ವದಡಿ ರಾಜ್ಯದ ಏಕೀಕೃತ ಅನ್ವಯ ಕಾರ್ಯಕ್ರಮ ಸಂಪರ್ಕ ವ್ಯವಸ್ಥೆ ಆಧಾರಿತ ದತ್ತಾಂಶ ವಿನಿಮಯ ವೇದಿಕೆಯಾದ “ಡಿಜಿಟಲ್ ದ್ವಾರ”ಕ್ಕೆ “ಮ್ಯೂಲ್‌ಸಾಫ್ಟ್” ತಾಂತ್ರಿಕ ಬೆನ್ನೆಲುಬಾಗಿ ಕಾರ್ಯನಿರ್ವಹಿಸಲಿದೆ.

ಭಾರತ ಸರ್ಕಾರದ “ಡಿಜಿಟಲ್ ಇಂಡಿಯಾ” ಪರಿಕಲ್ಪನೆಗೆ ಅನುಗುಣವಾಗಿ, ವಿವಿಧ ಸರ್ಕಾರಿ ಇಲಾಖೆಗಳ ನಡುವೆ ತಡೆರಹಿತ ದತ್ತಾಂಶ ವಿನಿಮಯಕ್ಕೆ ಅನುಕೂಲವಾಗುವ ಸಂಪರ್ಕಿತ ಹಾಗೂ ಜನಸ್ನೇಹಿ ಆಡಳಿತ ವ್ಯವಸ್ಥೆ ನಿರ್ಮಿಸುವ ಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ.

ರಾಜ್ಯದಲ್ಲಿ ಡಿಜಿಟಲ್ ಪರಿವರ್ತನೆ ವೇಗವಾಗಿ ನಡೆಯುತ್ತಿದ್ದರೂ, ವಿಭಜಿತ ವ್ಯವಸ್ಥೆಗಳು ಹಾಗೂ ಕೈಯಾರೆ ನಡೆಯುತ್ತಿದ್ದ ದತ್ತಾಂಶ ಸಮನ್ವಯ ಪ್ರಕ್ರಿಯೆಗಳು ಪರಿಣಾಮಕಾರಿ ಆಡಳಿತಕ್ಕೆ ಅಡ್ಡಿಯಾಗುತ್ತಿದ್ದವು. ಈ ಹಿನ್ನೆಲೆಯಲ್ಲಿ ಛತ್ತೀಸ್‌ಗಢ ಮಾಹಿತಿ ತಂತ್ರಜ್ಞಾನ ಪ್ರೋತ್ಸಾಹ ಸಂಸ್ಥೆಯು “ಮ್ಯೂಲ್‌ಸಾಫ್ಟ್” ಆಧಾರಿತ ಸಂಪರ್ಕ ವ್ಯವಸ್ಥೆಯನ್ನು ಅಳವಡಿಸಿಕೊಂಡಿದೆ.

ಈ ಹೊಸ ವ್ಯವಸ್ಥೆಯಡಿ “ಡಿಜಿಟಲ್ ದ್ವಾರ”ವನ್ನು ಕೇಂದ್ರೀಕೃತ ದತ್ತಾಂಶ ವಿನಿಮಯ ವೇದಿಕೆಯಾಗಿ ರೂಪಿಸಲಾಗಿದ್ದು, ರಾಜ್ಯದ ಎಲ್ಲಾ ಇಲಾಖೆಗಳು ಒಂದೇ ನಿಯಂತ್ರಿತ ವೇದಿಕೆಯ ಮೂಲಕ ಮಾಹಿತಿ ಸೇವೆಗಳನ್ನು ಹಂಚಿಕೊಳ್ಳಲು ಹಾಗೂ ಬಳಸಿಕೊಳ್ಳಲು ಸಾಧ್ಯವಾಗಲಿದೆ.

# ಪರಿಸರ ಸಂರಕ್ಷಣೆಯಲ್ಲಿ ವೇದಾಂತ ಮಹತ್ವದ ಸಾಧನೆ

ಬೆಂಗಳೂರು

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ವೇದಾಂತ ಐರನ್ ಆಂಡ್ ಸ್ಟೀಲ್ ಲಿಮಿಟೆಡ್ ಸಂಸ್ಥೆ, ತನ್ನ ವಿವಿಧ ಸುಸ್ಥಿರತಾ ಯೋಜನೆಗಳ ಮೂಲಕ ಸುಮಾರು 2.5 ಮಿಲಿಯನ್ ಟನ್ ಕಾರ್ಬನ್ ಹೊರಸೂಸುವಿಕೆಯನ್ನು ಕಡಿಮೆ ಮಾಡುವಲ್ಲಿ ಯಶಸ್ವಿಯಾಗಿದೆ ಎಂದು ಘೋಷಿಸಿದೆ.



ಸಂಸ್ಥೆಯು ಕೈಗೊಂಡಿರುವ ಪರಿಸರ ಸ್ನೇಹಿ ಕ್ರಮಗಳು ಪರಿಸರ ವ್ಯವಸ್ಥೆಗಳ ಪುನಶ್ಚೇತನ, ನವೀಕರಿಸಬಹುದಾದ ಇಂಧನ ಬಳಕೆ, ಸ್ವಚ್ಛ ಕೈಗಾರಿಕಾ ಪದ್ಧತಿಗಳ ಅನುಷ್ಠಾನ ಹಾಗೂ ಸಂಪನ್ಮೂಲ ದಕ್ಷತೆಯತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ತಿಳಿಸಿದೆ.

ವಿಶ್ವ ಪರಿಸರ ದಿನದ ಅಂಗವಾಗಿ ಬಿಡುಗಡೆ ಮಾಡಿರುವ ಪ್ರಕಟಣೆಯಲ್ಲಿ, ಕಡಿಮೆ ಕಾರ್ಬನ್ ಭವಿಷ್ಯ ನಿರ್ಮಾಣದತ್ತ ತನ್ನ ಬದ್ಧತೆಯನ್ನು ವಿಐಎಸ್‌ಎಲ್ ಪುನರುಚ್ಚರಿಸಿದ್ದು, ಸಾಂಪ್ರದಾಯಿಕ ಗಣಿಗಾರಿಕೆ ಮತ್ತು ಲೋಹ ಉದ್ಯಮದಲ್ಲಿಯೂ ಸುಸ್ಥಿರ ಅಭಿವೃದ್ಧಿ ಸಾಧ್ಯ ಎಂಬುದನ್ನು ತೋರಿಸಿಕೊಟ್ಟಿದೆ. ಸಂಸ್ಥೆಯ ಪರಿಸರ ಸ್ನೇಹಿ ಉಪಕ್ರಮಗಳ ಕುರಿತು ಮಾತನಾಡಿದ ವಿಐಎಸ್‌ಎಲ್ ಸಿಇಒ ಪಂಕಜ್ ಕುಮಾರ್ ಶರ್ಮಾ, “ಸುಸ್ಥಿರ ಭವಿಷ್ಯದತ್ತ ಸಾಗಬೇಕಾದರೆ ಕೈಗಾರಿಕೆಗಳು ಕಚ್ಚಾ ವಸ್ತುಗಳ ಸಾಗಣೆ, ಇಂಧನ ಬಳಕೆ ಹಾಗೂ ಪರಿಸರದೊಂದಿಗೆ ಹೊಂದಿಕೊಳ್ಳುವ ವಿಧಾನವನ್ನು ಮರುಪರಿಶೀಲಿಸಬೇಕು. ವಿಐಎಸ್‌ಎಲ್‌ನಲ್ಲಿ ನಾವು ಸ್ವಚ್ಛ ಲಾಜಿಸ್ಟಿಕ್ಸ್, ನವೀಕರಿಸಬಹುದಾದ ಇಂಧನ, ಎಲೆಕ್ಟ್ರಿಕ್ ವಾಹನಗಳ ಬಳಕೆ, ಸಂಪನ್ಮೂಲ ದಕ್ಷತೆ ಹಾಗೂ ಪರಿಸರ ಪುನಶ್ಚೇತನದ ಮೂಲಕ ಈ ಬದಲಾವಣೆಯನ್ನು ಅನುಷ್ಠಾನಗೊಳಿಸುತ್ತಿದ್ದೇವೆ” ಎಂದು ಹೇಳಿದರು.

“ನಮ್ಮ ಉದ್ದೇಶ ಕೇವಲ ದೀರ್ಘಕಾಲೀನ ಮೌಲ್ಯ ಸೃಷ್ಟಿಗಷ್ಟೇ ಸೀಮಿತವಲ್ಲ; ಪರಿಸರ ಸ್ನೇಹಿ ಮತ್ತು ಹಸಿರು ಭವಿಷ್ಯ ನಿರ್ಮಾಣದಲ್ಲಿಯೂ ಕೈಗಾರಿಕಾ ವಲಯ ಮುಂಚೂಣಿಯಲ್ಲಿ ಇರಬೇಕು ಎಂಬುದಾಗಿದೆ” ಎಂದು ಅವರು ತಿಳಿಸಿದರು.

ವಿಐಎಸ್‌ಎಲ್ ಕೈಗೊಂಡಿರುವ ಈ ಕ್ರಮಗಳು ಕೈಗಾರಿಕಾ ಕ್ಷೇತ್ರದಲ್ಲಿ ಪರಿಸರ ಜವಾಬ್ದಾರಿತನದ ಮಹತ್ವವನ್ನು ಮತ್ತೊಮ್ಮೆ ಎತ್ತಿಹಿಡಿದಿವೆ.

# ‘ಲಯರ್ಸ್ ಯುನೊ ಬ್ಯಾಟಲ್’ ಸಂಭ್ರಮ

ಮಂಗಳೂರು: ನಗರದ ಫಿಜಾ ಬೈ ನೆಕ್ಸಸ್ ಮಾಲ್ ಗ್ರಾಹಕರಿಗಾಗಿ ವಿಶೇಷ ಮನರಂಜನಾ ಕಾರ್ಯಕ್ರಮವಾಗಿ “ಲಯರ್ಸ್ ಯುನೊ ಬ್ಯಾಟಲ್” ಸ್ಪರ್ಧೆಯನ್ನು ಆಯೋಜಿಸಿದ್ದು, ಗೇಮಿಂಗ್ ಪ್ರಿಯರಿಗೆ ರೋಚಕ ಅನುಭವದ ಜೊತೆಗೆ ಆಕರ್ಷಕ ಬಹುಮಾನ ಗೆಲ್ಲುವ ಅವಕಾಶ ಕಲ್ಪಿಸಿದೆ.




ಕುಟುಂಬದವರು, ಸ್ನೇಹಿತರು ಹಾಗೂ ಆಟಗಳ ಆಸಕ್ತರನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾಗಿರುವ ಈ ಸ್ಪರ್ಧೆಯಲ್ಲಿ ಭಾಗವಹಿಸುವವರು ತಮ್ಮ ತಂತ್ರ, ಚಾತುರ್ಯ ಮತ್ತು ಆಟದ ಕೌಶಲ್ಯವನ್ನು ಪ್ರದರ್ಶಿಸಬಹುದಾಗಿದೆ. ವಿಜೇತರಿಗೆ ರೂ.10,000 ನಗದು ಬಹುಮಾನ ನೀಡಲಾಗುತ್ತದೆ.

ಈ ವಿಶೇಷ ಕಾರ್ಯಕ್ರಮವು ಜೂನ್ 5ರಿಂದ 7ರವರೆಗೆ ಪ್ರತಿದಿನ ಮಧ್ಯಾಹ್ನ 12:30ರಿಂದ ರಾತ್ರಿ 9ರವರೆಗೆ ಮಾಲ್‌ನ ಮೇಲಂತಸ್ತಿನ ಕೇಂದ್ರ ಪ್ರಾಂಗಣದಲ್ಲಿ ನಡೆಯಲಿದೆ. ಮೂರು ದಿನಗಳ ಕಾಲ ನಡೆಯಲಿರುವ ಈ ಸ್ಪರ್ಧೆ ಮನರಂಜನೆ, ಸ್ನೇಹಪೂರ್ಣ ಪೈಪೋಟಿ ಹಾಗೂ ಸಮುದಾಯದ ಒಗ್ಗೂಡುವಿಕೆಗೆ ವೇದಿಕೆಯಾಗಲಿದೆ. 5 ವರ್ಷ ಮೇಲ್ಪಟ್ಟ ಯಾರಾದರೂ ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ. ಮಕ್ಕಳಿಂದ ಹಿಡಿದು ಅನುಭವಿ ಆಟಗಾರರವರೆಗೆ ಎಲ್ಲರಿಗೂ ಅವಕಾಶ ಕಲ್ಪಿಸಲಾಗಿದೆ. ಈ ಜೂನ್ ತಿಂಗಳಲ್ಲಿ ಕುಟುಂಬ ಮತ್ತು ಸ್ನೇಹಿತರೊಂದಿಗೆ ಸಂತಸದ ಕ್ಷಣಗಳನ್ನು ಕಳೆಯಲು, ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಹಾಗೂ ಮನರಂಜನೆ ಅನುಭವಿಸಲು ಫಿಜಾ ಬೈ ನೆಕ್ಸಸ್ ಮಾಲ್ ಸೂಕ್ತ ತಾಣವಾಗಲಿದೆ.



ಶಾಸಕ ಸಂತೋಷ್ ಲಾಡ್ ಅವರು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಮಂಗಳವಾರ ಭೇಟಿ ಮಾಡಿ ಶುಭಕೋರಿದರು.

# ಹಲವು ರೈಲುಗಳ ಮಾರ್ಗ ಬದಲಾವಣೆ

ಬೆಂಗಳೂರು

ಕೃಷ್ಣರಾಜಪುರಂ ಹಾಗೂ ವೈಟ್‌ಫೀಲ್ಡ್ ಪ್ಯಾನಲ್ ಕ್ಯಾಬಿನ್ ನಿಲ್ದಾಣಗಳ ನಡುವೆ ನಡೆಯಲಿರುವ ಎಂಜಿನಿಯರಿಂಗ್ ಕಾಮಗಾರಿಯ ಹಿನ್ನೆಲೆಯಲ್ಲಿ ಜೂನ್ 6 ಮತ್ತು 7 ರಂದು ಸಂಚರಿಸುವ ಹಲವು ರೈಲುಗಳ ಮಾರ್ಗ ಹಾಗೂ ನಿಲುಗಡೆಯಲ್ಲಿ ತಾತ್ಕಾಲಿಕ ಬದಲಾವಣೆ ಮಾಡಲಾಗಿದೆ ಎಂದು ದಕ್ಷಿಣ ಪಶ್ಚಿಮ ರೈಲ್ವೆ ಇಲಾಖೆ ತಿಳಿಸಿದೆ.

ಕಾಮಗಾರಿಯ ಹಿನ್ನೆಲೆಯಲ್ಲಿ ಕೆಲವು ರೈಲುಗಳು ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಲಿದ್ದು, ಕೆಲವು ಪ್ರಮುಖ ನಿಲ್ದಾಣಗಳಲ್ಲಿ ತಾತ್ಕಾಲಿಕವಾಗಿ ನಿಲುಗಡೆ ಇರುವುದಿಲ್ಲ. ಪ್ರಯಾಣಿಕರು ತಮ್ಮ ಪ್ರಯಾಣಕ್ಕೂ ಮುನ್ನ ರೈಲುಗಳ ನವೀಕೃತ ವೇಳಾಪಟ್ಟಿ ಮತ್ತು ಮಾರ್ಗ ವಿವರಗಳನ್ನು ಪರಿಶೀಲಿಸಿಕೊಳ್ಳುವಂತೆ ರೈಲ್ವೆ ಇಲಾಖೆ ಮನವಿ ಮಾಡಿದೆ.

ಜೂನ್ 7 ರಂದು ಸಂಚರಿಸುವ ಕೆಎಸ್‌ಆರ್ ಬೆಂಗಳೂರು ಕನ್ಯಾಕುಮಾರಿ ಎಕ್ಸ್‌ಪ್ರೆಸ್, ಚಾಮರಾಜನಗರ ತಿರುಪತಿ ಎಕ್ಸ್‌ಪ್ರೆಸ್, ಚೆನ್ನೈ ಹುಬ್ಬಳ್ಳಿ ಎಕ್ಸ್‌ಪ್ರೆಸ್, ತಿರುಪತಿ ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್, ಮೈಸೂರು ವಂದೇ ಭಾರತ್ ಸೇರಿದಂತೆ ಹಲವು ರೈಲುಗಳು ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಲಿವೆ. ಇದೇ ವೇಳೆ ಕೃಷ್ಣರಾಜಪುರಂ, ವೈಟ್‌ಫೀಲ್ಡ್, ಮಾಲೂರು, ಬಂಗಾರಪೇಟೆ ಸೇರಿದಂತೆ ಕೆಲವು ನಿಲ್ದಾಣಗಳಲ್ಲಿ ತಾತ್ಕಾಲಿಕ ನಿಲುಗಡೆ ರದ್ದುಪಡಿಸಲಾಗಿದೆ.

ಜೂನ್ 6 ರಂದು ಹೊರಡುವ ಹಟಿಯಾ ಎಸ್‌ಎಂವಿಟಿ ಬೆಂಗಳೂರು ಹಾಗೂ ಬಲಾಂಗೀರ್ ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ರೈಲುಗಳ ಮಾರ್ಗಗಳಲ್ಲಿಯೂ ಬದಲಾವಣೆ ಮಾಡಲಾಗಿದೆ.

ರೈಲ್ವೆ ಅಧಿಕಾರಿಗಳ ಪ್ರಕಾರ, ಕಾಮಗಾರಿ ಪೂರ್ಣಗೊಂಡ ಬಳಿಕ ರೈಲು ಸಂಚಾರವನ್ನು ಮತ್ತಷ್ಟು ಸುಗಮ ಹಾಗೂ ಸುರಕ್ಷಿತಗೊಳಿಸುವ ಉದ್ದೇಶದಿಂದ ಈ ತಾತ್ಕಾಲಿಕ ಬದಲಾವಣೆ ಕೈಗೊಳ್ಳಲಾಗಿದೆ.ಜೂನ್ 7 ರಂದು ಸಂಚರಿಸುವ ಕೆಎಸ್‌ಆರ್ ಬೆಂಗಳೂರು ಕನ್ಯಾಕುಮಾರಿ ಎಕ್ಸ್‌ಪ್ರೆಸ್, ಚಾಮರಾಜನಗರ ತಿರುಪತಿ ಎಕ್ಸ್‌ಪ್ರೆಸ್, ಚೆನ್ನೈ ಹುಬ್ಬಳ್ಳಿ ಎಕ್ಸ್‌ಪ್ರೆಸ್, ತಿರುಪತಿ ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್, ಮೈಸೂರು ವಂದೇ ಭಾರತ್ ಸೇರಿದಂತೆ ಹಲವು ರೈಲುಗಳು ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಲಿವೆ. ಇದೇ ವೇಳೆ ಕೃಷ್ಣರಾಜಪುರಂ, ವೈಟ್‌ಫೀಲ್ಡ್, ಮಾಲೂರು, ಬಂಗಾರಪೇಟೆ ಸೇರಿದಂತೆ ಕೆಲವು ನಿಲ್ದಾಣಗಳಲ್ಲಿ ತಾತ್ಕಾಲಿಕ ನಿಲುಗಡೆ ರದ್ದುಪಡಿಸಲಾಗಿದೆ.

ಜೂನ್ 6 ರಂದು ಹೊರಡುವ ಹಟಿಯಾ ಎಸ್‌ಎಂವಿಟಿ ಬೆಂಗಳೂರು ಹಾಗೂ ಬಲಾಂಗೀರ್ ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ರೈಲುಗಳ ಮಾರ್ಗಗಳಲ್ಲಿಯೂ ಬದಲಾವಣೆ ಮಾಡಲಾಗಿದೆ. ರೈಲ್ವೆ ಅಧಿಕಾರಿಗಳ ಪ್ರಕಾರ, ಕಾಮಗಾರಿ ಪೂರ್ಣಗೊಂಡ ಬಳಿಕ ರೈಲು ಸಂಚಾರವನ್ನು ಮತ್ತಷ್ಟು ಸುಗಮ ಹಾಗೂ ಸುರಕ್ಷಿತಗೊಳಿಸುವ ಉದ್ದೇಶದಿಂದ ಈ ತಾತ್ಕಾಲಿಕ ಬದಲಾವಣೆ ಕೈಗೊಳ್ಳಲಾಗಿದೆ.



ನೂತನ ಸಿಎಂ ಡಿ.ಕೆ.ಶಿವಕುಮಾರ್ ನೂತನ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಭೇಟಿಯಾಗಿ ಮಾತುಕತೆ ನಡೆಸಿದರು.

# ಮೂಲಸೌಕರ್ಯ ಅಭಿವೃದ್ಧಿಗೆ ಕನ್ವರ್ಜಿಂಟ್‌ನ ವಿಶೇಷ ಕೊಡುಗೆ

ಬೆಂಗಳೂರು

ಸೇವಾ ಆಧಾರಿತ ವ್ಯವಸ್ಥೆಗಳ ಏಕೀಕರಣ ಕ್ಷೇತ್ರದಲ್ಲಿ ಜಾಗತಿಕ ಮುಂಚೂಣಿಯಲ್ಲಿರುವ ಕನ್ವರ್ಜಿಂಟ್ ಸಂಸ್ಥೆ, ತನ್ನ 25ನೇ ವಾರ್ಷಿಕ ಸಾಮಾಜಿಕ ಜವಾಬ್ದಾರಿ ದಿನದ ಅಂಗವಾಗಿ ಬೆಂಗಳೂರಿನ ಸರ್ಕಾರಿ ಶಾಲೆಯಲ್ಲಿ ಶಾಲಾ ಸುರಕ್ಷತೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಸಮುದಾಯ ಸಬಲೀಕರಣದತ್ತ ಮತ್ತೊಮ್ಮೆ ಬದ್ಧತೆಯನ್ನು ಪ್ರದರ್ಶಿಸಿದೆ. “ಸ್ಟೆಪ್ ಅಪ್ ಫಾರ್ ಸ್ಕೂಲ್ಸ್” ಕಾರ್ಯಕ್ರಮದಡಿ ಬೆಂಗಳೂರಿನ ಸಕಲವರ ಸರ್ಕಾರಿ ಶಾಲೆಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಜಾರಿಗೊಳಿಸಲಾಗಿದ್ದು, ಭಾರತಾದ್ಯಂತದ 400ಕ್ಕೂ ಹೆಚ್ಚು ಸಹೋದ್ಯೋಗಿಗಳು ಸ್ವಯಂಸೇವಕರಾಗಿ ಪಾಲ್ಗೊಂಡು ಶಾಲೆಯ ಸುರಕ್ಷತೆ ಹಾಗೂ ಮೂಲಸೌಕರ್ಯ ಪರಿಣತಿಯನ್ನು ಸಮರ್ಪಿಸಿದರು.



ಶಾಲೆಯ ತಕ್ಷಣದ ಅಗತ್ಯಗಳು ಮತ್ತು ದೀರ್ಘಕಾಲೀನ ಸುರಕ್ಷತಾ ವ್ಯವಸ್ಥೆಗಳನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆ ರೂಪಿಸಲಾಗಿತ್ತು. ಶಾಲಾ ಆವರಣದ ಸುರಕ್ಷತೆಯನ್ನು ಹೆಚ್ಚಿಸಲು ವೀಡಿಯೊ ನಿಗಾ ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಮುಖ್ಯ ಪ್ರವೇಶ ದ್ವಾರವನ್ನು ಸುಧಾರಿಸಲಾಯಿತು.

ಇದರ ಜೊತೆಗೆ, ಶಾಲೆಯ ವಿದ್ಯುತ್ ವ್ಯವಸ್ಥೆಯನ್ನು ನವೀಕರಿಸುವ ಮೂಲಕ ಸಂಭವನೀಯ ಅಪಾಯಗಳನ್ನು ತಡೆಗಟ್ಟುವ ಕ್ರಮಗಳನ್ನು ಕೈಗೊಳ್ಳಲಾಯಿತು. ಶಾಲೆಯ ಗೋಡೆಗಳಿಗೆ ಹೊಸ ಬಣ್ಣ ಹಚ್ಚುವುದು, ಆವರಣವನ್ನು ಸ್ವಚ್ಛಗೊಳಿಸುವುದು ಸೇರಿದಂತೆ ಕ್ಯಾಂಪಸ್ ಪುನಶ್ಚೇತನ ಕಾರ್ಯಗಳನ್ನೂ ನಡೆಸಲಾಯಿತು.

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ ।
ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

06/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER


# ಕಡ್ಡಾಯವಾಗಿ ಕಸ ವಿಂಗಡಣೆಗೆ ಮನವಿ

ಮಾಲೂರು

ನಗರದ ಸ್ವಚ್ಛತೆಗಾಗಿ ಪ್ರತಿಯೊಬ್ಬ ನಾಗರಿಕರು ಬೃಹತ್ ತ್ಯಾಜ್ಯ ಉತ್ಪಾದಕರು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು 2026ರಂತೆ ಕಸ ವಿಂಗಡಣೆ ಕಡ್ಡಾಯವಾಗಿದ್ದು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿ ಕಸ ಒಣಕಸ ಸ್ಯಾನಿಟರಿ ತ್ಯಾಜ್ಯ ವಿಶೇಷ ಕಾಳಜಿ ತ್ಯಾಜ್ಯವಾಗಿ ವಿಂಗಡಿಸಿ ನಗರಸಭೆಯ ಕಸ ಸಂಗ್ರಹಣೆ ಆಟೋ ಟಿಪ್ಪರ್‌ಗಳಿಗೆ ಹಾಕುವಂತೆ ನಗರಸಭೆ ಪೌರಾಯುಕ್ತ ಎಂ ಎಸ್ ಮಹದೇವ ಹೇಳಿದರು.

ನಗರಸಭೆಯ ಅವರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಘನ ತ್ಯಾಜ್ಯ ನಿರ್ವಹಣೆಗಾಗಿ 2026ರ ಕಸ ವಿಂಗಡಣೆ ಕಡ್ಡಾಯ ಗೊಳಿಸಿರುವದರ ಬಗ್ಗೆ ಮಾಹಿತಿ ನೀಡಿ.

ಮಾಲೂರು ನಗರವು ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದ್ದು ಅದರಂತೆ ಕಸ ಸಂಗ್ರಹಣೆ ಮಾಡುವುದರ ಮೂಲಕ ನಗರದ ಸ್ವಚ್ಛತೆಯನ್ನು ಕಾಪಾಡುವುದು ನಗರ ಸಭೆಯ ಆದ್ಯ ಕರ್ತವ್ಯವಾಗಿದ್ದು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ನಾಗರಿಕರು ಹಸಿ ಕಸ ಒಣ ಕಸ ಸಾನಟರಿ ತ್ಯಾಜ್ಯ ವಿಶೇಷ ಕಾಳಜಿ ತ್ಯಾಜ್ಯವಾಗಿ ವಿಂಗಡಿಸಿ ನಗರಸಭೆಯ ಕಸ ಸಂಗ್ರಹಣೆ ಮಾಡುವ ಆಟೋ ಟಿಪ್ಪರ್‌ಗಳಿಗೆ ನೀಡಬೇಕು, ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ರ ಪ್ರಕಾರ ಪ್ರತಿಯೊಬ್ಬ ಸಾರ್ವಜನಿಕರು, ಮನೆಮಠಗಳು, ವಾಣಿಜ್ಯ ಸಂಸ್ಥೆಗಳು, ಕಚೇರಿಗಳು ಹಾಗೂ ಎಲ್ಲಾ ತ್ಯಾಜ್ಯ ಉತ್ಪಾದಕರು ತಮ್ಮ ಮೂಲದಲ್ಲಿಯೇ ಕಸವನ್ನು ನಾಲ್ಕು ವಿಧಗಳಾಗಿ ಪ್ರತ್ಯೇಕಿಸಿ ನೀಡುವುದು ಕಡ್ಡಾಯವಾಗಿದೆ.

ಹಸಿ ತ್ಯಾಜ್ಯ ಆಹಾರ ಅವಶೇಷಗಳು, ತರಕಾರಿ ಹಾಗೂ ಹಣ್ಣಿನ ಸಿಪ್ಪೆಗಳು, ತೋಟದ ತ್ಯಾಜ್ಯ.ಒಣ ತ್ಯಾಜ್ಯ ಕಾಗದ, ಪ್ಲಾಸ್ಟಿಕ್, ಲೋಹ, ಗಾಜು ಹಾಗೂ ಮರುಬಳಕೆ ಮಾಡಬಹುದಾದ ವಸ್ತುಗಳು. ಸ್ಯಾನಿಟರಿ ತ್ಯಾಜ್ಯ ಡೈಪರ್‌ಗಳು, ಸ್ಯಾನಿಟರಿ ನ್ಯಾಪ್ಕಿನ್‌ಗಳು ಹಾಗೂ ಇತರೆ ಸ್ವಚ್ಛತಾ ತ್ಯಾಜ್ಯಗಳು.

ವಿಶೇಷ ತ್ಯಾಜ್ಯ ಬ್ಯಾಟರಿಗಳು, ಬಲ್ಬ್‌ಗಳು, ಔಷಧಿಗಳ ಅವಶೇಷಗಳು, ಇ–ತ್ಯಾಜ್ಯ ಹಾಗೂ ಅಪಾಯಕಾರಿ ತ್ಯಾಜ್ಯಗಳು.ಮಿಶ್ರ ಕಸ ನೀಡುವುದು ನಿಯಮ ಉಲ್ಲಂಘನೆಯಾಗಿದ್ದು, ಪರಿಸರ ಮಾಲಿನ್ಯ ಹಾಗೂ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬ ನಾಗರಿಕರು ತಮ್ಮ ಜವಾಬ್ದಾರಿಯನ್ನು ಅರಿತು ಕಸವನ್ನು ನಾಲ್ಕು ವಿಭಾಗಗಳಲ್ಲಿ ವಿಂಗಡಿಸಿ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಬೇಕು.ಮೂಲದಲ್ಲಿಯೇ ಕಸ ವಿಂಗಡಣೆ ಸ್ವಚ್ಛ ಪರಿಸರದತ್ತ ಮೊದಲ ಹೆಜ್ಜೆ"ಸ್ವಚ್ಛ ನಗರ, ಆರೋಗ್ಯಕರ ಸಮಾಜ ಹಾಗೂ ಸುಸ್ಥಿರ ಭವಿಷ್ಯಕ್ಕಾಗಿ ಎಲ್ಲರೂ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ನ್ನು ಕಟ್ಟುನಿಟ್ಟಾಗಿ ಪಾಲಿಸೋಣ. ಎಂದು ಹೇಳಿದರು.

ಈ ಸಂದರ್ಭದಲ್ಲಿ ಪರಿಸರ ಅಭಿಯಂತರ ಶಾಲಿನಿ ಆರೋಗ್ಯ ನಿರೀಕ್ಷಕ ರಾಜಣ್ಣ ಹಾಜರಿದ್ದರು.

# ಮುಂಗಾರು ಅಭಿಯಾನ

ಮಾಲೂರು

ಹೆಚ್ಚಿನ ರಸಗೊಬ್ಬರಗಳ ಬಳಕೆಯಿಂದ ಜಮೀನುಗಳಲ್ಲಿ ಫಲವತ್ತತೆ ಕಡಿಮೆಯಾಗಿ ಬೆಳೆಗಳ ಇಳುವರಿ ಕಡಿಮೆಯಾಗುತ್ತದೆ ಆದ್ದರಿಂದ ರೈತರು ಸಾವಯವ ಎರೆಹುಳು ತಿಪ್ಪೆ ಗೊಬ್ಬರವನ್ನು ಬಳಸಿ ಬೆಳೆಗಳನ್ನು ಬೆಳೆದರೆ ಉತ್ತಮ ಇಳುವರಿ ನೀಡುವುದರ ಜೊತೆಗೆ ಜನರ ಆರೋಗ್ಯವನ್ನು ಸಹ ಹೆಚ್ಚಿಸುತ್ತದೆ ಎಂದು ಜಾನುವಾರು ರೈತ ಸಂಘದ ಪ್ರಗತಿಪರ ರೈತ ನೀಲಕಂಠ ಅಗ್ರಹಾರ ಶಾಮಣ್ಣ ಹೇಳಿದರು.

ನಗರದ ಕೃಷಿ ಇಲಾಖೆಯ ಆವರಣದಲ್ಲಿ ಕೃಷಿ ಇಲಾಖೆಯ ಸಹಕಾರದಿಂದ ಕೇಂದ್ರ ಪುರಸ್ಕೃತ ಆತ್ಮಯೋಜನೆ ಅಡಿ ರಸಗೊಬ್ಬರ ಹಾಗೂ ಅರಿವು ಮೂಡಿಸುವ ಕುರಿತು ಮುಂಗಾರು ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾವಯವ ಎರೆಹುಳು ತಿಪ್ಪೇ ಗೊಬ್ಬರದಲ್ಲಿ ರಸಗೊಬ್ಬರಕ್ಕಿಂತ ಹೆಚ್ಚಿನ ಫಲವತ್ತತೆ ಇರುತ್ತದೆ ಮುಂಗಾರು ಪ್ರಾರಂಭವಾಗಿದೆ ಕಡಿಮೆ ಮಳೆ ಆಗುತ್ತಿದ್ದು ಮುಂಗಾರು ಪ್ರಾರಂಭವಾಗಿದ್ದು ತೊಗರಿ ಹಾಗೂ ನೆಲಗಡಲೆ ಹಾಕಲು ಸಕಾಲವಾಗಿದೆ ತಾಲೂಕಿನ ರೈತರು ತಮ್ಮ ಹೊಲಗಳನ್ನು ಉಳುಮೆ ಮಾಡಿ ತೊಗರಿ ಹಾಗೂ ನೆಲಗಡಲೆ ಹಾಕಬಹುದಾಗಿದೆ.

ಸಿರಿಧಾನ್ಯಗಳು ಕೃಷಿ ಇಲಾಖೆಯಲ್ಲಿ ಕೆಲವು ಮಾತ್ರ ಸಿಗುತ್ತದೆ ಕೆಲವು ಸಿರಿಧಾನ್ಯಗಳನ್ನು ವೈಯಕ್ತಿಕವಾಗಿ ಜಿಲ್ಲೆಯ ಯಾರೇ ರೈತರು ಸಂಪರ್ಕಿಸಿದರು ಉಚಿತವಾಗಿ ನೀಡುವದಾಗಿ ಹೇಳಿದ ಅವರು ಸಿರಿಧಾನ್ಯಗಳು ಸೇವಿಸುವುದರಿಂದ ನಮ್ಮ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಿರಿಧಾನ್ಯಗಳನ್ನು ಬೆಳೆಯುವ ಮುಂದಾಗುವಂತೆ ಹೇಳಿದರು.

ಕೃಷಿ ಇಲಾಖೆಯ ಆತ್ಮ ಯೋಜನೆ ತಾಂತ್ರಿಕ ಅಧಿಕಾರಿ ಕೆ.ಸಿ ನಾರಾಯಣಸ್ವಾಮಿ ಮಾತನಾಡಿ, ರೈತರಿಗೆ ರಸಗೊಬ್ಬರಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದ್ದು ರೈತರು ಯಥೇಚ್ಛವಾಗಿ ರಸಗೊಬ್ಬರಗಳ ಬಳಕೆ ಮಾಡಿದರೆ ಜಮೀನಿನ ಫಲವತ್ತತೆ ಕಡಿಮೆ ಆಗುತ್ತದೆ ಅಲ್ಲದೆ ಇಳುವರಿಗೂ ಸಹ ಕುಂಟಿತಗೊಳ್ಳುತ್ತದೆ ಸಾವಯವ ತಿಪ್ಪೇ ಗೊಬ್ಬರ ಬಳಕೆ ಮಾಡಬೇಕು, ಯೂರಿಯಾ, ಡಿಎಪಿ ಬದಲು ನ್ಯಾನೋ ಯೂರಿಯ ಡಿಎಪಿ ಬಳಸಿದರೆ ಇಳುವರಿ ಹೆಚ್ಚುತ್ತದೆ, ನ್ಯಾನೋ ಯೂರಿಯಾ ಒಂದು ಬಾಟಲ್ 50 ಕೆಜಿ ಗೆ ಸಮಾನವಾಗಿರುತ್ತದೆ. ರಾಸಾಯನಿಕ ಗೊಬ್ಬರಗಳು ಕಡಿಮೆ ಮಾಡಿ ಸಾವಯವ ಗೊಬ್ಬರಗಳು ಬಳಸಿ ಆಹಾರ ಬೆಳೆಗಳು ಬೆಳೆಯುವುದರಿಂದ ಆಹಾರ ಪದಾರ್ಥಗಳು ಸೇವಿಸಿದವರು ಸಹ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಎಂದರು.

# ಪಕ್ಷ ಸಂಘಟನೆಗೆ ಸಜ್ಜಾಗುವಂತೆ ಕರೆ

ದೇವನಹಳ್ಳಿ

ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ಯಶಸ್ವಿಯಾಗಿ ಎದುರಿಸಲು ಜೆಡಿಎಸ್ ಕಾರ್ಯಕರ್ತರು ತಳಮಟ್ಟದಿಂದಲೇ ಪಕ್ಷ ಸಂಘಟನೆಗೆ ಒತ್ತು ನೀಡಬೇಕು ಎಂದು ದೇವನಹಳ್ಳಿ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಕರೆ ನೀಡಿದರು.

ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಎಸ್. ಮಹೇಶ್ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಕೆ.ವಿ. ಮಂಜುನಾಥ್ ಅವರ ನೇತೃತ್ವದಲ್ಲಿ ನಡೆದ ಎಸ್‌ಸಿ ಘಟಕದ ನೂತನ ಪದಾಧಿಕಾರಿಗಳ ನೇಮಕಾತಿ ಪತ್ರ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಎಸ್‌ಸಿ ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ ನಾಗರಾಜು ಹಾಗೂ ದೇವನಹಳ್ಳಿ ತಾಲೂಕು ಎಸ್‌ಸಿ ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ ರಾಮಣ್ಣ ಅವರಿಗೆ ಅಧಿಕೃತ ನೇಮಕಾತಿ ಪತ್ರ ವಿತರಿಸಿ ಅಭಿನಂದಿಸಲಾಯಿತು.

ಪರಿಶಿಷ್ಟ ಜಾತಿಯ ವಿವಿಧ ಸಮುದಾಯಗಳ ಮುಖಂಡರು ಒಗ್ಗಟ್ಟಿನಿಂದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಸಿರುವುದು ಶ್ಲಾಘನೀಯ. ಪಕ್ಷವನ್ನು ಗ್ರಾಮಮಟ್ಟದಲ್ಲಿ ಬಲಪಡಿಸುವ ಮೂಲಕ ಮುಂಬರುವ ಚುನಾವಣೆಗಳಲ್ಲಿ ಉತ್ತಮ ಫಲಿತಾಂಶ ಸಾಧಿಸಲು ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಜೆಡಿಎಸ್ ರಾಜ್ಯದಲ್ಲಿ ಮತ್ತಷ್ಟು ಬಲಿಷ್ಠವಾಗಬೇಕಿದ್ದು, ಕಾರ್ಯಕರ್ತರು ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಪಕ್ಷದ ತತ್ವ, ಸಿದ್ಧಾಂತಗಳನ್ನು ತಲುಪಿಸಬೇಕು ಎಂದು ಸಲಹೆ ನೀಡಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ವಿ. ಮಂಜುನಾಥ್ ಮಾತನಾಡಿ, ಎಸ್‌ಸಿ ಘಟಕದ ಪುನರ್‌ರಚನೆಗೆ ಹಿರಿಯ ಮುಖಂಡರಿಂದ ಉತ್ತಮ ಸ್ಪಂದನೆ ದೊರೆತಿದೆ ಎಂದರು.

# ಮುಖ್ಯಮಂತ್ರಿಯಾಗಿ ಡಿಕೆಶಿ: ಸಂಭ್ರಮಾಚರಣೆ

ತಿಪಟೂರು



ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ತಾಲೂಕಿನ ಮಾದಿಹಳ್ಳಿ ಗೇಟ್ ಬಳಿ ಅವರ ಅಭಿಮಾನಿಗಳು ಸಂಭ್ರಮಾಚರಣೆ ನಡೆಸಿದರು.

ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಎಂ.ಎಂ. ರವೀಶ್ ಅವರ ನೇತೃತ್ವದಲ್ಲಿ ಸಾರ್ವಜನಿಕರಿಗೆ ಸಿಹಿ ಹಂಚಿ, ಪಟಾಕಿ ಸಿಡಿಸುವ ಮೂಲಕ ಸಂತಸ ವ್ಯಕ್ತಪಡಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎಂ.ಎಂ. ರವೀಶ್, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವುದು ತಮ್ಮಂತಹ ಕೋಟ್ಯಾಂತರ ಅಭಿಮಾನಿಗಳಿಗೆ ಸಂತೋಷದ ಕ್ಷಣವಾಗಿದೆ ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿಗೆ ಹೊಸ ದಿಕ್ಕು ಸಿಗಲಿದ್ದು, ಪಕ್ಷದ ತಳಮಟ್ಟದ ಕಾರ್ಯಕರ್ತರಿಂದ ಸಾಮಾನ್ಯ ಜನರ ತನಕ ಎಲ್ಲರಿಗೂ ನ್ಯಾಯ ಒದಗಿಸುವ ನಾಯಕತ್ವವನ್ನು ಡಿ.ಕೆ. ಶಿವಕುಮಾರ್ ಅವರು ನೀಡಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ತಾಳ್ಮೆ, ದೃಢ ಸಂಕಲ್ಪ ಮತ್ತು ನಿರಂತರ ಪರಿಶ್ರಮದಿಂದ ಅವರು ಮುಖ್ಯಮಂತ್ರಿ ಹುದ್ದೆ ಅಲಂಕರಿಸುವಂತಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಮಾಧುಸ್ವಾಮಿ, ಶಶಿಧರ್, ಮುಖಂಡರಾದ ಜಿ.ಕೆ. ವಿಲಾಸ್, ರಮೇಶ್, ವೆಂಕಟೇಶ್ ಸೇರಿದಂತೆ ಹಲವು ಮುಖಂಡರು

## ಡಿಕೆಶಿ ಸಂಪುಟದಲ್ಲಿ ಬಾಗೇಪಲ್ಲಿ ಶಾಸಕ ಎಸ್.ಎನ್. ಸುಬ್ಬಾರೆಡ್ಡಿಗೆ

# ಸಿಗಲಿದೆಯೇ ಸಚಿವ ಸ್ಥಾನ?

ಚಿಕ್ಕಬಳ್ಳಾಪುರ

ರಾಜ್ಯ ರಾಜಕೀಯದಲ್ಲಿ ನಡೆದಿರುವ ಬೆಳವಣಿಗೆಗಳ ನಡುವೆ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟ ರಚನೆಗೆ ಸಂಬಂಧಿಸಿದ ಚಟುವಟಿಕೆಗಳು ತೀವ್ರಗೊಂಡಿವೆ. ಇದರ ನಡುವೆ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರಿಗೆ ಸಚಿವ ಸ್ಥಾನ ದೊರೆಯಬೇಕು ಎಂಬ ಬೇಡಿಕೆ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳ ವಲಯದಲ್ಲಿ ಜೋರಾಗಿ ಕೇಳಿಬರುತ್ತಿದೆ.

ಸತತ ಮೂರು ಬಾರಿ ವಿಧಾನಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಎಸ್.ಎನ್. ಸುಬ್ಬಾರೆಡ್ಡಿ ಅವರು ಜಿಲ್ಲೆಯ ಹಿರಿಯ ಕಾಂಗ್ರೆಸ್ ನಾಯಕರಲ್ಲಿ ಒಬ್ಬರಾಗಿದ್ದು, ಪಕ್ಷದ ಸಂಘಟನೆ ಮತ್ತು ಕ್ಷೇತ್ರದ ಅಭಿವೃದ್ಧಿಗೆ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಈ ಬಾರಿ ಸಚಿವ ಸ್ಥಾನ ನೀಡಬೇಕು ಎಂಬ ಒತ್ತಾಯ ವ್ಯಕ್ತವಾಗುತ್ತಿದೆ.

ಕಾಂಗ್ರೆಸ್ ಸರ್ಕಾರದ ಹಿಂದಿನ ಅವಧಿಗಳಲ್ಲಿಯೂ ಸಚಿವ ಸ್ಥಾನಕ್ಕಾಗಿ ಯಾವುದೇ ರೀತಿಯ ಲಾಬಿ ನಡೆಸದೆ ಸರಳ ಹಾಗೂ ನಿಷ್ಠಾವಂತ ರಾಜಕಾರಣಿಯಾಗಿ ಗುರುತಿಸಿಕೊಂಡಿರುವ ಸುಬ್ಬಾರೆಡ್ಡಿ ಅವರಿಗೆ ಈ ಬಾರಿ ಅವಕಾಶ ಸಿಗಬಹುದು ಎಂಬ ನಿರೀಕ್ಷೆ ಪಕ್ಷದ ಕಾರ್ಯಕರ್ತರಲ್ಲಿ ಹೆಚ್ಚಾಗಿದೆ.



ಆಂಧ್ರಪ್ರದೇಶ ಗಡಿಭಾಗಕ್ಕೆ ಹೊಂದಿಕೊಂಡಿರುವ ಬಾಗೇಪಲ್ಲಿ ಕ್ಷೇತ್ರಕ್ಕೆ ಇದುವರೆಗೆ ಸಚಿವ ಸ್ಥಾನ ದೊರೆತಿಲ್ಲ. ಹೀಗಾಗಿ ಈ ಬಾರಿ ಆದರೂ ಕ್ಷೇತ್ರಕ್ಕೆ ಸಚಿವ ಸ್ಥಾನ ದೊರೆಯಲಿ ಎಂಬ ಆಶಯದಿಂದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆಗಳು ನಡೆಯುತ್ತಿವೆ. ಕೆಲ ಧಾರ್ಮಿಕ ಕೇಂದ್ರಗಳಲ್ಲಿಯೂ ಅವರ ಪರವಾಗಿ ಪ್ರಾರ್ಥನೆ ಸಲ್ಲಿಸಲಾಗುತ್ತಿದೆ ಎಂದು ಬೆಂಬಲಿಗರು ತಿಳಿಸಿದ್ದಾರೆ.


ಸುಬ್ಬಾರೆಡ್ಡಿ ಅವರು ಕಳೆದ ಹಲವು ವರ್ಷಗಳಿಂದ ಸಮಾಜಸೇವೆ, ಬಡವರ ಪರ ಕಾಳಜಿ, ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದನೆ, ಸಾಮೂಹಿಕ ವಿವಾಹಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಮೂಲಕ ಜನಾನುರಾಗಿಯಾಗಿದ್ದಾರೆ ಎಂದು ಬೆಂಬಲಿಗರು ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ ಹಾಗೂ ವಕೀಲ ಮಂಡಿಕಲ್ ನಾರಾಯಣಸ್ವಾಮಿ ಮಾತನಾಡಿ, ಸುಬ್ಬಾರೆಡ್ಡಿ ಅವರು ಸರಳ, ಸಜ್ಜನಿಕೆ ಹಾಗೂ ಜನಸ್ನೇಹಿ ವ್ಯಕ್ತಿತ್ವ ಹೊಂದಿದ್ದು, ಅವರಿಗೆ ಸಚಿವ ಸ್ಥಾನ ದೊರೆತರೆ ಜಿಲ್ಲೆಯ ಜನರಿಗೆ ಮತ್ತಷ್ಟು ಅನುಕೂಲವಾಗಲಿದೆ ಎಂದು ಹೇಳಿದರು.

ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹಾಗೂ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಯಲುವಳ್ಳಿ ಎನ್. ರಮೇಶ್ ಮಾತನಾಡಿ, ಸುಬ್ಬಾರೆಡ್ಡಿ ಅವರಿಗೆ ಸಚಿವ ಸ್ಥಾನ ಸಿಕ್ಕರೂ ಸಂತೋಷವೇ, ಅಥವಾ ಹಾಲಿ ಸಚಿವ ಡಾ. ಎಂ.ಸಿ. ಸುಧಾಕರ್ ಮುಂದುವರಿದರೂ ಅಭ್ಯಂತರವಿಲ್ಲ. ಜಿಲ್ಲೆಯ ಅಭಿವೃದ್ಧಿಯೇ ಮುಖ್ಯವಾಗಿದ್ದು, ಪಕ್ಷದ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ತೆಗೆದುಕೊಳ್ಳುವ ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ಹೇಳಿದರು. ಇನ್ನೊಂದೆಡೆ, ಹಾಲಿ ಸಚಿವರಾಗಿರುವ ಚಿಂತಾಮಣಿಯ ಡಾ. ಎಂ.ಸಿ. ಸುಧಾಕರ್ ಅವರು ಸಂಪುಟದಲ್ಲಿ ಮುಂದುವರಿಯುವ ಸಾಧ್ಯತೆಯೂ ಇದೆ ಎಂಬ ಅಭಿಪ್ರಾಯವನ್ನು ಪಕ್ಷದ ಕೆಲವು ಮುಖಂಡರು ವ್ಯಕ್ತಪಡಿಸಿದ್ದಾರೆ.

ಒಟ್ಟಾರೆ, ಜಿಲ್ಲೆಯ ವಿವಿಧ ಕ್ಷೇತ್ರಗಳಿಗೆ ಹಿಂದಿನ ಅವಧಿಗಳಲ್ಲಿ ಸಚಿವ ಸ್ಥಾನ ದೊರೆತಿದ್ದರೂ, ಬಾಗೇಪಲ್ಲಿ ಕ್ಷೇತ್ರಕ್ಕೆ ಇದುವರೆಗೆ ಆ ಅವಕಾಶ ಸಿಕ್ಕಿಲ್ಲ. ಹೀಗಾಗಿ ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸಚಿವ ಸಂಪುಟದಲ್ಲಿ ಎಸ್.ಎನ್. ಸುಬ್ಬಾರೆಡ್ಡಿ ಅವರಿಗೆ ಸ್ಥಾನ ಸಿಗಲಿ ಎಂಬ ಆಶಯ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳಲ್ಲಿ ವ್ಯಕ್ತವಾಗುತ್ತಿದೆ.

# ಕೋವಿಡ್‌ನಿಂದ ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಜಿಲ್ಲಾಧಿಕಾರಿಗಳಿಂದ ಧೈರ್ಯ



ಚಿಕ್ಕಬಳ್ಳಾಪುರ

ಕೋವಿಡ್–19 ಸಾಂಕ್ರಾಮಿಕದ ವೇಳೆ ತಂದೆ–ತಾಯಿಯನ್ನು ಕಳೆದುಕೊಂಡ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಅವುಗಳ ಸದುಪಯೋಗ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅವರು ಕರೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪಿ.ಎಂ. ಕೇರ್ಸ್ ಯೋಜನೆಯಡಿ ದಾಖಲಾದ ಮಕ್ಕಳ ಅನುಪಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕೋವಿಡ್ ಸಾಂಕ್ರಾಮಿಕದಿಂದ 16 ಮಕ್ಕಳು ಪರಿತ್ಯಕ್ತರಾಗಿದ್ದು, ಪ್ರಸ್ತುತ 9 ಮಕ್ಕಳು ಪಿ.ಎಂ. ಕೇರ್ಸ್ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ ಎಂದು ಅವರು ತಿಳಿಸಿದರು.

ಈ ಯೋಜನೆಯಡಿ ಜಿಲ್ಲಾಧಿಕಾರಿ ಹಾಗೂ ಫಲಾನುಭವಿಯ ಹೆಸರಿನಲ್ಲಿ ಜಂಟಿ ಖಾತೆ ತೆರೆಯಲಾಗಿದ್ದು, ಸರ್ಕಾರದ ಮಾರ್ಗಸೂಚಿಯಂತೆ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಕನಿಷ್ಠ ರೂ.3.58 ಲಕ್ಷದಿಂದ ರೂ.10 ಲಕ್ಷದವರೆಗೆ ಮೊತ್ತವನ್ನು ಅಂಚೆ ಕಚೇರಿಯ ವೈಯಕ್ತಿಕ ಖಾತೆಗಳಲ್ಲಿ ಜಮೆ ಮಾಡಲಾಗಿದೆ ಎಂದು ವಿವರಿಸಿದರು.

ಮಕ್ಕಳು 23 ವರ್ಷ ವಯಸ್ಸು ಪೂರ್ಣಗೊಂಡ ನಂತರ ಈ ಮೊತ್ತವನ್ನು ಪಡೆಯಬಹುದಾಗಿದ್ದು, 18 ವರ್ಷ ತುಂಬಿದ ಬಳಿಕ ಯೋಜನೆಯಡಿ ಜಮೆಯಾಗುವ ಮೊತ್ತದ ಬಡ್ಡಿ ರೂಪದಲ್ಲಿ ಪ್ರತಿ ತಿಂಗಳು ರೂ.5,000 ವರೆಗೆ ಪಡೆಯುವ ಅವಕಾಶವಿದೆ ಎಂದು ಹೇಳಿದರು.

ಜಿಲ್ಲೆಯ 1ರಿಂದ 12ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ 8 ಮಕ್ಕಳಿಗೆ ವಾರ್ಷಿಕ ರೂ.20,000 ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಜೊತೆಗೆ ಪ್ರಯೋಜಕತ್ವ ಕಾರ್ಯಕ್ರಮದಡಿ ತಿಂಗಳಿಗೆ ರೂ.4,000 ಪ್ರೋತ್ಸಾಹಧನ ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.3,500 ನೆರವು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ವೈದ್ಯಕೀಯ ಅಗತ್ಯಗಳಿಗಾಗಿ ರೂ.5 ಲಕ್ಷದವರೆಗೆ ಆರೋಗ್ಯ ವಿಮೆ ಸೌಲಭ್ಯವೂ ಲಭ್ಯವಿದ್ದು, ಸರ್ಕಾರದ ಎಲ್ಲ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಆತ್ಮವಿಶ್ವಾಸದಿಂದ ಬದುಕು ಕಟ್ಟಿಕೊಳ್ಳಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು.

ಸಭೆಯಲ್ಲಿ ಮಕ್ಕಳ ಸುರಕ್ಷತೆ ಕುರಿತಂತೆ ವಿಶೇಷ ಒತ್ತು ನೀಡಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ 'ಗುಡ್ ಟಚ್' ಮತ್ತು 'ಬ್ಯಾಡ್ ಟಚ್' ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲ್ಲೂಕುವಾರು ಹಾಗೂ ಶಾಲಾವಾರು ವೇಳಾಪಟ್ಟಿ ರೂಪಿಸಿ ಮಕ್ಕಳಲ್ಲಿ ಲೈಂಗಿಕ ದೌರ್ಜನ್ಯ ತಡೆ ಕುರಿತ ಜಾಗೃತಿ ಮೂಡಿಸಲು ಕ್ರಮವಹಿಸುವಂತೆ ನಿರ್ದೇಶನ ನೀಡಿದರು.

ಕೋವಿಡ್‌ನಿಂದ ಪೋಷಕರನ್ನು ಕಳೆದುಕೊಂಡ ಮಕ್ಕಳ ಶಿಕ್ಷಣ ವೆಚ್ಚವನ್ನು ಸರ್ಕಾರದಿಂದ ಭರಿಸಲು ಹಾಗೂ ಅಗತ್ಯವಿದ್ದಲ್ಲಿ ಸರ್ಕಾರಿ ವಸತಿ ನಿಲಯಗಳಲ್ಲಿ ವಿಶೇಷ ಅವಕಾಶ ಕಲ್ಪಿಸಲು ಜಿಲ್ಲಾಧಿಕಾರಿಗಳು ಸ್ಥಳದಲ್ಲೇ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯ ಬಳಿಕ ಮಕ್ಕಳೊಂದಿಗೆ ಸಮಾಲೋಚನೆ ನಡೆಸಿದ ಅವರು, "ನಿಮ್ಮೊಂದಿಗೆ ಜಿಲ್ಲಾಡಳಿತ ಸದಾ ಇರುತ್ತದೆ. ಯಾವುದೇ ಸಮಸ್ಯೆ ಎದುರಾದರೂ ನಮ್ಮನ್ನು ಸಂಪರ್ಕಿಸಿ" ಎಂದು ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ. ಶಿಲ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೌತಾಜ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪರಿತ್ಯಕ್ತ ಮಕ್ಕಳು ಉಪಸ್ಥಿತರಿದ್ದರು.

# ದರೋಡೆಗೆ ಹೊಂಚು ಹಾಕುತ್ತಿದ್ದವರ ಬಂಧನ

ವಿಜಯಪುರ

ವಿಜಯಪುರ–ಕೋಲಾರ ರಸ್ತೆಯಲ್ಲಿ, ದರೋಡೆ ಮಾಡಲು ಕಾರಿನಲ್ಲಿ ಹೊಂಚು ಹಾಕುತ್ತಿದ್ದವರ ಮೇಲೆ ಪೊಲೀಸರು ಮಿಂಚಿನ ಕಾರ್ಯಾಚರಣೆ ನಡೆಸಿ, 6 ಮಂದಿಯಿಂದ ಮಾರಕಾಸ್ತ್ರಗಳೊಂದಿಗೆ ಕಾಯುತ್ತಿದ್ದ ಗುಂಪಿನ ಮೇಲೆ ದಾಳಿ ಮಾಡಿರುವ ವಿಜಯಪುರ ಪೊಲೀಸರು, 6 ಮಂದಿಯನ್ನು ವಶಕ್ಕೆ ಪಡೆದುಕೊಂಡು, ಕೇಸು ದಾಖಲಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಸಹಾಯಕ ಸಬ್ ಇನ್ ಸ್ಪೆಕ್ಟರ್ ರಾಧಾಕೃಷ್ಣ, ಅವರು, ಈ ಬಗ್ಗೆ ದೂರು ದಾಖಲಿಸಿದ್ದು, ವಿಜಯಪುರ–ಕೋಲಾರ ರಸ್ತೆಯ ಹಾರ್ಡಿಪುರ ಗ್ರಾಮದ ಬಳಿ ಸುಮಾರು 5–6 ಜನರು, ಕಾರನ್ನು ನಿಲ್ಲಿಸಿಕೊಂಡು, ಕೈಗಳಲ್ಲಿ ಅಪಾಯಕರ ಆಯುಧಗಳಾದ ಲಾಂಗ್, ಕಲ್ಲು, ಮತ್ತು ಖಾರದ ಪುಡಿ ಹಿಡಿದುಕೊಂಡು ದರೋಡೆ ಮಾಡಲು ಹೊಂಚು ಹಾಕುತ್ತಿರುವ ಬಗ್ಗೆ ಮಾಹಿತಿ ಬಂದ ಹಿನ್ನೆಲೆಯಲ್ಲಿ, ಹಾರ್ಡಿಪುರ ಗ್ರಾಮದ ಬಳಿಗೆ ಹೋಗಿ ನೋಡಿದಾಗ, ವಿಜಯಪುರ – ಕೋಲಾರ ರಸ್ತೆಯ ಹಾರ್ಡಿಪುರ ಗ್ರಾಮದ ವೆಂಕಟರಮಣಸ್ವಾಮಿ ದೇವಾಲಯದ ಸಮೀಪದ ರಸ್ತೆಯ ಪಕ್ಕದಲ್ಲಿ. ಕಾರನ್ನು ನಿಲ್ಲಿಸಿಕೊಂಡು 6 ಜನರು ತಮ್ಮ ಕೈಗಳಲ್ಲಿ ಮಾರಕಾಸ್ತ್ರಗಳನ್ನು ಹಿಡಿದುಕೊಂಡು ರಸ್ತೆಯಲ್ಲಿ ನಿಂತು ರಸ್ತೆಯಲ್ಲಿ ಹೋಗುವ ಸಾರ್ವಜನಿಕರ ಕಾರುಗಳನ್ನು ಗಮನಿಸುತ್ತಿದ್ದರು. ಅವರುಗಳ ಮೇಲೆ ನಮಗೆ ಅನುಮಾನ ಬಂದು ಕೂಡಲೆ ನಾವುಗಳು ಅವರನ್ನು ಸುತ್ತುವರೆದಾಗ, ಎಲ್ಲಾರು ಓಡಲು ಪ್ರಯತ್ನಿಸಿದರು. ಅವರನ್ನು ಹಿಡಿದು, ವಶಕ್ಕೆ ತೆಗೆದುಕೊಂಡು, ವಿಚಾರಿಸಿದಾಗ ದರೋಡೆ ಮಾಡಲು ಹೊಂಚು ಹಾಕುತ್ತಿರುವುದಾಗಿ ಒಪ್ಪಿಕೊಂಡಿದ್ದಾರೆ.

ಆರೋಪಿಗಳನ್ನು ಶಹಬಾಜ್, ಅರ್ಬಾಜ್, ಮುನಿ, ವಿನಯ್, ಪುನೀತ್, ಗುರುರಾಜ್ ಎಂದು ಗುರ್ತಿಸಲಾಗಿದ್ದು, ಆಯುಧಗಳ ಸಮೇತ ವಶಕ್ಕೆ ಪಡೆದುಕೊಳ್ಳಲಾಗಿದೆ. ಕೃತ್ಯಕ್ಕೆ ಬಳಕೆ ಮಾಡಿದ್ದ ಕಾರನ್ನೂ ವಶಕ್ಕೆ ಪಡೆಯಲಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

# ರಸ್ತೆ–ಚರಂಡಿ ದುರಸ್ತಿಗೆ ಮನವಿ



ದೊಡ್ಡಬಳ್ಳಾಪುರ

ನಗರದಲ್ಲಿನ ಹದಗೆಟ್ಟ ರಸ್ತೆಗಳ ದುರಸ್ತಿ ಹಾಗೂ ಕಸ ಮತ್ತು ಮಣ್ಣಿನಿಂದ ತುಂಬಿರುವ ಚರಂಡಿಗಳ ಸ್ವಚ್ಛತೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ರಾಜ್ಯ ವಿಜಯ ಕರ್ನಾಟಕ ರಕ್ಷಣಾ ವೇದಿಕೆ ಪದಾಧಿಕಾರಿಗಳು ದೊಡ್ಡಬಳ್ಳಾಪುರ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಎ. ನಂಜಪ್ಪ ಮಾತನಾಡಿ, ದೊಡ್ಡಬಳ್ಳಾಪುರ ನಗರದ ಬಹುತೇಕ ರಸ್ತೆಗಳು ಗುಂಡಿಗಳಿಂದ ಕೂಡಿದ್ದು, ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಗುಂಡಿಗಳಲ್ಲಿ ನೀರು ನಿಂತು ವಾಹನ ಸವಾರರಿಗೆ ಅಪಾಯ ಉಂಟಾಗುತ್ತಿದೆ ಎಂದು ಹೇಳಿದರು. ಆದ್ದರಿಂದ ತಕ್ಷಣವೇ ಡಾಂಬರೀಕರಣ ಕಾಮಗಾರಿ ನಡೆಸಿ ರಸ್ತೆಗಳನ್ನು ಸುಗಮಗೊಳಿಸಬೇಕು ಎಂದು ಒತ್ತಾಯಿಸಿದರು.

ನಗರದ ಹಲವೆಡೆ ಒಳಚರಂಡಿಗಳು ಮಣ್ಣು ಹಾಗೂ ಕಸದಿಂದ ತುಂಬಿಕೊಂಡಿದ್ದು, ತ್ಯಾಜ್ಯ ನೀರು ರಸ್ತೆಗಳ ಮೇಲೆ ಹರಿಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಅವರು ತಿಳಿಸಿದರು. ವನ್ನಿಗರಪೇಟೆ, ಜೆಸಿ ವೃತ್ತದಿಂದ ರಂಗಪ್ಪ ವೃತ್ತದವರೆಗೆ, ದೇವರಾಜನಗರ, ಡಿ.ಕ್ರಾಸ್ ರಸ್ತೆ, ಹೊಸ ಕರಗದಗುಡಿ ರಸ್ತೆ, ದರ್ಜಿಪೇಟೆ ಮುಖ್ಯರಸ್ತೆ, ತಾಲ್ಲೂಕು ರಸ್ತೆ, ಮುಕ್ತಾಂಬಿಕಾ ರಸ್ತೆ ಹಾಗೂ ಸಂಜಯನಗರ ಸೇರಿದಂತೆ ವಿವಿಧ ಪ್ರದೇಶಗಳ ಚರಂಡಿಗಳನ್ನು ತಕ್ಷಣ ಸ್ವಚ್ಛಗೊಳಿಸಿ ಮಳೆನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಜೆಸಿ ವೃತ್ತದಿಂದ ರಂಗಪ್ಪ ವೃತ್ತದವರೆಗೆ ನಡೆದ ಕಾಮಗಾರಿಯಿಂದ ರಸ್ತೆ ಸಂಪೂರ್ಣ ಹಾಳಾಗಿದ್ದು, ಈ ಬಗ್ಗೆ ಈಗಾಗಲೇ ಹಲವು ಬಾರಿ ನಗರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಆದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ವಿಷಾದನೀಯ ಎಂದು ಅವರು ಹೇಳಿದರು.

ಸಂಬಂಧಿಸಿದ ಅಧಿಕಾರಿಗಳು ಶೀಘ್ರದಲ್ಲೇ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸದಿದ್ದರೆ ನಗರಸಭೆ ಕಚೇರಿ ಎದುರು ತಮಟೆ ಚಳವಳಿ ನಡೆಸಲಾಗುವುದು ಎಂದು ವೇದಿಕೆ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ರಾಜ್ಯ ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಮಂಜುನಾಥ್, ಬಿ.ಎನ್. ಚಂದ್ರಶೇಖರ್, ಎನ್. ಚಂದ್ರಶೇಖರಯ್ಯ, ವೇಣುಗೋಪಾಲ್, ಬಿ.ಎನ್. ಸೋಮಶೇಖರ್, ಆರ್. ಶಿವಕುಮಾರ್, ಸೌಮ್ಯಬಾಯಿ, ನಾಗಮಣಿ, ರೇಷ್ಮಾ ಖಾನಂ, ಪದ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಮೀನು ವಿವಾದ ಹಿನ್ನೆಲೆ ಮಹಿಳೆ ಮೇಲೆ ಹಲ್ಲೆ

ಕೋಲಾರ

ಜಮೀನು ವಿವಾದದ ಹಿನ್ನೆಲೆ ಮಹಿಳೆಯೊಬ್ಬರ ಮೇಲೆ ಹಲ್ಲೆ ನಡೆಸಿರುವ ಘಟನೆ ತಾಲೂಕಿನ ಧನಮಟ್ನಹಳ್ಳಿ ಗ್ರಾಮದಲ್ಲಿ ನಡೆದಿರುವುದಾಗಿ ಆರೋಪಿಸಲಾಗಿದೆ. ಘಟನೆಯಲ್ಲಿ ಗ್ರಾಮದ ವರಲಕ್ಷ್ಮಿ ಗಂಭೀರವಾಗಿ ಗಾಯಗೊಂಡಿದ್ದು, ಅವರು ಕೋಲಾರದ ಎಸ್.ಎನ್. ಆರ್. ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಸಂಬಂಧ ಅದೇ ಗ್ರಾಮದ ನೀಲಾವತಿ, ಅವರ ಪತಿ ಮುನಿರಾಜು ಹಾಗೂ ವಕೀಲ ವೆಂಕಟಾಚಲಪತಿ ವಿರುದ್ಧ ಹಲ್ಲೆ ಹಾಗೂ ಪ್ರಾಣ ಬೆದರಿಕೆ ಆರೋಪ ಕೇಳಿಬಂದಿದೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ವರಲಕ್ಷ್ಮಿ ಅವರ ಪತಿ ವೆಂಕಟರಾಮ್ ಹಾಗೂ ಕುಟುಂಬದ ಸದಸ್ಯರು, ವಂಶವೃಕ್ಷಕ್ಕೆ ಸಹಿ ಬೇಕೆಂದು ನಂಬಿಸಿ ಸಹಿ ಪಡೆಯಲಾಗಿದ್ದು, ಬಳಿಕ ಪಿತ್ರಾರ್ಜಿತ ಆಸ್ತಿಯನ್ನು ಲೀಲಾವತಿ ತಮ್ಮ ಹೆಸರಿಗೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

# ಕನಕಪುರದಲ್ಲಿ ಡಿಕೆಶಿ ಮುಖ್ಯಮಂತ್ರಿ ಪದಗ್ರಹಣಕ್ಕೆ ಹಬ್ಬದ ಸಂಭ್ರಮ

ಕನಕಪುರ

ತಾಲ್ಲೂಕಿನ ಹೆಮ್ಮೆಯ ನಾಯಕ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಕನಕಪುರ ತಾಲ್ಲೂಕಿನಾದ್ಯಂತ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು. ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಹಾಗೂ ಸಾರ್ವಜನಿಕರು ಈ ಐತಿಹಾಸಿಕ ಕ್ಷಣವನ್ನು ಹಬ್ಬದ ರೀತಿಯಲ್ಲಿ ಆಚರಿಸಿದರು.

ತಾಲ್ಲೂಕಿನ ವಿವಿಧ ಹೋಬಳಿ ಕೇಂದ್ರಗಳು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಆರೋಗ್ಯ, ಆಯುಷ್ಯ ಹಾಗೂ ರಾಜ್ಯದ ರೈತರು, ಬಡವರು ಮತ್ತು ಜನಸಾಮಾನ್ಯರ ಪರವಾಗಿ ಉತ್ತಮ ಆಡಳಿತ ನೀಡುವ ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಲಾಯಿತು.



ಕಳೆದ ಎರಡು ದಿನಗಳಿಂದ ನಗರ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಡಿಕೆಶಿಗೆ ಶುಭಕೋರುವ ಬ್ಯಾನರ್‌ಗಳು ಹಾಗೂ ಫ್ಲೆಕ್ಸ್‌ಗಳು ರಾರಾಜಿಸುತ್ತಿದ್ದವು. ಮುಖ್ಯಮಂತ್ರಿ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಲು ಸೀಮಿತ ಅವಕಾಶವಿದ್ದ ಕಾರಣ ಸಾರ್ವಜನಿಕರು ನೇರ ಪ್ರಸಾರ ವೀಕ್ಷಿಸಲು ನಗರದ ಚನ್ನಬಸಪ್ಪ ವೃತ್ತದಲ್ಲಿ ಬೃಹತ್ ಎಲ್‌ಇಡಿ ಪರದೆ ಅಳವಡಿಸಲಾಗಿತ್ತು.

ಮಧ್ಯಾಹ್ನ 3 ಗಂಟೆಯಿಂದಲೇ ಪ್ರಮಾಣವಚನ ಸಮಾರಂಭದ ನೇರ ಪ್ರಸಾರ ಆರಂಭವಾಗಿದ್ದು, ನೂರಾರು ಕಾರ್ಯಕರ್ತರು ಮತ್ತು ಸಾರ್ವಜನಿಕರು ಸೇರಿ ಕಾರ್ಯಕ್ರಮ ವೀಕ್ಷಿಸಿದರು. ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಕ್ಷಣದಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಜಯಘೋಷ ಮೊಳಗಿಸಿ, ಸಾರ್ವಜನಿಕರಿಗೆ ಸಿಹಿ ಹಂಚುವ ಮೂಲಕ ಸಂತಸ ವ್ಯಕ್ತಪಡಿಸಿದರು.

ತಾಲ್ಲೂಕಿನ ಸಾತನೂರು ಹೋಬಳಿ ಕೇಂದ್ರದಲ್ಲಿಯೂ ಕಾಂಗ್ರೆಸ್ ಕಾರ್ಯಕರ್ತರು ಡಿಕೆಶಿ ಅವರ ಬೃಹತ್ ಕಟೌಟ್‌ಗೆ ಪುಷ್ಪಹಾರ ಅರ್ಪಿಸಿ ಸಂಭ್ರಮಿಸಿದರು. ಪಟಾಕಿ ಸಿಡಿಸಿ, ಸಿಹಿ ಹಂಚಿ ಹಾಗೂ ಅನ್ನದಾನ ಕಾರ್ಯಕ್ರಮ ಆಯೋಜಿಸುವ ಮೂಲಕ ದಿನವಿಡೀ ವಿಜಯೋತ್ಸವ ಆಚರಿಸಲಾಯಿತು.

06/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಜೆಜೆಎಂ ಕಾಮಗಾರಿ ನೆನೆಗುದಿಗೆ: ಜನರ ಪ್ರಶ್ನೆಗೆ ಬೇಕಿದೆ ಉತ್ತರ

ಬಂಗಾರಪೇಟೆ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜಲ ಜೀವನ್ ಮಿಷನ್ ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಜಾರಿಗೆ ಬಂದಿದೆ. "ಹರ್ ಘರ್ ಜಲ್" ಎಂಬ ಘೋಷಣೆಯೊಂದಿಗೆ ಆರಂಭವಾದ ಈ ಯೋಜನೆ ಲಕ್ಷಾಂತರ ಕುಟುಂಬಗಳ ಬದುಕಿನಲ್ಲಿ ಬದಲಾವಣೆ ತರಬೇಕಿತ್ತು. ಆದರೆ ಬಂಗಾರಪೇಟೆ ತಾಲ್ಲೂಕಿನ ಹುಣಸನಹಳ್ಳಿ ಗ್ರಾಮದಲ್ಲಿ ಈ ಯೋಜನೆ ಜನರಿಗೆ ಆಶಾಕಿರಣವಾಗುವುದಕ್ಕಿಂತ ಹೆಚ್ಚಾಗಿ ಸಂಕಷ್ಟದ ಕಾರಣವಾಗಿ ಪರಿಣಮಿಸಿರುವುದು ವಿಷಾದನೀಯ.

ಒಂದು ವರ್ಷಕ್ಕೂ ಹೆಚ್ಚು ಕಾಲದಿಂದ ಕಾಮಗಾರಿ ಪೂರ್ಣಗೊಳ್ಳದೆ ಇರುವುದರಿಂದ ಗ್ರಾಮಸ್ಥರು ಸಂಕಷ್ಟ ಅನುಭವಿಸುತ್ತಿದ್ದಾರೆ. ಪೈಪ್‌ಲೈನ್ ಅಳವಡಿಕೆಗಾಗಿ ಅಗೆದ ರಸ್ತೆಗಳು ಇಂದಿಗೂ ಸರಿಪಡಿಸದಿರುವುದು ಗುತ್ತಿಗೆದಾರರ



ನಿರ್ಲಕ್ಷ್ಯವನ್ನು ಸ್ಪಷ್ಟವಾಗಿ ತೋರಿಸುತ್ತದೆ. ಮಳೆ ಬಂದಾಗ ರಸ್ತೆಗಳು ಕೆಸರುಗುಂಡಿಗಳಾಗಿ ಮಾರ್ಪಡುತ್ತಿದ್ದು, ಶಾಲಾ ಮಕ್ಕಳು, ವೃದ್ಧರು ಮತ್ತು ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಅಭಿವೃದ್ಧಿ ಕಾಮಗಾರಿ ಜನರ ಜೀವನ ಸುಗಮಗೊಳಿಸಬೇಕಾದರೆ, ಇಲ್ಲಿ ಅದೇ ಕಾಮಗಾರಿ ಜನರ ದೈನಂದಿನ ಬದುಕಿಗೆ ಅಡ್ಡಿಯಾಗಿರುವುದು ದುರಂತವೇ ಸರಿ.

ಇದಲ್ಲದೆ, ಮನೆಗಳಿಗೆ ಸಂಪರ್ಕ ಕಲ್ಪಿಸುವ ಕೊಳಾಯಿ ವ್ಯವಸ್ಥೆಯೂ ಅಪೂರ್ಣವಾಗಿರುವುದು ಯೋಜನೆಯ ಗುಣಮಟ್ಟದ ಮೇಲೆಯೇ ಪ್ರಶ್ನೆ ಎಬ್ಬಿಸಿದೆ. ಹಾಳಾಗಿರುವ ಮೀಟರ್ ಬಾಕ್ಸ್‌ಗಳು, ಕಿತ್ತುಹೋಗಿರುವ ಪೈಪ್‌ಗಳು ಮತ್ತು ಸುರಕ್ಷತಾ ಕ್ರಮವಿಲ್ಲದೆ ಬಿಟ್ಟಿರುವ ಕಾಮಗಾರಿ ಸ್ಥಳಗಳು ಸಾರ್ವಜನಿಕರ ಜೀವಕ್ಕೂ ಅಪಾಯ ಉಂಟುಮಾಡುತ್ತಿವೆ. ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಡೆಯುವ ಕಾಮಗಾರಿಯಲ್ಲಿ ಈ ಮಟ್ಟದ ನಿರ್ಲಕ್ಷ್ಯ ನಡೆಯುತ್ತಿದ್ದರೆ, ಸಾರ್ವಜನಿಕ ಹಣದ ಸಮರ್ಪಕ ಬಳಕೆಯ ಬಗ್ಗೆ ಅನುಮಾನ ಮೂಡುವುದು ಸಹಜ.

ಅಧಿಕಾರಿಗಳು ಗುತ್ತಿಗೆದಾರರಿಗೆ ನೋಟಿಸ್ ನೀಡಿದ್ದರೂ ಯಾವುದೇ ಬದಲಾವಣೆ ಕಾಣದಿರುವುದು ಆಡಳಿತದ ಪರಿಣಾಮಕಾರಿತ್ವವನ್ನೇ ಪ್ರಶ್ನಿಸುವಂತಾಗಿದೆ. ಸರ್ಕಾರಿ ಯೋಜನೆಗಳು ಕಾಗದದಲ್ಲಿ ಮಾತ್ರ ಉಳಿಯಬಾರದು; ಅವು ಜನರ ಮನೆಬಾಗಿಲಿಗೆ ಫಲಿತಾಂಶವಾಗಿ ತಲುಪಬೇಕು. ಕಾಮಗಾರಿ ವಿಳಂಬವಾದಾಗ ಅದರ ಹೊರೆ ಸಾಮಾನ್ಯ ಜನರ ಮೇಲೆಯೇ ಬೀಳುತ್ತದೆ ಎಂಬುದನ್ನು ಅಧಿಕಾರಿಗಳು ಅರಿತುಕೊಳ್ಳಬೇಕು.

ಹುಣಸನಹಳ್ಳಿ ಗ್ರಾಮದ ಪರಿಸ್ಥಿತಿ ಇಂದು ರಾಜ್ಯದ ಅನೇಕ ಗ್ರಾಮಗಳಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ನಿಜಸ್ವರೂಪವನ್ನು ಬಿಚ್ಚಿಡುತ್ತಿದೆ. ಯೋಜನೆ ಘೋಷಿಸುವುದು ಮಾತ್ರ ಸಾಕಾಗುವುದಿಲ್ಲ; ಅದರ ಗುಣಮಟ್ಟದ ಅನುಷ್ಠಾನವೂ ಅಷ್ಟೇ ಮುಖ್ಯ. ಜನರ ತೆರಿಗೆ ಹಣದಿಂದ ನಡೆಯುವ ಕಾಮಗಾರಿಗಳಲ್ಲಿ ಜವಾಬ್ದಾರಿ, ಪಾರದರ್ಶಕತೆ ಮತ್ತು ಸಮಯಪಾಲನೆ ಅತ್ಯಗತ್ಯ.

ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಕಾಮಗಾರಿ ವಿಳಂಬ ಹಾಗೂ ಕಳಪೆ ನಿರ್ವಹಣೆಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಉಳಿದಿರುವ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸುವುದು ಈಗ ಅತ್ಯಾವಶ್ಯಕವಾಗಿದೆ. "ಮನೆ ಮನೆಗೆ ನೀರು ಯಾವಾಗ?" ಎಂಬ ಹುಣಸನಹಳ್ಳಿ ಜನರ ಪ್ರಶ್ನೆಗೆ ಈಗ ಮಾತಲ್ಲ, ಕಾರ್ಯರೂಪದ ಉತ್ತರ ಸಿಗಬೇಕಾಗಿದೆ.

# ಮತ್ತಿಹಳ್ಳಿಯಲ್ಲಿ ಮರದ ಕೊಂಬೆ ಮುರಿದು ಬಿದ್ದು ರೈತನಿಗೆ ಗಂಭೀರ ಗಾಯ

ತಿಪಟೂರು

ತಾಲೂಕಿನ ಕಸಬಾ ಹೋಬಳಿಯ ಮತ್ತಿಹಳ್ಳಿ ಗ್ರಾಮದಲ್ಲಿ ಮರದ ದೊಡ್ಡ ಕೊಂಬೆ ಮುರಿದು ಬಿದ್ದ ಪರಿಣಾಮ ರೈತನೊಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಮತ್ತೊಬ್ಬರು ಸಣ್ಣ ಪ್ರಮಾಣದ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾದ ಘಟನೆ ನಡೆದಿದೆ.

ಗ್ರಾಮದ ಹಾಲಿನ ಡೈರಿ ಸಮೀಪದ ಸೇತುವೆ ಮೇಲೆ ಗ್ರಾಮಸ್ಥರು ಕುಳಿತಿದ್ದ ವೇಳೆ ಹಗಲರಾಣಿ ಮರದ ಭಾರೀ ಕೊಂಬೆ ಏಕಾಏಕಿ ಮುರಿದು ಕೆಳಗೆ ಬಿದ್ದಿದೆ. ಮರದ ಕೆಳಭಾಗದಲ್ಲಿ ಕುಳಿತಿದ್ದವರ ಮೇಲೆ ಕೊಂಬೆ ಬಿದ್ದ ಪರಿಣಾಮ ಗ್ರಾಮದ ರೈತ ಎಂ.ಸಿ. ರಮೇಶ್ ಅವರ ತಲೆ ಹಾಗೂ ಸೊಂಟ ಭಾಗಗಳಿಗೆ ಗಂಭೀರ ಗಾಯಗಳಾಗಿವೆ.

ಇನ್ನೊಬ್ಬ ಹಾಲು ಉತ್ಪಾದಕ ಗಂಗಾಧರ್ ಅವರಿಗೆ ಸಣ್ಣ ಪ್ರಮಾಣದ ಗಾಯಗಳಾಗಿದ್ದು, ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಗಾಯಗೊಂಡ ರಮೇಶ್ ಅವರನ್ನು ತಕ್ಷಣ ತಿಪಟೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಯಿತು. ಬಳಿಕ ಹೆಚ್ಚಿನ ಚಿಕಿತ್ಸೆಯ ಅಗತ್ಯವಿದ್ದರಿಂದ ಅವರನ್ನು ಹಾಸನ ಸಾರ್ವಜನಿಕ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ವೈದ್ಯರು ರಮೇಶ್ ಅವರ ತಲೆಗೆ 12 ಹೊಲಿಗೆಗಳನ್ನು ಹಾಕಿದ್ದು, ಸೊಂಟ ಹಾಗೂ ತೊಡೆ ಭಾಗಗಳಲ್ಲಿಯೂ ಗಂಭೀರ ಗಾಯಗಳಾಗಿರುವ ಹಿನ್ನೆಲೆಯಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ.

ಘಟನೆಯಿಂದ ಗ್ರಾಮದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಸಾರ್ವಜನಿಕ ಸ್ಥಳಗಳಲ್ಲಿರುವ ಹಳೆಯ ಹಾಗೂ ಅಪಾಯಕಾರಿಯಾದ ಮರಗಳ ಪರಿಶೀಲನೆ ನಡೆಸಿ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಮೂರು ದಿನಗಳ ಮಾವು, ಹಲಸು ಮತ್ತು ಹಣ್ಣುಗಳ ಮೇಳ

ಬೆಂಗಳೂರು ಗ್ರಾಮಾಂತರ

ಮಾವು ಮತ್ತು ಹಲಸು ಹಣ್ಣಿನ ಋತುಮಾನ ಹಿನ್ನೆಲೆಯಲ್ಲಿ ರೈತರು ಹಾಗೂ ಗ್ರಾಹಕರಿಗೆ ಅನುಕೂಲವಾಗುವ ಉದ್ದೇಶದಿಂದ ತೋಟಗಾರಿಕೆ ಇಲಾಖೆ ವತಿಯಿಂದ ಮೂರು ದಿನಗಳ "ಮಾವು, ಹಲಸು ಮತ್ತು ಇತರೆ ಹಣ್ಣುಗಳ ಪ್ರದರ್ಶನ ಹಾಗೂ ಮಾರಾಟ ಮೇಳ"ವನ್ನು ಆಯೋಜಿಸಲಾಗಿದೆ.

ಜೂನ್ 5ರಿಂದ 7ರವರೆಗೆ ದೇವನಹಳ್ಳಿ ಟೌನ್‌ನ ರಾಣಿ ಕ್ರಾಸ್ ಸಮೀಪ, ನಂದಿ ಬೆಟ್ಟಕ್ಕೆ ಹೋಗುವ ರಸ್ತೆಯಲ್ಲಿರುವ ಹೋಟೆಲ್ ನಂದಿ ಉಪಚಾರ್ ಮುಂಭಾಗದಲ್ಲಿ ಈ ಮೇಳ ನಡೆಯಲಿದೆ ಎಂದು ಡಾ. ವಾಸಂತಿ ಅಮರ್ ತಿಳಿಸಿದ್ದಾರೆ.

ಮಾವು ಮತ್ತು ಹಲಸು ಋತುಮಾನ ಆಧಾರಿತ ಬೆಳೆಗಳಾಗಿದ್ದು, ಪ್ರಸ್ತುತ ಹಂಗಾಮಿನಲ್ಲಿ ಕಟಾವಿಗೆ ಬಂದಿರುವ ಹಣ್ಣುಗಳಿಗೆ ರೈತರಿಗೆ ಉತ್ತಮ ಬೆಲೆ ದೊರಕುವಂತೆ ಹಾಗೂ ಗ್ರಾಹಕರಿಗೆ ನೈಸರ್ಗಿಕವಾಗಿ ಮಾಗಿಸಿದ ಗುಣಮಟ್ಟದ ಹಣ್ಣುಗಳು ಲಭ್ಯವಾಗುವಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಮೇಳವನ್ನು ಆಯೋಜಿಸಲಾಗಿದೆ ಎಂದು ಅವರು ಹೇಳಿದರು.

ಈ ಮೇಳದಲ್ಲಿ 50ಕ್ಕೂ ಹೆಚ್ಚು ವಿವಿಧ ತಳಿಗಳ ಮಾವು, ಹಲಸು ಹಾಗೂ ಇತರೆ ಹಣ್ಣುಗಳ ಪ್ರದರ್ಶನ ಮತ್ತು ಮಾರಾಟ ವ್ಯವಸ್ಥೆ ಮಾಡಲಾಗಿದೆ. ರೈತರಿಂದ ನೇರವಾಗಿ ಗ್ರಾಹಕರಿಗೆ ಹಣ್ಣುಗಳನ್ನು ಮಾರಾಟ ಮಾಡುವ ವ್ಯವಸ್ಥೆ ಕಲ್ಪಿಸಲಾಗಿದ್ದು, ಸಾರ್ವಜನಿಕರು ತಮ್ಮ ಇಷ್ಟದ ಹಣ್ಣುಗಳನ್ನು ಖರೀದಿಸಬಹುದಾಗಿದೆ.

# ರಸ್ತೆ ಮಧ್ಯೆ ಯುಜಿಡಿ ಹೊಂಡ: ಕೊತ್ತೂರು ವಿರುದ್ಧ ವ್ಯಂಗ್ಯ



ಕೋಲಾರ

ನಗರದ ಕ್ಲಾಕ್ ಟವರ್‌ನಿಂದ ಡೂಂಲೈಟ್ ಸರ್ಕಲ್‌ಗೆ ಸಂಪರ್ಕ ಕಲ್ಪಿಸುವ ಡಬಲ್ ರಸ್ತೆಯಲ್ಲಿ ಜಿಇಎಫ್ ಕಣ್ಣಿನ ಆಸ್ಪತ್ರೆ ಎದುರು ನಿರ್ಮಾಣವಾಗಿರುವ ಯುಜಿಡಿ ಹೊಂಡಕ್ಕೆ ಬೈಕ್ ಸವಾರರೊಬ್ಬರು ಬಿದ್ದು ಗಂಭೀರವಾಗಿ ಗಾಯಗೊಂಡ ಘಟನೆ ಬುಧವಾರ ಸಂಜೆ ನಡೆದಿದೆ.

ಗಾಯಗೊಂಡ ಯುವಕನನ್ನು ಸ್ಥಳೀಯ ನಾಗರಿಕರು ರಕ್ಷಿಸಿ ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಿದ್ದಾರೆ.

ಘಟನೆಯ ಬೆನ್ನಲ್ಲೇ ಗುರುವಾರ ಬೆಳಗ್ಗೆ ಕೋಲಾರ ಡೂಂಲೈಟ್ ಪಾರ್ಟಿ ಅಭಿಯಾನ ಆರಂಭಿಸಿರುವ ಕೆ. ಶ್ರೀನಿವಾಸಗೌಡ ಅವರು ಹೊಂಡದ ಬಳಿ ಏಕಾಂಗಿ ಪ್ರತಿಭಟನೆ ನಡೆಸಿದರು. ರಸ್ತೆ ಮಧ್ಯದ ಹೊಂಡದಲ್ಲಿ ಕಲ್ಲುಗಳನ್ನು ಹಾಕಿ, ವಾಹನ ಸವಾರರಿಗೆ ಎಚ್ಚರಿಕೆಯಾಗಿ ಒಣಗಿದ ಗಿಡವನ್ನೂ ನೆಟ್ಟು ಗಮನ ಸೆಳೆದರು.

ಈ ವೇಳೆ ಶಾಸಕ ಕೊತ್ತೂರು ಮಂಜುನಾಥ್ ವಿರುದ್ಧ ವ್ಯಂಗ್ಯವಾಡಿದ ಶ್ರೀನಿವಾಸಗೌಡ, "ಡೂಂಲೈಟ್ ಸರ್ಕಲ್‌ನಲ್ಲಿ ಟೀ ಕುಡಿದುಕೊಂಡು ನನ್ನ ವಿರುದ್ಧ ಮಾತನಾಡುವವರ ಬಗ್ಗೆ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ ಎಂದು ಹೇಳುವ ಶಾಸಕರು, ನಗರದ ಸಮಸ್ಯೆಗಳ ಬಗ್ಗೆ ಗಮನ ಹರಿಸಬೇಕು" ಎಂದು ಹೇಳಿದರು.

# ಎಸ್‌ಐಆರ್‌ಗೆ ಸಾರ್ವಜನಿಕರ ಸಹಕಾರ ಅಗತ್ಯ: ಜಿಲ್ಲಾಧಿಕಾರಿ ಜಿ.ಪ್ರಭು

ಚಿಕ್ಕಬಳ್ಳಾಪುರ

ಜಿ.ಪ್ರಭು ಅವರು ಜಿಲ್ಲೆಯ ಯಾವುದೇ ಅರ್ಹ ನಾಗರಿಕ ಮತದಾರರ ಪಟ್ಟಿಯಿಂದ ಹೊರಗುಳಿದು ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಹಾಗೂ ಯಾವುದೇ ಅನರ್ಹ ವ್ಯಕ್ತಿ ಮತದಾರರ ಪಟ್ಟಿಯಲ್ಲಿ ಸೇರಬಾರದು ಎಂಬುದು "ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯ ಭಾಗವಾಗಿ ಸಿದ್ಧತಾ ಕಾರ್ಯ, ತರಬೇತಿ, ಮುದ್ರಣ ಕಾರ್ಯ, ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆ ಮನೆ ಭೇಟಿ, ಮತಗಟ್ಟೆಗಳ ಪುನರ್ವಿಂಗಡಣೆ, ಆಕ್ಷೇಪಣೆ ಸ್ವೀಕೃತಿ ಹಾಗೂ ವಿಲೇವಾರಿ ಸೇರಿದಂತೆ ವಿವಿಧ ಹಂತದ ಕಾರ್ಯಗಳು ಇಂದಿನಿಂದ ಆರಂಭಗೊಂಡಿದ್ದು, ಅಕ್ಟೋಬರ್



7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ಮಾಹಿತಿ ನೀಡಿದರು.

ಈ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳಿಗೆ ದಿನಾಂಕವಾರು ಮಾಹಿತಿಯನ್ನು ಹಂಚಿಕೊಳ್ಳುವ ಉದ್ದೇಶದಿಂದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿಯೂ ಎಲ್ಲಾ ಮಾಹಿತಿಯನ್ನು ಕಾಲೋಚಿತವಾಗಿ ನೀಡಲಾಗುವುದು ಎಂದು ಹೇಳಿದರು.

ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 2025ರ ಮತದಾರರ ಪಟ್ಟಿ ಅನ್ವಯ ಒಟ್ಟು 10,69,693 ಮತದಾರರು ಇದ್ದಾರೆ. ಈ ಪೈಕಿ 10,18,489 ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು, ಶೇ.95.21 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಪರಿಷ್ಕರಣೆ ಕಾರ್ಯಕ್ಕಾಗಿ 5 ಮತದಾರ ನೋಂದಣಾಧಿಕಾರಿಗಳು, 10 ಸಹಾಯಕ ಮತದಾರ ನೋಂದಣಾಧಿಕಾರಿಗಳು, 1293 ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿ.ಎಲ್.ಒ) ಹಾಗೂ 129 ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ ಎಂದರು.

ಈ ತಿಂಗಳ 30ರಿಂದ ಜುಲೈ 29ರವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಜಿಲ್ಲೆಯ ಎಲ್ಲಾ ಮತದಾರರಿಗೆ ಗಣತಿ ನಮೂನೆಯನ್ನು ದ್ವಿಪ್ರತಿಯಲ್ಲಿ ವಿತರಿಸಿ, ಭರ್ತಿ ಮಾಡಿದ ನಮೂನೆಗಳನ್ನು ಸ್ವೀಕರಿಸಲಿದ್ದಾರೆ. ಮತದಾರರು ಈ ನಮೂನೆಯನ್ನು ಭರ್ತಿ ಮಾಡಿ ಸಲ್ಲಿಸದಿದ್ದಲ್ಲಿ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗುವುದಿಲ್ಲ. ಆದ್ದರಿಂದ ಜಿಲ್ಲೆಯ ಎಲ್ಲಾ ನಾಗರಿಕರು ಅಧಿಕಾರಿಗಳಿಗೆ ಅಗತ್ಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

1200ಕ್ಕೂ ಹೆಚ್ಚು ಮತದಾರರು ಇರುವ ಜಿಲ್ಲೆಯ 149 ಮತಗಟ್ಟೆಗಳಲ್ಲಿ ಹೆಚ್ಚುವರಿ ಮತಗಟ್ಟೆ ತೆರೆಯಲು ಕ್ರಮ ಕೈಗೊಳ್ಳಲಾಗಿದೆ. ಪ್ರತಿ ಮತಗಟ್ಟೆಗೆ ರಾಜಕೀಯ ಪಕ್ಷಗಳಿಂದ ಒಬ್ಬ ಮತಗಟ್ಟೆ ಮಟ್ಟದ ಏಜೆಂಟ್–2ರನ್ನು ನೇಮಕ ಮಾಡಬೇಕಿದ್ದು, ಎಲ್ಲಾ ರಾಜಕೀಯ ಪಕ್ಷಗಳು ತಮ್ಮ ಏಜೆಂಟರ ಪಟ್ಟಿಯನ್ನು ಶೀಘ್ರ ಸಲ್ಲಿಸಬೇಕು ಎಂದು ಕೋರಿದರು.

ಈ ಸಂದರ್ಭದಲ್ಲಿ ಡಾ. ಎನ್. ಭಾಸ್ಕರ್, ಡಿ.ಹೆಚ್. ಅಶ್ವಿನ್, ಕಾಂಗ್ರೆಸ್ ಪಕ್ಷದ ಪ್ರತಿನಿಧಿ ಮಧುಸೂದನ್, ಬಿಜೆಪಿ ಪ್ರತಿನಿಧಿ ಲಕ್ಷ್ಮೀನಾರಾಯಣಗುಪ್ತ, ಸಿಪಿಐಎಂ ಪಕ್ಷದ ಪ್ರತಿನಿಧಿ ಮುನಿಕೃಷ್ಣಪ್ಪ ಸೇರಿದಂತೆ ವಿವಿಧ ತಾಲ್ಲೂಕುಗಳ ತಹಸೀಲ್ದಾರರು, ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಅತಿಭಾರ ಟಿಪ್ಪರ್ ಲಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

ಕೋಲಾರ

ತಾಲ್ಲೂಕಿನ ವೇಮಗಲ್ ಹಾಗೂ ನರಸಾಪುರ ಭಾಗಗಳಲ್ಲಿ ಅತಿಭಾರ ಹೊತ್ತು ಸಂಚರಿಸುತ್ತಿರುವ ಟಿಪ್ಪರ್ ಮತ್ತು ಲಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ದಲಿತ ಸಂಘಟನೆಗಳ ಸಂಯುಕ್ತರಂಗದ ನೇತೃತ್ವದಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಗುರುಪ್ರಸಾದ್ ಅವರಿಗೆ ಗುರುವಾರ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ದಲಿತ ಸಂಘಟನೆಗಳ ಸಂಯುಕ್ತರಂಗದ ಜಿಲ್ಲಾ ಅಧ್ಯಕ್ಷ ಡಿಪಿಎಸ್ ಮುನಿರಾಜು ಮಾತನಾಡಿ, ವೇಮಗಲ್ ಹೋಬಳಿ ಬೆಟ್ಟಹೊಸಪುರ ಭಾಗ ಹಾಗೂ ನರಸಾಪುರ ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯ ಜಲ್ಲಿ ಕ್ರಷರ್‌ಗಳಿಂದ ಟಿಪ್ಪರ್ ಮತ್ತು ಲಾರಿಗಳಿಗೆ ಬಾರಮಿತಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಜಲ್ಲಿ ಹಾಗೂ ಎಂ–ಸ್ಯಾಂಡ್ ತುಂಬಲಾಗುತ್ತಿದೆ ಎಂದು ಆರೋಪಿಸಿದರು.

ಅತಿಭಾರದಿಂದ ರಸ್ತೆಗಳಿಗೆ ಹಾನಿಯಾಗುತ್ತಿದ್ದು, ಸುರಕ್ಷತಾ ಕ್ರಮಗಳಿಲ್ಲದೆ ಸಾಗಾಟ ನಡೆಸುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ. ದ್ವಿಚಕ್ರ ವಾಹನ ಸವಾರರು ಧೂಳು ಹಾಗೂ ಜಲ್ಲಿಕಲ್ಲುಗಳಿಂದ ಅಪಾಯ ಎದುರಿಸುತ್ತಿದ್ದಾರೆ ಎಂದು ಹೇಳಿದರು.

ಕಾನೂನು ಉಲ್ಲಂಘಿಸುವ ಕ್ರಷರ್, ಟಿಪ್ಪರ್ ಮತ್ತು ಲಾರಿ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಂಡು, ಬಾರಮಿತಿ ಮೀರಿ ಸಂಚರಿಸುವ ವಾಹನಗಳನ್ನು ನಿಯಂತ್ರಿಸಬೇಕು ಎಂದು ಒತ್ತಾಯಿಸಿದರು.

ದಮನಿತರ ಸೇವಾ ಸಮಿತಿ ರಾಜ್ಯಾಧ್ಯಕ್ಷ ಮೇಡಿಹಾಳ ಮುನಿಅಂಜಿನಪ್ಪ ಮಾತನಾಡಿ, ಸಾರ್ವಜನಿಕರ ಸುರಕ್ಷತೆ ಹಾಗೂ ರಸ್ತೆ ಸಂರಕ್ಷಣೆ ದೃಷ್ಟಿಯಿಂದ ಸಾರಿಗೆ ಇಲಾಖೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಶಾಲಾ–ಕಾಲೇಜು ವಾಹನಗಳ ಸುರಕ್ಷತಾ ತಪಾಸಣೆಯನ್ನೂ ಕಡ್ಡಾಯಗೊಳಿಸಬೇಕು ಎಂದು ಮನವಿ ಮಾಡಿದರು.

ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ತ್ವರಿತ ಕ್ರಮ ಕೈಗೊಳ್ಳುವ ವಿಶ್ವಾಸವಿದೆ ಎಂದು ಸಂಘಟನೆಗಳ ಮುಖಂಡರು ಅಭಿಪ್ರಾಯಪಟ್ಟರು.

# 'ಕಂದಾಯ ಭೂಮಿಯನ್ನು ಎಸ್‌ಐಟಿಗೆ ನೀಡಬೇಡಿ'

ಕೋಲಾರ

ಜಿಲ್ಲೆಯಲ್ಲಿ ಅರಣ್ಯ ಇಲಾಖೆಯ ಕ್ರಮಗಳಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರ ಕಂದಾಯ ಭೂಮಿಗಳನ್ನು ಯಾವುದೇ ಕಾರಣಕ್ಕೂ ಎಸ್‌ಐಟಿಗೆ ಹಸ್ತಾಂತರಿಸಬಾರದು ಎಂದು ಒತ್ತಾಯಿಸಿ ಭೂ ಸಂತ್ರಸ್ತರ ಹೋರಾಟ ಸಮಿತಿಯ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಎಂ.ಆರ್. ರವಿ ಅವರಿಗೆ ಗುರುವಾರ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಭೂ ಸಂತ್ರಸ್ತರ ಹೋರಾಟ ಸಮಿತಿಯ ಜಿಲ್ಲಾ ಸಂಚಾಲಕ ಆರ್. ಶ್ರೀನಿವಾಸನ್ ಮಾತನಾಡಿ, ಜಿಲ್ಲೆಯಲ್ಲಿನ ಅನೇಕ ರೈತರು ಮಹಾರಾಜರ ಕಾಲದಿಂದಲೂ ಕಂದಾಯ ಗೋಮಾಳ ಮತ್ತು ಒಣಭೂಮಿಗಳನ್ನು ಅಭಿವೃದ್ಧಿಪಡಿಸಿಕೊಂಡು ಕೃಷಿ ನಡೆಸುತ್ತಿದ್ದಾರೆ. ಇಂತಹ ಭೂಮಿಗಳ ಕುರಿತು ಅರಣ್ಯ ಇಲಾಖೆ ವಿವಿಧ ಆದೇಶಗಳನ್ನು ಉಲ್ಲೇಖಿಸಿ ರೈತರು ಹಾಗೂ ಕಂದಾಯ ಅಧಿಕಾರಿಗಳಿಗೆ ಗೊಂದಲ ಉಂಟುಮಾಡುತ್ತಿದೆ ಎಂದು ಆರೋಪಿಸಿದರು.

ತಾಲ್ಲೂಕಿನ ಹುತ್ತೂರು ಹೋಬಳಿ



ವ್ಯಾಪ್ತಿಯ ಶಿಳ್ಳೆಂಗೆರೆ, ಹರಟಿ, ಮಲ್ಲಂಡಳ್ಳಿ, ಕೋಟಿಗಾನಹಳ್ಳಿ, ಅಬ್ಬಣಿ ಹಾಗೂ ಅರಳಕುಂಟೆ ಗ್ರಾಮಗಳ ಸುಮಾರು 200 ಎಕರೆ ಪ್ರದೇಶದಲ್ಲಿ ರೈತರ ಜಮೀನುಗಳಿಗೆ ತೊಂದರೆ ಉಂಟಾಗಿದೆ ಎಂದು ದೂರಿದರು.

ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜನಪ್ರತಿನಿಧಿಗಳು ಕೆಡಿಪಿ ಸಭೆಯಲ್ಲಿ ಯಾವುದು ಅರಣ್ಯ ಭೂಮಿ ಮತ್ತು ಯಾವುದು ರೈತರ ಕಂದಾಯ ಭೂಮಿ ಎಂಬುದನ್ನು ಜಂಟಿ ಸರ್ವೆ ಮೂಲಕ ಸ್ಪಷ್ಟಪಡಿಸಬೇಕು ಎಂದು ಸೂಚಿಸಿದ್ದರೂ, ರೈತರಿಗೆ ಇನ್ನೂ ಸಮಸ್ಯೆಗಳು ಮುಂದುವರಿದಿವೆ ಎಂದು ಹೇಳಿದರು.

ಅರಣ್ಯ ಅಧಿಕಾರಿಗಳು ಲಕ್ಷಾಂತರ ಗಿಡಮರಗಳನ್ನು ನಾಶಪಡಿಸಿದ್ದು, ಅಧಿಕಾರ ದುರುಪಯೋಗದ ಮೂಲಕ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ರೈತರ ಭೂಮಿಗಳಿಗೆ ಹಾನಿ ಉಂಟುಮಾಡಲಾಗಿದೆ ಎಂದು ಆರೋಪಿಸಿದರು.

ಯಾವುದೇ ಕಾರಣಕ್ಕೂ ಕಂದಾಯ ಇಲಾಖೆಯ ಅಧಿಕಾರಿಗಳು ರೈತರ ಕಂದಾಯ ಭೂಮಿಯನ್ನು ತಪ್ಪಾಗಿ ಅರಣ್ಯ ಭೂಮಿ ಎಂದು ಗುರುತಿಸಿ ಎಸ್‌ಐಟಿಗೆ ವರದಿ ನೀಡಬಾರದು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ ಎಂ.ಆರ್. ರವಿ, ಕಂದಾಯ ಇಲಾಖೆಯ ದಾಖಲೆಗಳನ್ನು ಸಮಗ್ರವಾಗಿ ಪರಿಶೀಲಿಸಿದ ಬಳಿಕವೇ ಎಸ್‌ಐಟಿಗೆ ವರದಿ ಸಲ್ಲಿಸಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಭೂ ಸಂತ್ರಸ್ತರ ಹೋರಾಟ ಸಮಿತಿಯ ಜಿಲ್ಲಾ ಸಂಚಾಲಕ ವೆಂಕಟರವಣಪ್ಪ, ಭಟ್ರಹಳ್ಳಿ ಮಂಜುನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದಾಖಲಾತಿ ಅವಧಿ ವಿಸ್ತರಣೆ

ತುಮಕೂರು

ಜಿಲ್ಲೆಯ ಶಿರಾ ತಾಲೂಕು ಚಿಕ್ಕನಹಳ್ಳಿಯಲ್ಲಿರುವ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ ಸಾಲಿನ ದಾಖಲಾತಿ ಅವಧಿಯನ್ನು ಜೂನ್ 12ರವರೆಗೆ ವಿಸ್ತರಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ.

ಸಾಮಾನ್ಯ ವಿದ್ಯಾರ್ಥಿಗಳು ಪಿಯುಸಿಯಲ್ಲಿ ಕನಿಷ್ಟ ಶೇ. 50 ಅಂಕ ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ–1/ ವಿಕಲಚೇತನ ವಿದ್ಯಾರ್ಥಿಗಳು ಕನಿಷ್ಟ ಶೇ. 45ರಷ್ಟು ಅಂಕ ಗಳಿಸಿರಬೇಕು.

ವಿದ್ಯಾರ್ಥಿಗಳಿಗೆ ಡಿ.ಇಎಲ್.ಇಡಿ ತರಬೇತಿ ಪಡೆದ ನಂತರ 1 ರಿಂದ 5ನೇ ತರಗತಿ ಹಾಗೂ ಪದವೀದರ ವಿದ್ಯಾರ್ಥಿಗಳಿಗೆ 6 ರಿಂದ 8ನೇ ತರಗತಿವರೆಗೆ ಬೋಧನೆ ಮಾಡಲು ಅವಕಾಶವಿರುತ್ತದೆ.

ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶಾವಕಾಶವಿದ್ದು, ಸಾಮಾನ್ಯ ವಿದ್ಯಾರ್ಥಿಗಳಿಗೆ 3500 ರೂ.ಗಳ ಪ್ರವೇಶ ಶುಲ್ಕವನ್ನು ನಿಗಧಿಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂ. 9448842578, 9741507942, 9980870260, 9448175537, 9980578820, 9900862992, 9480250487ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ ಪ್ರಾಂಶುಪಾಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಜಾಬ್ ಆದೇಶ ವಿರೋಧಿಸಿ ಕೇಸರಿ ಶಾಲು ವಿತರಣೆ

ಕನಕಪುರ

ರಾಜ್ಯ ಸರ್ಕಾರ ಶಾಲಾ–ಕಾಲೇಜುಗಳಲ್ಲಿ ಹಿಜಾಬ್ ಧರಿಸಲು ಅವಕಾಶ ನೀಡಿರುವ ಆದೇಶವನ್ನು ವಿರೋಧಿಸಿ ಹಾಗೂ ಸಮವಸ್ತ್ರ ವ್ಯವಸ್ಥೆಯನ್ನು ಉಳಿಸಬೇಕೆಂದು ಆಗ್ರಹಿಸಿ ಶ್ರೀ ರಾಮ ಸೇನೆ ವತಿಯಿಂದ ರಾಜ್ಯಾದ್ಯಂತ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ವಿತರಿಸುವ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ಕನಕಪುರದ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಶ್ರೀರಾಮ ಸೇನೆಯ ಪದಾಧಿಕಾರಿಗಳು ಕೇಸರಿ ಶಾಲುಗಳನ್ನು ವಿತರಿಸಿದರು.

ಈ ವೇಳೆ ಮಾತನಾಡಿದ ನಾಗಾರ್ಜುನಗೌಡ, ಶಾಲೆ ಮತ್ತು ಕಾಲೇಜುಗಳು ಶಿಕ್ಷಣ, ಶಿಸ್ತು ಹಾಗೂ ರಾಷ್ಟ್ರೀಯ ಏಕತೆಯ ಕೇಂದ್ರಗಳಾಗಬೇಕೇ ಹೊರತು ಧಾರ್ಮಿಕ



ಪ್ರತ್ಯೇಕತೆಯ ವೇದಿಕೆಗಳಾಗಬಾರದು ಎಂದು ಹೇಳಿದರು.

ಸಮವಸ್ತ್ರ ವ್ಯವಸ್ಥೆಯ ಮೂಲ ಉದ್ದೇಶ ವಿದ್ಯಾರ್ಥಿಗಳ ನಡುವೆ ಸಮಾನತೆ ಮತ್ತು ಏಕತೆಯ ಭಾವನೆ ಬೆಳೆಸುವುದಾಗಿದೆ. ರಾಜ್ಯ ಸರ್ಕಾರದ ಇತ್ತೀಚಿನ ನಿರ್ಧಾರ ಸಮವಸ್ತ್ರ ವ್ಯವಸ್ಥೆಯ ಮಹತ್ವವನ್ನು ಕುಗ್ಗಿಸುವ ಅಪಾಯವನ್ನು ಹೊಂದಿದ್ದು, ಸರ್ಕಾರ ಈ ಬಗ್ಗೆ ಮರುಪರಿಶೀಲನೆ ನಡೆಸಬೇಕು ಎಂದು ಆಗ್ರಹಿಸಿದರು.

ಕೇಸರಿ ಬಣ್ಣವು ತ್ಯಾಗ, ಶೌರ್ಯ, ಸೇವೆ ಹಾಗೂ ರಾಷ್ಟ್ರಭಕ್ತಿಯ ಸಂಕೇತವಾಗಿದೆ. ಯುವಜನರಲ್ಲಿ ಸಾಂಸ್ಕೃತಿಕ ಜಾಗೃತಿ ಮತ್ತು ರಾಷ್ಟ್ರೀಯ ಚೇತನ ಮೂಡಿಸುವ ಉದ್ದೇಶದಿಂದ ರಾಜ್ಯಾದ್ಯಂತ ಕೇಸರಿ ಶಾಲು ವಿತರಣಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಹಿಜಾಬ್ ಕುರಿತ ಆದೇಶವನ್ನು ಹಿಂಪಡೆದು ಶಿಕ್ಷಣ ಸಂಸ್ಥೆಗಳಲ್ಲಿ ಏಕರೂಪದ ಸಮವಸ್ತ್ರ ವ್ಯವಸ್ಥೆಯನ್ನು ಕಾಪಾಡಬೇಕು ಎಂದು ಸಂಘಟನೆ ಒತ್ತಾಯಿಸಿತು.

ಕಾರ್ಯಕ್ರಮದಲ್ಲಿ ಅನೇಕ ವಿದ್ಯಾರ್ಥಿಗಳು ಕೇಸರಿ ಶಾಲುಗಳನ್ನು ಸ್ವೀಕರಿಸಿದರು. ಹಿಂದುತ್ವ, ತ್ಯಾಗ ಹಾಗೂ ಸಾಂಸ್ಕೃತಿಕ ಪರಂಪರೆಯ ಸಂಕೇತವಾಗಿ ಕೇಸರಿ ಶಾಲುಗಳನ್ನು ಗೌರವದಿಂದ ಸ್ವೀಕರಿಸಿದ ವಿದ್ಯಾರ್ಥಿಗಳ ಉತ್ಸಾಹ ಗಮನಸೆಳೆಯಿತು.

ಕಾರ್ಯಕ್ರಮದಲ್ಲಿ ಪರಮೇಶ್, ರಾಜೇಶ್ ಡಿ.ಎಂ., ನವೀನ್, ರಾಜಗೋಪಾಲ್, ಚೇತನ್ ಸೇರಿದಂತೆ ಹಲವು ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

# ಹುಣಸನಹಳ್ಳಿ ಮಾರ್ಗದಲ್ಲಿ ಕಸದ ರಾಶಿ: ಆಕ್ರೋಶ

ಬಂಗಾರಪೇಟೆ

ತಾಲ್ಲೂಕಿನ ಹುಲಿಬೆಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹುಣಸನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯಲ್ಲಿ ಕಸದ ರಾಶಿಗಳು ಹೆಚ್ಚುತ್ತಿದ್ದು, ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ರಸ್ತೆ ಬದಿಯಲ್ಲಿ ಗುಡ್ಡೆಗಳಂತೆ ಕಸ ಸಂಗ್ರಹವಾಗಿರುವುದರಿಂದ ದುರ್ವಾಸನೆ ವ್ಯಾಪಿಸಿ ಗ್ರಾಮಸ್ಥರು, ವಿದ್ಯಾರ್ಥಿಗಳು ಹಾಗೂ ವಾಹನ ಸವಾರರು ಮೂಗು ಮುಚ್ಚಿಕೊಂಡೇ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ ಸರ್ಕಾರವು "ಸ್ವಚ್ಛ ವಾಹಿನಿ" ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದರೂ, ಹುಣಸನಹಳ್ಳಿ ಮಾರ್ಗದಲ್ಲಿ



ಅದರ ಪರಿಣಾಮ ಕಾಣುತ್ತಿಲ್ಲ. ಕಸ ಸಂಗ್ರಹಣೆ ಹಾಗೂ ಸಮರ್ಪಕ ವಿಲೇವಾರಿ ವ್ಯವಸ್ಥೆಯ ಕೊರತೆಯಿಂದ ಸಾರ್ವಜನಿಕರು ರಸ್ತೆ ಬದಿಯಲ್ಲೇ ಕಸ ಎಸೆಯುತ್ತಿದ್ದಾರೆ. ಇದರಿಂದ ಪರಿಸರ ಮಾಲಿನ್ಯ ಹೆಚ್ಚುವುದರ ಜೊತೆಗೆ ಸಾಂಕ್ರಾಮಿಕ ರೋಗಗಳ ಭೀತಿ ಕೂಡ ಉಂಟಾಗಿದೆ.

ಈ ಪ್ರದೇಶದ ಒಂದು ಭಾಗ ರೈಲ್ವೆ ಇಲಾಖೆಗೆ ಸೇರಿದ್ದು, "ಇಲ್ಲಿ ಕಸ ಹಾಕಿದರೆ ರೂ.1000 ದಂಡ" ಎಂಬ ಎಚ್ಚರಿಕೆ ಫಲಕ ಅಳವಡಿಸಲಾಗಿದೆ.

ಆದರೆ ಅದು ಕೇವಲ ನಾಮಫಲಕ ವಾಗಿಯೇ ಉಳಿದಿದೆ. ಕಸ ಹಾಕುವವರ ವಿರುದ್ಧ ದಂಡ ವಿಧಿಸುವುದು ಅಥವಾ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಕಾರ್ಯ ನಡೆಯದಿರುವುದರಿಂದ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತಿದೆ.

ಗ್ರಾಮಸ್ಥರು ಹಲವು ಬಾರಿ ಸಮಸ್ಯೆ ಕುರಿತು ದೂರು ನೀಡಿದರೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಸಮರ್ಪಕ ಕ್ರಮ ಕೈಗೊಂಡಿಲ್ಲ ಎಂಬ ಆರೋಪ ಕೇಳಿಬಂದಿದೆ. ಸಾರ್ವಜನಿಕರ ಆರೋಗ್ಯ ಮತ್ತು ಪರಿಸರದ ಹಿತದೃಷ್ಟಿಯಿಂದ ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಕಸದ ವಿಲೇವಾರಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸ್ವಚ್ಛ ಗ್ರಾಮ ನಿರ್ಮಾಣ ಕೇವಲ ಘೋಷಣೆಯಾಗದೆ ಕಾರ್ಯರೂಪಕ್ಕೆ ಬರಬೇಕಾದರೆ ಸ್ಥಳೀಯ ಆಡಳಿತ ಮತ್ತು ಅಧಿಕಾರಿಗಳ ಜವಾಬ್ದಾರಿಯುತ ಕಾರ್ಯನಿರ್ವಹಣೆ ಅಗತ್ಯವಾಗಿದೆ. ಹುಣಸನಹಳ್ಳಿ ಮಾರ್ಗದ ಕಸದ ಸಮಸ್ಯೆಗೆ ಶೀಘ್ರ ಪರಿಹಾರ ದೊರಕಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ಬೆಂ.ಗ್ರಾ ಜಿಲ್ಲೆ

ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಿಸಲಾಗುತ್ತಿದ್ದು, ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಂತಾರಾಷ್ಟ್ರೀಯ ಕಾರ್ಮಿಕ ಸಂಸ್ಥೆಯು 2002 ರಲ್ಲಿ ಜೂನ್ 12 ದಿನವನ್ನು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ ಎಂದು ಘೋಷಣೆ ಮಾಡಿದೆ ಅಂದಿನಿಂದ ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನವನ್ನು ಆಚರಿಸಲಾಗುತ್ತಿದೆ. "ಬಾಲಕಾರ್ಮಿಕತೆಗೆ ರೆಡ್ ಕಾರ್ಡ್: ಮಕ್ಕಳಿಗೆ ನ್ಯಾಯಯುತ ಬಾಲ್ಯ, ವಯಸ್ಕರಿಗೆ ಘನತೆಯ ಕೆಲಸ" ಎಂಬುದು ಈ ವರ್ಷದ ಘೋಷವಾಕ್ಯ ಎಂದು ಹೇಳಿದರು.

ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆಯನ್ನು ಜಿಲ್ಲಾಮಟ್ಟದಲ್ಲಿ ಜೂನ್ 12 ರಂದು ದೊಡ್ಡಬಳ್ಳಾಪುರದ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದ ಸರ್ಕಾರಿ ಪ್ರೌಢಶಾಲೆಯಲ್ಲಿ ಆಚರಿಸಲು ತೀರ್ಮಾನಿಸಲಾಗಿದೆ. ಅಲ್ಲಿ ಸಾಕಷ್ಟು ಕೈಗಾರಿಕೆಗಳು, ಕಾರ್ಮಿಕರು ಇರುವುದರಿಂದ ಅಂದು ಜಾಗೃತಿ ಜಾಥಾ ನಡೆಯಲಿದ್ದು ಕಾರ್ಮಿಕರಿಗೆ, ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು ಎಂದರು.

ಜಾಥಾ ಕಾರ್ಯಕ್ರಮದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಲಿದ್ದು ಅವರಿಗೆ ಟಿ–ಶರ್ಟ್ ಮತ್ತು ಟೋಪಿ ವಿತರಿಸಲು, ಕಾರ್ಯಕ್ರಮಕ್ಕೆ ಲಘು ಉಪಹಾರದ ವ್ಯವಸ್ಥೆ ಸೇರಿದಂತೆ ಅಗತ್ಯ ಸಿದ್ಧತೆ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಾದ್ಯಂತ ಕೈಗಾರಿಕೆ, ಕಾರ್ಖಾನೆ, ವಿವಿಧ ವಾಣಿಜ್ಯ ಸಂಸ್ಥೆಗಳ ಮೇಲೆ ಅಧಿಕಾರಿಗಳ ಜಂಟಿ ದಾಳಿ ನಡೆಸಿ 28 ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ. ರಕ್ಷಿಸಲ್ಪಟ್ಟ ಬಾಲ ಹಾಗೂ ಕಿಶೋರ ಕಾರ್ಮಿಕರಿಗೆ ಪುನರ್ವಸತಿ ಒದಗಿಸಲಾಗಿ ಮಕ್ಕಳ ಶಿಕ್ಷಣ, ಕುಟುಂಬ ನಿರ್ವಹಣೆ, ಜೊತೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಅವರ ಜೀವನ ಸುಧಾರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು 18 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಕೆಲಸಕ್ಕೆ ನೇಮಿಸಿ ಕೊಂಡಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಮತ್ತು ಪೊಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112 ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಶೈಲ ಭೀಮಸೇನ ಬಾಗಡಿ, ನ್ಯಾ. ನಿತೀಶ್, ಕಾರ್ಮಿಕ ಅಧಿಕಾರಿ ಮುಕುಂದ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಕೊಟ್ಟ ಅವಕಾಶ ಜನರ ಒಳಿತಿಗಾಗಿ ಮುಡಿಪು: ಬೈರತಿ ಸುರೇಶ್

ಬೆಂಗಳೂರು



ನಾನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಸರ್ಕಾರದಲ್ಲಿ ಸಚಿವನಾಗುತ್ತಿರುವುದಕ್ಕೆ ಅತೀವ ಸಂತಸವಾಗುತ್ತಿದೆ ಎಂದು ಸಂಪುಟ ದರ್ಜೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಬೈರತಿ ಸುರೇಶ್ ಹೇಳಿದ್ದಾರೆ.

ಪ್ರಮಾಣವಚನ ಸ್ವೀಕರಿಸಿದ ನಂತರ ಪ್ರತಿಕ್ರಿಯೆ ನೀಡಿರುವ ಅವರು, ಎಐಸಿಸಿ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ, ಕಾಂಗ್ರೆಸ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಣದೀಪ್ ಸುರ್ಜೇವಾಲ, ಕೆ.ಸಿ.ವೇಣುಗೋಪಾಲ್, ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಎಲ್ಲಾ ಇತರ ನಾಯಕರು ನನ್ನ ಮೇಲೆ ನಂಬಿಕೆ, ವಿಶ್ವಾಸವಿಟ್ಟು ಸಚಿವನನ್ನಾಗಿ ಆಯ್ಕೆ ಮಾಡಿರುವುದಕ್ಕೆ ಧನ್ಯವಾದಗಳನ್ನು ತಿಳಿಸುತ್ತಿದ್ದೇನೆ ಎಂದರು.

ಈ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತೇನೆ. ಈ ಹೊಣೆಗಾರಿಕೆ ಮೂಲಕ ರಾಜ್ಯದ ಜನರ ಸೇವೆಯನ್ನು ಮಾಡುತ್ತೇನೆ. ವಿಶೇಷವಾಗಿ ನನ್ನನ್ನು ಎರಡು ಬಾರಿ ವಿಧಾನಸಭೆಗೆ ಆಯ್ಕೆ ಮಾಡಿರುವ ಹೆಬ್ಬಾಳ ಕ್ಷೇತ್ರದ ಜನತೆಗೆ ಧನ್ಯವಾದಗಳನ್ನು ಅರ್ಪಿಸುತ್ತಿದ್ದೇನೆ ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ ಖುದ್ದು ದೂರವಾಣಿ ಕರೆ ಮಾಡಿ ಮಂತ್ರಿಯಾಗಿ ಆಯ್ಕೆ ಮಾಡಲಾಗಿದ್ದು, ಪ್ರಮಾಣ ವಚನ ಸ್ವೀಕರಿಸುವಂತೆ ತಿಳಿಸಿದರು. ನಾನು ಯಾವುದೇ ಖಾತೆಗೆ ಬೇಡಿಕೆ ಇಟ್ಟಿಲ್ಲ. ಯಾವುದೇ ಖಾತೆ ನೀಡಿದರೂ ಸಂತಸದಿಂದ ಸ್ವೀಕರಿಸಿ ಆ ಮೂಲಕ ರಾಜ್ಯದ ಜನತೆಯ ಸೇವೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಈ ಮೂಲಕ ಜನರ ಪರವಾಗಿರುವ ಏಕೈಕ ಪಕ್ಷವೆಂದರೆ ಕಾಂಗ್ರೆಸ್. ನಮ್ಮ ಪಕ್ಷಕ್ಕೆ ಮತ್ತು ರಾಜ್ಯಕ್ಕೆ ಒಳ್ಳೆಯ ಹೆಸರನ್ನು ತರುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ ಎಂದೂ ಅವರು ತಿಳಿಸಿದರು.

# ಬ್ರಾಹ್ಮಣ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಲು ನೂತನ ಸಿಎಂಗೆ ಮನವಿ

ಬೆಂಗಳೂರು



ಕರ್ನಾಟಕ ಸರ್ಕಾರದ 25ನೇ ನೂತನ ಮುಖ್ಯಮಂತ್ರಿಗಳಾಗಿ ಇಂದು ಸಂಜೆ ಅಧಿಕಾರ ಪಡೆದ ಡಿ.ಕೆ.ಶಿವಕುಮಾರ್ ಅವರಿಗೆ ಮತ್ತು ಅವರ ಮಂತ್ರಿ ಮಂಡಲದ ಗೌರವಾನ್ವಿತ ಸದಸ್ಯರಿಗೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಿಂದ ಶುಭಾಶಯಗಳೊಂದಿಗೆ ಅಭಿನಂದನೆಗಳನ್ನು ಸಲ್ಲಿಸಲಾಗಿದೆ. ಇದರ ಜೊತೆಗೆ ಮುಂದಿನ ಸಂಪುಟ ವಿಸ್ತರಣೆಯ ಸಮಾರಂಭದಲ್ಲಿ ಬ್ರಾಹ್ಮಣ ಸಮುದಾಯದವರಿಗೆ ಪ್ರಾತಿನಿಧ್ಯ ನೀಡುವಂತೆ ಕೋರಲಾಗಿದೆ.

ಈ ಕುರಿತು ಮಹಾಸಭಾದ ರಾಜ್ಯಾಧ್ಯಕ್ಷ ಎಸ್.ರಘುನಾಥ್ ಅವರು ಪತ್ರಿಕಾ ಪ್ರಕಟಣೆ ನೀಡಿದ್ದು, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಎಲ್ಲಾ ಪದಾಧಿಕಾರಿಗಳು ಡಿ.ಕೆ.ಶಿವಕುಮಾರ್ ಅವರ ನೂತನ ಸರ್ಕಾರಕ್ಕೆ ಅಭಿನಂದನೆ ಹಾಗೂ ಶುಭಾಶಯಗಳನ್ನು ಕೋರುತ್ತೇವೆ ಎಂದು ಅವರು ತಿಳಿಸಿದ್ದಾರೆ.

ಸುಮಾರು 40 ವರ್ಷದ ಅವಿರತ ರಾಜಕೀಯ ಪರಿಶ್ರಮ ಹಾಗೂ ಅನುಭವಗಳ ಭಂಡಾರದ ಹಿನ್ನೆಲೆಯಲ್ಲಿ ತಮಗೆ ದೇವರು ರಾಜ್ಯದ ಆಡಳಿತದ ಜವಾಬ್ದಾರಿಯನ್ನು ಕರುಣಿಸಿದ್ದಾನೆ. ಪ್ರೀತಿ, ಕರುಣೆ ಹಾಗೂ ಅತ್ಯಂತ ನ್ಯಾಯಯುತವಾಗಿ ತಾವು ಆಡಳಿತವನ್ನು ರಾಜ್ಯದ ಜನತೆಗೆ ನೀಡಿ ಯಶಸ್ವೀ ಮುಖ್ಯಮಂತ್ರಿಗಳಾಗಬೇಕೆಂದು ಆಶಿಸುತ್ತೇವೆ. ತಾವು ಮುಂದಿನ ಸಂಪುಟ ವಿಸ್ತರಣೆಯ ಸಮಾರಂಭದಲ್ಲಿ ಬ್ರಾಹ್ಮಣ ಸಮುದಾಯಕ್ಕೂ ಪ್ರಾತಿನಿಧ್ಯ ನೀಡುತ್ತೀರಿ ಎಂಬ ವಿಶ್ವಾಸವನ್ನು ಹೊಂದಿದ್ದೇವೆ ಎಂದೂ ಅವರು ತಿಳಿಸಿದ್ದಾರೆ.



ತಿಪಟೂರು ನಗರದ ಮಾರನಗೆರೆಯ ಶ್ರೀ ಪ್ಲೇಗಿನಮ್ಮ ದೇವಿ ಮತ್ತು ಶ್ರೀ ಗಂಗಮ್ಮ ದೇವಿಯವರ 22ನೇ ವರ್ಷದ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ಜರುಗಿತು. ನಗರಸಭೆ ಮಾಜಿ ಸದಸ್ಯ ನಿಜಗುಣ,ಕರವೇ ಅಧ್ಯಕ್ಷ ಸತೀಶ್ ಮಾರನಗೆರೆ, ಜೈ ರಾಜ್, ಗೋಪಾಲ್, ವಸಂತ್, ಮನು, ಹರೀಶ್, ಅಜಿತ್, ಶಂಕರ್, ಶಶಿಧರ್ ಮತ್ತು ಪ್ರಜ್ವಲ್ ಸೇರಿದಂತೆ ಬಡಾವಣೆಯ ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು.

# 'ಪಲ್ಸ್ ಪೋಲಿಯೋ ಲಸಿಕೆಯಿಂದ ಮಕ್ಕಳು ವಂಚಿತರಾಗದಂತೆ ಕ್ರಮವಹಿಸಿ'

ಬೆಂ.ಗ್ರಾ.ಜಿಲ್ಲೆ



ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 01 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಪೋಷಕರು ತಮ್ಮ 0–5 ವರ್ಷದೊಳಗಿನ ಮಕ್ಕಳನ್ನು ಹತ್ತಿರದ ಪೊಲಿಯೋ ಬೂತ್‌ಗಳಿಗೆ ಕರೆದುಕೊಂಡು ಬಂದು ಉಚಿತ ಪೊಲಿಯೋ ಲಸಿಕೆಯನ್ನು ತಪ್ಪದೆ ಹಾಕಿಸಬೇಕು ಎಂದು ಜಿಲ್ಲಾಧಿಕಾರಿ ಡಾ ಕೆ.ಎನ್ ಅನುರಾಧ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ 'ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಮಿತಿ ಸಭೆ'ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐದು ವರ್ಷದೊಳಗಿನ ಯಾವುದೇ ಮಕ್ಕಳು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ಎಲ್ಲಾ ಮಕ್ಕಳಿಗೂ ತಪ್ಪದೇ ಲಸಿಕೆ ಹಾಕಿಸಲು ಆರೋಗ್ಯ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು. ಆಶಾ, ಅಂಗನವಾಡಿ ಆರೋಗ್ಯಧಿಕಾರಿಗಳು ಪಲ್ಸ್ ಪೋಲಿಯೋ ಲಸಿಕೆ ಬಗ್ಗೆ ಅರಿವು ಮೂಡಿಸಿ ಎಂದರು.

ಗ್ರಾಮೀಣ ಪ್ರದೇಶದಲ್ಲಿ ಪೋಲಿಯೋ ಲಸಿಕೆ ಅಭಿಯಾನದ ಕುರಿತು ಧ್ವನಿವರ್ಧಕ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು. ಎನ್.ಸಿ.ಸಿ ಹಾಗೂ ಎನ್.ಎಸ್.ಎಸ್ ವಿದ್ಯಾರ್ಥಿಗಳ ಸಹಕಾರ ಪಡೆದುಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಮ್ಮ ಕ್ಲಿನಿಕ್‌ಗಳಲ್ಲಿ ಹಾಗೂ ಆಯ್ದ ಶಾಲಾ, ಅಂಗನವಾಡಿ ಕೇಂದ್ರಗಳು, ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ರೈಲು ನಿಲ್ದಾಣ, ಮಾರುಕಟ್ಟೆ, ರಸ್ತೆ ಟೋಲ್ ಗೇಟ್‌ಗಳಲ್ಲಿ ಪೊಲಿಯೋ ಬೂತ್ ಗಳನ್ನು ತೆರೆಯಲಾಗುತ್ತದೆ ಎಂದರು.

ಗರ್ಭಿಣಿಯರಿಗೆ ಸೂಕ್ತ ಲಸಿಕೆ ಸಿಗಲಿ: ಜಿಲ್ಲೆಯಲ್ಲಿ ಗರ್ಭಿಣಿ, ಬಾಣಂತಿಯರಿಗೆ ಗರ್ಭಾವಸ್ಥೆಯಿಂದ ಹೆರಿಗೆ ಆಗುವ ವರೆಗೂ ಸಮಯಕ್ಕೆ ಸರಿಯಾಗಿ ಆರೋಗ್ಯ ತಪಾಸಣೆ ಹಾಗೂ ಸೂಕ್ತ ಲಸಿಕೆಗಳು ತಪ್ಪದೇ ನೀಡಬೇಕು. ಹೆರಿಗೆ ನಂತರದಲ್ಲಿ ತಾಯಿ ಮಗುವಿಗೆ ಒಳ್ಳೆಯ ಆರೈಕೆ ಸಿಗುವಂತಾಗಬೇಕು.

ತಾಯಿ ಹಾಗೂ ಶಿಶು ಮರಣ ತಡೆಯಿರಿ: ಜಿಲ್ಲೆಯಲ್ಲಿ ಹೆರಿಗೆ ಸಮಯದಲ್ಲಿ ಯಾವುದೇ ಬಾಣಂತಿಯರು ಹಾಗೂ ಶಿಶು ಮರಣ ಸಂಭವಿಸದಂತೆ ಅಗತ್ಯ ವೈದ್ಯಕೀಯ ಸೇವೆ ಸಿಗಬೇಕು. ಹೆರಿಗೆಗೆ ಬರುವ ಗರ್ಭಿಣಿಯರಿಗೆ ಸುಖಾಸುಮ್ಮನೆ ಬೇರೆ ಆಸ್ಪತ್ರೆಗೆ ಕಳುಹಿಸಿದರೆ ಸಂಬಂಧಪಟ್ಟ ವೈದ್ಯರು ಹಾಗೂ ಸಿಬ್ಬಂದಿ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಡಿಸಿ ಎಚ್ಚರಿಕೆ ನೀಡಿದರು.

ಹೆಚ್.ಪಿ.ವಿ ಲಸಿಕೆ ಅರಿವು ಹೆಚ್ಚಿಸಿ:

ಹೆಚ್‌ಪಿವಿ ಲಸಿಕೆಯು ಹೆಣ್ಮಕ್ಕಳಲ್ಲಿ ಗರ್ಭಕಂಠದ ಕ್ಯಾನ್ಸರ್ ಬರದಂತೆ ರಕ್ಷಣೆ ನೀಡುತ್ತದೆ. ಜಿಲ್ಲೆಯ ಶಾಲಾ–ಕಾಲೇಜುಗಳಲ್ಲಿನ ಹೆಣ್ಮಕ್ಕಳಲ್ಲಿ ಲಸಿಕೆ ಕುರಿತು ಹೆಚ್ಚಿನ ಅರಿವು ಮೂಡಿಸಿ, ಲಸಿಕೆ ಹಾಕಿಸಿಕೊಳ್ಳುವಂತೆ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ಶಾಲಾ–ಕಾಲೇಜುಗಳ ಸುತ್ತಮುತ್ತ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದನ್ನು ತಡೆಗಟ್ಟಬೇಕು. ಶಾಲೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಅವಕಾಶವಿಲ್ಲ. ನಿಯಮಬಾಹಿರವಾಗಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುವುದು ಕಂಡುಬಂದರೆ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಿ. ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ಕಡ್ಡಾಯವಾಗಿ ಮೂರು ತಿಂಗಳಗೊಮ್ಮೆ ಆಯಾ ತಾಲ್ಲೂಕಿನ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ತಂಬಾಕು ನಿಯಂತ್ರಣ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಅಧಿಕಾರಿ ಲಕ್ಕಾ ಕೃಷ್ಣಾರೆಡ್ಡಿ, ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ.ಸೀಮಾ ರುದ್ರಪ್ಪ ಮಾಬಳೆ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ. ಹೇಮಾವತಿ, ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಪ್ರಮಾಣ ವಚನ ಸ್ವೀಕಾರ; ಬಸ್ ನಿಲ್ದಾಣಗಳಲ್ಲಿ ನೇರಪ್ರಸಾರ

ರಾಮನಗರ




ರಾಜ್ಯದ ನೂತನ ಮುಖ್ಯಮಂತ್ರಿಗಳಾಗಿ ಡಿ.ಕೆ. ಶಿವಕುಮಾರ್ ಅವರ ಪ್ರಮಾಣ ವಚನ ಕಾರ್ಯಕ್ರಮ ಜೂ.3ರ ಬುಧವಾರ ಸಂಜೆ ಬೆಂಗಳೂರಿನ ಲೋಕಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಪ್ರಮಾಣ ವಚನ ಕಾರ್ಯಕ್ರಮದ ನೇರ ಪ್ರಸಾರವನ್ನು ರಾಮನಗರದ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರು ಹಾಗೂ ಸಾರ್ವಜನಿಕರು ವೀಕ್ಷಣೆಗೆ ವ್ಯವಸ್ಥೆ ಮಾಡಲಾಗಿತ್ತು.

ಬೆಂಗಳೂರಿನ ಲೋಕ ಭವನದ ಗಾಜಿನ ಮನೆಯಲ್ಲಿ ಆಯೋಜಿಸಲಾಗಿರುವ ಭವ್ಯ ಸಮಾರಂಭದಲ್ಲಿ ಮುಖ್ಯಮಂತ್ರಿಗಳು ಹಾಗೂ ಅವರ ಸಂಪುಟದ ಸಚಿವರು ಪ್ರಮಾಣ ವಚನ ಸ್ವೀಕರಿಸಿದರು. ಈ ಐತಿಹಾಸಿಕ ಮತ್ತು ಮಹತ್ವದ ಕ್ಷಣವನ್ನು ಸಾರ್ವಜನಿಕರು ಕಣ್ತುಂಬಿಕೊಳ್ಳಲು ರಾಜ್ಯದ ಆಯ್ದ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ನೇರ ಪ್ರಸಾರದ ವ್ಯವಸ್ಥೆ ಮಾಡಲಾಗಿತ್ತು.

ರಾಜ್ಯದ ಜನತೆಗೆ ಈ ಮಹತ್ವದ ಕಾರ್ಯಕ್ರಮವನ್ನು ತಲುಪಿಸುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ 'ವೃತ್ತಿ ಸೊಲ್ಯೂಷನ್ಸ್ ಲಿಮಿಟೆಡ್' ಸಂಸ್ಥೆಯ ಸಹಯೋಗದಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿತ್ತು.

ರಾಜ್ಯಾದ್ಯಂತ ಇರುವ ಪ್ರಮುಖ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಅಳವಡಿಸಲಾಗಿರುವ ಡಿಜಿಟಲ್ ಡಿಸ್‌ಪ್ಲೇ ಪರದೆಗಳ ಮೂಲಕ ಪ್ರಮಾಣ ವಚನ ಸ್ವೀಕಾರ ಸಮಾರಂಭದ ಸಂಪೂರ್ಣ ಕಾರ್ಯಕ್ರಮವನ್ನು ನೇರ ಪ್ರಸಾರ ಮಾಡಲಾಗುತ್ತದೆ.

ದೂರದ ಊರುಗಳಿಗೆ ಪ್ರಯಾಣಿಸುವ ಸಾರ್ವಜನಿಕರು ಹಾಗೂ ಸಾಮಾನ್ಯ ಜನರು ಈ ಐತಿಹಾಸಿಕ ಸಮಾರಂಭದಿಂದ ವಂಚಿತರಾಗಬಾರದು ಎನ್ನುವ ಉದ್ದೇಶದಿಂದ ಈ ತಂತ್ರಜ್ಞಾನ ಆಧಾರಿತ ಉಪಕ್ರಮವನ್ನು ಕೈಗೊಳ್ಳಲಾಗಿತ್ತು. ಇದರಿಂದಾಗಿ ಸಾರ್ವಜನಿಕರು ತಮ್ಮ ಹತ್ತಿರದ ಬಸ್ ನಿಲ್ದಾಣಗಳಲ್ಲೇ ನಿಂತು ಮುಖ್ಯಮಂತ್ರಿಗಳು ಹಾಗೂ ಸಚಿವರ ಪ್ರಮಾಣ ವಚನ ಸ್ವೀಕಾರ ಸಮಾರಂಭವನ್ನು ಉಚಿತವಾಗಿ ಕಣ್ತುಂಬಿಕೊಂಡರು.

## ಧರ್ಮಸ್ಥಳದಲ್ಲಿ ಚಿಂತಾಮಣಿಯ ಶ್ರೀ ಶ್ರೀನಿವಾಸ ಭಜನಾ ಮಂಡಳಿಯಿಂದ

# ಭಕ್ತಿಪೂರ್ವಕ ಗಾಯನ ಸೇವೆ

ಚಿಂತಾಮಣಿ



ನಗರದ ಪ್ರಮುಖ ಗಾಯಕಿ ವೀಣಾ ಕೃಷ್ಣಪ್ಪ ಅವರ ನೇತೃತ್ವದ ಶ್ರೀ ಶ್ರೀನಿವಾಸ ಭಜನಾ ಮಂಡಳಿಯ ಸದಸ್ಯರು ಇತ್ತೀಚೆಗೆ ಪವಿತ್ರ ಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ, ಶ್ರೀ ಕ್ಷೇತ್ರ ಮಂಜುನಾಥ ಸ್ವಾಮಿಯ ಸನ್ನಿಧಿಯಲ್ಲಿ ಭಕ್ತಿಪೂರ್ವಕ ಗಾಯನ ಸೇವೆ ಸಲ್ಲಿಸಿದರು.

ಮಂಡಳಿಯ ಸದಸ್ಯರು ಸಮೂಹವಾಗಿ ಹಾಡಿದ ಭಜನೆಗಳು, ದಾಸಸಾಹಿತ್ಯ ಹಾಗೂ ಭಕ್ತಿಗೀತೆಗಳು ಕ್ಷೇತ್ರಕ್ಕೆ ಆಗಮಿಸಿದ್ದ ನೂರಾರು ಭಕ್ತರ ಮನಸೂರೆಗೊಂಡವು.

ಭಕ್ತಿ ಭಾವದಿಂದ ಮೂಡಿಬಂದ ಗಾಯನ ಸೇವೆಯ ವೇಳೆ ದೇವಸ್ಥಾನದ ಆವರಣದಲ್ಲಿ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗಿದ್ದು, ಭಕ್ತಾದಿಗಳು ಭಜನೆಗಳಲ್ಲಿ ತಲ್ಲೀನರಾದ ದೃಶ್ಯ ಕಂಡುಬಂತು. ಶ್ರೀ ಮಂಜುನಾಥ ಸ್ವಾಮಿಗೆ ಅರ್ಪಿಸಿದ ನಾದಾರಾಧನೆ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಗಾಯನ ಸೇವೆ ಯಶಸ್ವಿಯಾಗಿ ಪೂರ್ಣಗೊಂಡ ಬಳಿಕ ಭಜನಾ ಮಂಡಳಿಯ ಪದಾಧಿಕಾರಿಗಳು, ಮಹಿಳಾ ಸದಸ್ಯರು ಹಾಗೂ ಕಲಾವಿದರು ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

ಈ ವೇಳೆ ಮಾತನಾಡಿದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆಯವರು, ಚಿಂತಾಮಣಿಯ ಶ್ರೀ ಶ್ರೀನಿವಾಸ ಭಜನಾ ಮಂಡಳಿ ನಿರಂತರವಾಗಿ ನಡೆಸುತ್ತಿರುವ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಶ್ಲಾಘಿಸಿದರು. "ಇಂದಿನ ಯುವ ಪೀಳಿಗೆಗೆ ಭಕ್ತಿ, ಸಂಸ್ಕೃತಿ ಮತ್ತು ಆಧ್ಯಾತ್ಮಿಕ ಮೌಲ್ಯಗಳ ಅರಿವು ಅತ್ಯಗತ್ಯವಾಗಿದೆ.

ಇಂತಹ ಭಜನಾ ಮಂಡಳಿಗಳು ಸಮಾಜದಲ್ಲಿ ಸಕಾರಾತ್ಮಕ ಚಿಂತನೆ ಬೆಳೆಸುವ ಕಾರ್ಯ ಮಾಡುತ್ತಿವೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಧಾರ್ಮಿಕ ಹಾಗೂ ಸಾಂಸ್ಕೃತಿಕ ಸೇವೆಗಳು ನಿರಂತರವಾಗಿ ನಡೆಯಲಿ ಎಂದು ಅವರು ಹಾರೈಸಿದರು. ಧರ್ಮಸ್ಥಳದಂತಹ ಪವಿತ್ರ ಕ್ಷೇತ್ರದಲ್ಲಿ ಗಾಯನ ಸೇವೆ ಸಲ್ಲಿಸಿರುವುದು ಮಂಡಳಿಗೆ ಗೌರವದ ಸಂಗತಿ ಎಂದು ಹೇಳಿದರು.

ಚಿಂತಾಮಣಿ ನಗರಕ್ಕೆ ಹೆಮ್ಮೆ ತಂದ ಈ ಧಾರ್ಮಿಕ ಪ್ರವಾಸ ಹಾಗೂ ಗಾಯನ ಸೇವೆಯ ಯಶಸ್ಸಿಗೆ ಭಜನಾ ಮಂಡಳಿಯ ಸದಸ್ಯರು ಸಂತಸ ವ್ಯಕ್ತಪಡಿಸಿದರು. ಕ್ಷೇತ್ರದಲ್ಲಿ ಮಂಡಳಿಗೆ ದೊರೆತ ಗೌರವ ಮತ್ತು ಧರ್ಮಾಧಿಕಾರಿಗಳ ಆಶೀರ್ವಾದವು ಮುಂದಿನ ದಿನಗಳಲ್ಲಿ ಇನ್ನಷ್ಟು ಸೇವಾ ಕಾರ್ಯಗಳಿಗೆ ಪ್ರೇರಣೆಯಾಗಲಿದೆ ಎಂದು ಸದಸ್ಯರು ತಿಳಿಸಿದರು.

ಈ ಸಂದರ್ಭದಲ್ಲಿ ಭಜನಾ ಮಂಡಳಿಯ ಪದಾಧಿಕಾರಿಗಳು, ಮಹಿಳಾ ಸದಸ್ಯರು, ಭಕ್ತರು ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದರು.

# 5ವರೆಗೆ ಮಿಂಚು ಗುಡುಗು ಸಹಿತ ಮಳೆ

ಬೆಂ.ಗ್ರಾ.ಜಿಲ್ಲೆ

ಭಾರತೀಯ ಹವಾಮಾನ ಇಲಾಖೆ/ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಬೆಂಗಳೂರು ಇವರ ಮುನ್ಸೂಚನೆಯಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮುಂದಿನ 3 ದಿನಗಳ ಕಾಲ (ದಿನಾಂಕ:03.06.2026 ರಿಂದ 05.06.2026 ರವರೆಗೆ) ಮಿಂಚು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇರುತ್ತದೆ.

ಈ ಹಿನ್ನಲೆಯಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ಸೂಚನೆಗಳನ್ನು ನೀಡಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರವನ್ನು (ಜಿಲ್ಲಾ ಸಹಾಯವಾಣಿ ಸಂಖ್ಯೆ: 080–28388005) ತೆರೆಯಲಾಗಿದ್ದು, ಸಾರ್ವಜನಿಕರು ಜಿಲ್ಲೆಯ ಹವಾಮಾನ ಪರಿಸ್ಥಿತಿಯ ಕುರಿತಂತೆ 24/7 ವರದಿಗಳನ್ನು ಪರಿಶೀಲಿಸಬಹುದಾಗಿರುತ್ತದೆ. ಹಾಗೂ ಸಾರ್ವಜನಿಕರು ಯಾವುದೇ ಅನಧಿಕೃತ/ವದಂತಿಗಳಿಗೆ ಕಿವಿಗೊಡಬೇಡಿ. ನೀರು ಇರುವ ತಗ್ಗು ಪ್ರದೇಶ, ಕೆರೆ, ಕಾಲುವೆ ಪ್ರದೇಶಗಳಿಗೆ ಹೋಗದಂತೆ ಸಾರ್ವಜನಿಕರು ಹಾಗೂ ಮುಖ್ಯವಾಗಿ ಮಕ್ಕಳು ಹೋಗದಂತೆ ಪಾಲಕರು ಜಾಗ್ರತೆವಹಿಸುವುದು.

ಕೃಷಿಕರು ಮಳೆಯಂತಹ ಸಂದರ್ಭದಲ್ಲಿ ಕೃಷಿ ಚಟುವಟಿಕೆಯಿಂದ ದೂರವಿರುವುದು ಸಾರ್ವಜನಿಕರು/ ಮಕ್ಕಳು/ಕಾರ್ಮಿಕರು ಮಳೆ ಬೀಳುವ ಸಂದರ್ಭದಲ್ಲಿ ಹೊರಗೆ ತಿರುಗಾಡದೆ, ಸೂಕ್ತ ಕಟ್ಟಡದಲ್ಲಿ ಆಶ್ರಯ ಪಡೆಯುವುದು. ಈ ಸಂದರ್ಭದಲ್ಲಿ ಮಕ್ಕಳು/ಸಾರ್ವಜನಿಕರು ಅಪಾಯಕಾರಿ ಮರ/ವಿದ್ಯುತ್ ಕಂಬದ ಹತ್ತಿರ ಸುಳಿಯಬಾರದು ಮತ್ತು ತುಂಡಾದ ವಿದ್ಯುತ್ ತಂತಿಗಳಿಂದ ದೂರವಿರುವುದು. ದುರ್ಬಲವಾದ/ಹಳೆಯ ಕಟ್ಟಡ ಅಥವಾ ಮರಗಳ ಹತ್ತಿರ/ಮರಗಳ ಕೆಳಗೆ ನಿಲ್ಲಬಾರದು.

ಮೇಲಿನ ಅಂಶಗಳನ್ನು ಮಳೆ ಗಾಳಿಯಂತಹ ಸಂದರ್ಭಗಳಲ್ಲಿ ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸುವುದು. ಸಾರ್ವಜನಿಕರು ತಗ್ಗು ಪ್ರದೇಶದಲ್ಲಿ ಅಥವಾ ಮಳೆಯಿಂದ ಅಪಾಯಕ್ಕೀಡಾಗುವ ಪ್ರದೇಶದಲ್ಲಿ ವಾಸವಿದ್ದಲ್ಲಿ ಅಥವಾ ಶಿಥಿಲಾವಸ್ಥೆಯಿಂದ ಜಾರುವ ಹಂತದಲ್ಲಿರುವ ಕಂಪೌಂಡ್ ಅಥವಾ ಮನೆಯ ಗೋಡೆ, ಇಂತಹ ದುರ್ಬಲವಾದ ಕಟ್ಟಡದಲ್ಲಿ ವಾಸವಿರುವ ಸಾರ್ವಜನಿಕರು ಸುರಕ್ಷಿತ ಸ್ಥಳಗಳಲ್ಲಿ ವಾಸಿಸುವುದು. ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕಾಲುವೆ, ಕಿರು ಸೇತುವೆ ಇತ್ಯಾದಿಗಳನ್ನು ದಾಟುವ ಮುನ್ನ ಎಚ್ಚರಿಕೆ ವಹಿಸುವುದು.

# ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

ತುಮಕೂರು

ಜಿಲ್ಲೆಯ ಕ್ರೈಸ್‌ನ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಕಾಲೇಜುಗಳಲ್ಲಿ ಖಾಲಿ ಇರುವ ಕನ್ನಡ, ಇಂಗ್ಲೀಷ್, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಜೀವಶಾಸ್ತ್ರ, ಗಣಕವಿಜ್ಞಾನ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಅಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ತುಮಕೂರಿನ ಕೋಡಿಮುದ್ದನಹಳ್ಳಿ ಹಾಗೂ ಕೊರಟಗೆರೆ ತಾಲ್ಲೂಕು ಬೈಚಾಪುರದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜು, ಸಿರಾ ತಾಲ್ಲೂಕು ಭುವನಹಳ್ಳಿ ಹಾಗೂ ಪಾವಗಡ ತಾಲ್ಲೂಕು ದೊಡ್ಡಹಳ್ಳಿಯಲ್ಲಿರುವ ಅಟಲ್ ಬಿಹಾರಿ ವಾಜಪೇಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜು, ಮಧುಗಿರಿ ತಾಲ್ಲೂಕು ನಲ್ಲೇಕಾಮನಹಳ್ಳಿಯಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳಿಗೆ ಭೇಟಿ ನೀಡಿ ಜೂನ್ 6ರೊಳಗಾಗಿ ಅರ್ಜಿಸಲ್ಲಿಸಬಹುದು. ಅರ್ಜಿಗಳನ್ನು ಪರಿಶೀಲಿಸಿ ಡೆಮೋ ತರಗತಿಗಳಿಗೆ ಅರ್ಹರಾದ ಆಭ್ಯರ್ಥಿಗಳನ್ನು ಜೂನ್ 2026ರ ಮಾಹೆಯಲ್ಲಿ ನಡೆಯುವ ಡೆಮೋ ತರಗತಿಗಳಿಗೆ ಹಾಜರಾಗಲು ದೂರವಾಣಿ ಕರೆ ಮೂಲಕ ತಿಳಿಸಲಾಗುವುದು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಖಾಲಿ ಇರುವ ವಿಷಯದ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಸಂಬಂಧಿಸಿದಂತೆ ವಿಷಯದಲ್ಲಿ ಸ್ನಾತಕೊತ್ತರ ಪದವಿ ಹಾಗೂ ಬಿ.ಇಡಿ ಶಿಕ್ಷಣ ಪಡೆದಿರಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಕಾಮಗಾರಿಗಳಿಗೆ ವಿದ್ಯುದ್ಧೀಕರಣ

ತುಮಕೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜಿಲ್ಲೆಯ ಕುಣಿಗಲ್ ತಾಲ್ಲೂಕು ಹುಲಿಯೂರುದುರ್ಗ ಗ್ರಾಮದ ಬಳಿ ನೂತನವಾಗಿ ನಿರ್ಮಾಣ ಮಾಡಿರುವ 2*500ಎಂ.ವಿ.ಎ. 400/220ಕೆ.ವಿ, 2*100ಎಂ.ವಿ.ಎ. 220/66ಕೆ.ವಿ ಉಪಸ್ಥಾವರಕ್ಕೆ ಹಾಲಿ ಇರುವ 220ಕೆವಿ ನಾಗಮಂಗಲ – ಅಂಚೆಪಾಳ್ಯ ವಿದ್ಯುತ್ ಮಾರ್ಗದಿಂದ 11.524ಕಿ.ಮೀ ಉದ್ದದ 220ಕೆವಿ ದ್ವಿ–ಲಿಲೋ ವಿದ್ಯುತ್ ಮಾರ್ಗ ಹಾಗೂ ಹಾಲಿ ಇರುವ 66ಕೆವಿ ಹುಲಿಯೂರುದುರ್ಗ – ಅಂಚೆಪಾಳ್ಯ ವಿದ್ಯುತ್ ಮಾರ್ಗಕ್ಕೆ 6.435ಕಿ.ಮೀ ಮತ್ತು 66ಕೆವಿ ಹುಲಿಯೂರುದುರ್ಗ – ನಿಡಸಾಲೆ ವಿದ್ಯುತ್ ಮಾರ್ಗಕ್ಕೆ 4.696ಕಿ.ಮೀ ಉದ್ದದ 66ಕೆವಿ ಲಿಲೋ ವಿದ್ಯುತ್ ಪ್ರಸರಣ ಮಾರ್ಗ ಹಾಗೂ ಹಾಲಿ ಇರುವ 66/11ಕೆವಿ ಯಡವಾಣಿ ವಿದ್ಯುತ್ ಉಪಸ್ಥಾವರಕ್ಕೆ 5.868ಕಿ.ಮೀ ಉದ್ದದ 66ಕೆವಿ ದ್ವಿಮುಖ ವಿದ್ಯುತ್ ಪ್ರಸರಣ ಮಾರ್ಗ ಹಾಗೂ ಹಾಲಿ ಇರುವ 66/11ಕೆವಿ ಅಮೃತೂರು ಉಪಸ್ಥಾವರಕ್ಕೆ ರೇಡಿಯಲ್ ಸಂಪರ್ಕ ಒದಗಿಸುವ ಜೊತೆಗೆ 2 ಸಂಖ್ಯೆಯ 66ಕೆವಿ ಟರ್ಮಿನಿಲ್ ಬೇ ಅನ್ನು 66/11ಕೆವಿ ಯಡವಾಣಿ ಉಪಸ್ಥಾವರದಲ್ಲಿ ಮತ್ತು 1 ಸಂಖ್ಯೆಯ 66ಕೆವಿ ಟರ್ಮಿನಿಲ್ ಬೇ ಅನ್ನು 66/11ಕೆವಿ ಅಮೃತೂರು ಉಪಸ್ಥಾವರದಲ್ಲಿ ನಿರ್ಮಾಣ ಮಾಡಿರುವ ಕಾಮಗಾರಿಯನ್ನು ಜೂನ್ 5ರಂದು ಅಥವಾ ತದನಂತರ ವಿದ್ಯುದ್ಧೀಕರಣ ಗೊಳಿಸಲಾಗುವುದು.

ಈ ಪ್ರಸರಣ ಮಾರ್ಗಗಳು ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕು ಅಮೃತೂರು ಹೋಬಳಿ ವ್ಯಾಪ್ತಿಯಲ್ಲಿ ಬರುವ ಪಡುವಗೆರೆ, ಕಂತನಹಳ್ಳಿ, ಸಣಬ, ವಳಗೆರೆಪುರ, ಬೆಣವಾರ, ಕೋಡಿಹಳ್ಳಿ, ಕೀಲಾರ, ಬ್ಯಾಡಗೆರೆ, ಯಡವಾಣಿ, ಹುಲಿಯೂರುದುರ್ಗ ಹೋಬಳಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಾದ ಹಸಿಗೆ ಹೋಬಳಿ, ಶೃಂಗಾರಸಾಗರ, ಹಳೇವೂರು, ಕೆಬ್ಬಳ್ಳಿ, ಸೊಣ್ಣನಾಯಕನಹಳ್ಳಿ, ಸುಗ್ಗನಹಳ್ಳಿ, ಪುರ ಗ್ರಾಮಗಳ

6
06/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 'ವಿಧಾನಸೌಧ ಚಲೋ'ಗೆ ಬೆಂಬಲ



ದೊಡ್ಡಬಳ್ಳಾಪುರ

ಚಿಕ್ಕಬಳ್ಳಾಪುರ ಜಿಲ್ಲೆಯ ಜಂಗಮಕೋಟೆ ಪ್ರದೇಶದಲ್ಲಿ ಸುಮಾರು ಎರಡು ಸಾವಿರ ಎಕರೆ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಕ್ರಮವನ್ನು ಖಂಡಿಸಿ ಜೂನ್ 14ರಂದು ನಡೆಯಲಿರುವ 'ವಿಧಾನಸೌಧ ಚಲೋ' ಪ್ರತಿಭಟನೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ರೈತ ಸಂಘ ಬೆಂಬಲ ವ್ಯಕ್ತಪಡಿಸಿದೆ.

ನಗರದ ಎಪಿಎಂಸಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಅಧ್ಯಕ್ಷ ಪ್ರಸನ್ನ, ಫಲವತ್ತಾದ ಕೃಷಿ ಭೂಮಿಯನ್ನು ಕೈಗಾರಿಕೆ ಹಾಗೂ ಇತರ ಯೋಜನೆಗಳ ಹೆಸರಿನಲ್ಲಿ ಸ್ವಾಧೀನಪಡಿಸಿಕೊಳ್ಳುವುದು ರೈತ ವಿರೋಧಿ ಕ್ರಮವಾಗಿದೆ ಎಂದು ಆರೋಪಿಸಿದರು.

ದೊಡ್ಡಬಳ್ಳಾಪುರ ತಾಲೂಕಿನ ಏರೋಸ್ಪೇಸ್ ಪಾರ್ಕ್ ಸೇರಿದಂತೆ ವಿವಿಧ ಯೋಜನೆಗಳಿಗಾಗಿ ಸಾವಿರಾರು ಎಕರೆ ಕೃಷಿ ಭೂಮಿಯನ್ನು ವಶಪಡಿಸಿಕೊಂಡು ಕಾರ್ಪೊರೇಟ್ ಕಂಪನಿಗಳಿಗೆ ಹಸ್ತಾಂತರ ಮಾಡಲಾಗುತ್ತಿದೆ. ಇದರಿಂದ ಕೃಷಿ ಚಟುವಟಿಕೆಗಳಿಗೆ ಧಕ್ಕೆ ಉಂಟಾಗುತ್ತಿದ್ದು, ದೇಶದ ಆಹಾರ ಭದ್ರತೆಯ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಹೇಳಿದರು.

ಸಾರ್ವಜನಿಕ ಉದ್ದಿಮೆಗಳು ಮತ್ತು ಕೈಗಾರಿಕೆಗಳನ್ನು ಕೃಷಿಗೆ ಯೋಗ್ಯವಲ್ಲದ ಭೂಮಿಯಲ್ಲಿ ಸ್ಥಾಪಿಸಬೇಕು. ಆದರೆ ಸೌರ ವಿದ್ಯುತ್ ಸೇರಿದಂತೆ ವಿವಿಧ ಯೋಜನೆಗಳ ಹೆಸರಿನಲ್ಲಿ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರೈತರನ್ನು ಸಂಕಷ್ಟಕ್ಕೆ ತಳ್ಳುತ್ತಿರುವುದು ಖಂಡನೀಯ ಎಂದು ಅವರು ತಿಳಿಸಿದರು.

ಸರ್ಕಾರಕ್ಕೆ ರೈತರ ಬಗ್ಗೆ ನಿಜವಾದ ಕಾಳಜಿ ಇದ್ದರೆ ರೈತರೇ ವಿದ್ಯುತ್ ಉತ್ಪಾದಕರಾಗುವಂತೆ ಪ್ರೋತ್ಸಾಹ ನೀಡಬೇಕು. ರಾಜ್ಯದಲ್ಲಿ ನಡೆಯುತ್ತಿರುವ ಭೂ ಸ್ವಾಧೀನ ಪ್ರಕ್ರಿಯೆಗಳಿಗೆ ರಾಜ್ಯ ರೈತ ಸಂಘದ ತೀವ್ರ ವಿರೋಧವಿದ್ದು, ಕೂಡಲೇ ಈ ಕ್ರಮವನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು.

ಸರ್ಕಾರ ರೈತರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ತಾಲೂಕು ರೈತ ಸಂಘದ ಅಧ್ಯಕ್ಷ ಹನುಮೇಗೌಡ, ಪ್ರಧಾನ ಕಾರ್ಯದರ್ಶಿ ಸತೀಶ್, ಮುಖಂಡರಾದ ರವಿ ಶಿರವಾರ ಹಾಗೂ ಮಹದೇವ್ ಉಪಸ್ಥಿತರಿದ್ದರು.

# ಕಾಂಗ್ರೆಸ್ ಕಾರ್ಯಕರ್ತರಿಂದ ಸಂಭ್ರಮಾಚರಣೆ



ವಿಜಯಪುರ

ರಾಜ್ಯದ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರಾಗಿ ಕೆ.ಹೆಚ್.ಮುನಿಯಪ್ಪ ಅವರು, ಪ್ರಮಾಣವಚನ ಸ್ವೀಕಾರ ಮಾಡಿರುವ ಹಿನ್ನೆಲೆಯಲ್ಲಿ, ಪಟ್ಟಣದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು, ಪಟಾಕಿಗಳು ಸಿಡಿಸಿ, ಸಿಹಿ ಹಂಚಿಕೆ ಮಾಡಿ, ಸಂಭ್ರಮಿಸಿದರು.

ಬಸ್ ನಿಲ್ದಾಣ, ಶಿವಗಣೇಶ ಸರ್ಕಲ್ ನಲ್ಲಿ, ಕಾಂಗ್ರೆಸ್ ಕಾರ್ಯಕರ್ತರು, ಒಕ್ಕಲಿಗರ ಸಂಘದ ವತಿಯಿಂದ ಸಂಭ್ರಮಾಚರಣೆ ಮಾಡಿದರು.

ಟೌನ್ ಕಾಂಗ್ರೆಸ್ ಅಧ್ಯಕ್ಷ ವಿ.ಎಂ.ನಾಗರಾಜ್ ಮಾತನಾಡಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಉತ್ತಮ ಸಂಘಟನಾಕಾರರು, ಪಕ್ಷ ನಿಷ್ಠೆಯಿಂದ ಕೆಲಸ ಮಾಡಿಕೊಂಡು ಮಾಡಿಕೊಂಡು ಬಂದಿದ್ದಾರೆ. ಕಾಂಗ್ರೆಸ್ ಪಕ್ಷವು ಸಂಕಷ್ಟದಲ್ಲಿರುವ ಬಂಡೆಯಂತೆ ನಿಂತಿದ್ದಾರೆ. ಮುಂದಿನ ದಿನಗಳಲ್ಲಿ ಪಕ್ಷವನ್ನು ಸದೃಢವಾಗಿ ಕಟ್ಟುವ ಮೂಲಕ ಉತ್ತಮ ಆಡಳಿತವನ್ನು ನೀಡಲಿದ್ದಾರೆ ಎಂದರು.

ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರು ಮಾತನಾಡಿ, ರಾಜ್ಯಕ್ಕೆ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕಾರ ಮಾಡಿರುವುದು ಸಂತಸ ತಂದಿದೆ. ಅವರ ಆಡಳಿತದ ಕಾರ್ಯವೈಖರಿ ನಮಗೆಲ್ಲಾ ಮಾದರಿಯಾಗಲಿದೆ ಎಂದರು.

ಕಾಂಗ್ರೆಸ್ ಮುಖಂಡರಾದ ಗೌಸ್ ಖಾನ್, ವೇಣುಗೋಪಾಲ್, ಕೆ.ಎಂ.ಮಧು, ಎನ್.ಮುನಿಚಿನ್ನಪ್ಪ, ಆಜಂ ಪಾಷ, ವಲ್ಲಿಜಾನ್, ಪುರಸಭೆ ಸದಸ್ಯರಾದ ಎಂ.ನಾರಾಯಣಸ್ವಾಮಿ, ಸೈಯದ್ ಎಕ್ಬಾಲ್, ಎಂ.ರಾಜಣ್ಣ, ನಿಸಾರ್, ರಾಜಗೋಪಾಲ್, ವೆಂಕಟೇಶ್, ಅಣ್ಣಮ್ಮತಾಯಿ ಸುರೇಶ್, ಬಾಬು, ನಂಜುಂಡಪ್ಪ, ಎಂ.ಮುನಿನಾರಾಯಣಪ್ಪ, ಜಬೀವುಲ್ಲಾ, ಮುನ್ನಾಖಾನ್, ಮುನಿಕೃಷ್ಣಪ್ಪ, ಐ.ಎಂ.ಶಫಿ, ಸೇರಿದಂತೆ ಮುಖಂಡರು ಹಾಜರಿದ್ದರು.

### ಡಾ. ಜಿ. ಪರಮೇಶ್ವರ್ ಉಪಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರ:

# ಕೊರಟಗೆರೆಯಲ್ಲಿ ಸಂಭ್ರಮಾಚರಣೆ

ಕೊರಟಗೆರೆ

ಡಾ.ಜಿ.ಪರಮೇಶ್ವರ್ ಅವರು ರಾಜ್ಯದ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಕೊರಟಗೆರೆ ಪಟ್ಟಣದ ಎಸ್ಎಸ್ಆರ್ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು.

ಬೆಂಗಳೂರು ರಾಜಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಡಾ. ಜಿ. ಪರಮೇಶ್ವರ್ ಅವರಿಗೆ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ ಬೋಧಿಸಿದ ಬಳಿಕ ಕೊರಟಗೆರೆಯಲ್ಲಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಟ್ಟಣ ಪಂಚಾಯಿತಿ ಮಾಜಿ ಸದಸ್ಯ ಕೆ.ಆರ್. ಓಬಳರಾಜು, ಡಾ. ಪರಮೇಶ್ವರ್ ಅವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಹಾಗೂ ಹಿರಿಯ ನಾಯಕರಾಗಿದ್ದು, ಪಕ್ಷ ಸಂಘಟನೆಗಾಗಿ ಹಲವು ವರ್ಷಗಳಿಂದ ದುಡಿದಿದ್ದಾರೆ. ಅವರ ಉಪಮುಖ್ಯಮಂತ್ರಿ ಪದಗ್ರಹಣದಿಂದ ಕ್ಷೇತ್ರದ ಜನರಲ್ಲಿ ಸಂತಸ ಮೂಡಿದೆ ಎಂದು ಹೇಳಿದರು.



ತಮ್ಮ ಅಧಿಕಾರಾವಧಿಯಲ್ಲಿ ಕೊರಟಗೆರೆ ವಿಧಾನಸಭಾ ಕ್ಷೇತ್ರ ಸೇರಿದಂತೆ ರಾಜ್ಯದಾದ್ಯಂತ ಜನಪರ ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಜನರ ವಿಶ್ವಾಸವನ್ನು ಮತ್ತಷ್ಟು ಗಳಿಸಲಿ ಎಂದು ಹಾರೈಸಿದರು.

ಮುಖಂಡ ಡಿ. ನಾಗಭೂಷಣ್ ಮಾತನಾಡಿ, ಡಾ. ಪರಮೇಶ್ವರ್ ಅವರು ಕೆಪಿಸಿಸಿ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಇದೀಗ ಉಪಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವ ಅವರು ರಾಜ್ಯದ ಅಭಿವೃದ್ಧಿಗೆ ಮತ್ತಷ್ಟು ಕೊಡುಗೆ ನೀಡಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ಪಕ್ಷದ ವರಿಷ್ಠರು ಅವರಿಗೆ ಇನ್ನಷ್ಟು ಮಹತ್ವದ ಜವಾಬ್ದಾರಿ ನೀಡಬೇಕು ಎಂಬ ಆಶಯವನ್ನೂ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಎಲ್. ರಾಜಣ್ಣ, ಕೆ.ಎಲ್.ಆನಂದ್, ಕೆ.ವಿ. ಮಂಜುನಾಥ್, ಕೆ.ಎಂ. ಸುರೇಶ್, ಕೆ.ಬಿ. ಲೋಕೇಶ್, ಕಾರ್ ಮಹೇಶ್, ಅಟ್ಟಿಕಾಬಾಬು ನಾಗರಾಜು, ಆನಂದಬಾಬು, ಮುತ್ತುರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಸ್‌ಐಆರ್‌ಗೆ ಸಹಕರಿಸಲು ಜಿಲ್ಲಾಧಿಕಾರಿ ಕರೆ

ರಾಮನಗರ

ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ, ಮೂರನೇ ಹಂತದಲ್ಲಿ ಆರಂಭಗೊಂಡಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ (ಸ್ಪೆಷಲ್ ಸಮ್ಮರಿ ರಿವಿಷನ್–ಎಸ್‌ಐಆರ್) ಪ್ರಕ್ರಿಯೆ ಜಿಲ್ಲೆಯಲ್ಲಿ ಆರಂಭಗೊಂಡಿದ್ದು, ಮತದಾರರ ಪಟ್ಟಿಯಲ್ಲಿ ಹೆಸರಿದ್ದು ಮೃತಪಟ್ಟವರ ಹೆಸರನ್ನು ಪಟ್ಟಿಯಿಂದ ತೆಗೆಯುವುದು, ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸ್ಥಳಾಂತರಗೊಂಡ ಮತದಾರರು, ವಲಸಿಗ ಮತದಾರರು ಹಾಗೂ ಎರಡೂ ಕಡೆ ಮತದಾರರ ಪಟ್ಟಿಯಲ್ಲಿ ಹೆಸರಿರುವಂತಹ ಮತದಾರರು ಹಾಗೂ ಭಾರತೀಯ ನಾಗರೀಕರಲ್ಲದವರಿಗೆ ಮತದಾನದ ಹಕ್ಕು ಇಲ್ಲದ ಕಾರಣ ಅವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆಯುವ ಪರಿಷ್ಕರಣಾ ಕಾರ್ಯವನ್ನು ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ, ಬೆಂಗಳೂರು ದಕ್ಷಿಣ ಜಿಲ್ಲೆಯ ಮತದಾರರು ಈ ಪ್ರಕ್ರಿಯೆಗೆ ಸಹಕರಿಸುವಂತೆ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಕೋರಿದರು.

ಅವರು ಜೂ.04ರ ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಈ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ವಿಶೇಷ ಸಮಗ್ರ ಪರಿಷ್ಕರಣೆ–2026ರ (ಎಸ್‌ಐಆರ್) ಎಂಬುದು ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಪರಿಶೀಲಿಸಿ ನವೀಕರಿಸುವ ವಿಶೇಷ ಪ್ರಕ್ರಿಯೆಯಾಗಿದೆ. ಜನರ ಆಗಾಗ್ಗೆ ವಲಸೆ, ಇದರಿಂದ ಕೆಲವು ಮತದಾರರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ನೋಂದಣಿ, ನಕಲಿ ಮತದಾರರನ್ನು ತೆಗೆದು ಹಾಕುವುದು, ಮರಣ ಹೊಂದಿದ ಮತದಾರರ ಹೆಸರುಗಳನ್ನು ತೆಗೆದು ಹಾಕುವುದು, ವಿದೇಶಿ ನಾಗರಿಕರ ಹೆಸರುಗಳು ತಪ್ಪಾಗಿ ಸೇರಿರುವ ಸಾಧ್ಯತೆ, ಅನರ್ಹ ಮತದಾರರನ್ನು ಪತ್ತೆ ಹಚ್ಚಿ ತೆಗೆದು ಹಾಕುವುದಾಗಿದೆ ಎಂದು ಹೇಳಿದರು.



ಈ ಕಾರ್ಯಕ್ಕೆ ಈಗಾಗಲೇ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ಮ್ಯಾಪಿಂಗ್ ಶುರುವಾಗಿದ್ದು, ಅದು ಶೇ. 90.47ರಷ್ಟು ಕಾರ್ಯ ಪೂರ್ಣಗೊಂಡಿದೆ. ಅಂದರೆ ಜಿಲ್ಲೆಯ 9,39,081 ಮತದಾರರ ಪೈಕಿ 8,49,572 ಮತದಾರರ ಮ್ಯಾಪಿಂಗ್ ಕಾರ್ಯ ಮಾಡಲಾಗಿದೆ. 2002ರ ಮತದಾರರ ಪಟ್ಟಿಯಲ್ಲಿ ಅವರ ಹೆಸರಿದ್ದು, ಅಥವಾ ಅವರ ತಂದೆ ಅಥವಾ ಅಜ್ಜ ಅಥವಾ ಸಂಬಂಧಿಕರ ಹೆಸರಿದ್ದರೆ ಮಾತ್ರ ಮ್ಯಾಪಿಂಗ್ ಕಾರ್ಯ ಸಾಧ್ಯ, ಈ ರೀತಿಯ 100 ರಲ್ಲಿ 90 ಜನರ ಮ್ಯಾಪಿಂಗ್ ಪೂರ್ಣಗೊಂಡಿದೆ ಎಂದರು.

ವಿಶೇಷ ಸಮಗ್ರ ಪರಿಷ್ಕರಣಾ ಕಾರ್ಯಕ್ಕೆ ವೇಳಾಪಟ್ಟಿ ಪ್ರಕಟಗೊಂಡಿದ್ದು, 2026ರ ಜೂನ್ 20 ರಿಂದ 29ರ ವರೆಗೆ ಸಿಬ್ಬಂದಿಗಳಿಗೆ ತರಬೇತಿ ನೀಡುವುದು ಹಾಗೂ ಅಗತ್ಯ ದಾಖಲೆಗಳನ್ನು ಮುದ್ರಿಸುವ ಕಾರ್ಯ ನಡೆಯಲಿದೆ, ಜೂ. 30ರಿಂದ ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡುವರು. ಈ ಸಂದರ್ಭದಲ್ಲಿ ಯಾವುದೇ ರೀತಿಯ ಗುರುತಿನ ಚೀಟಿಗಳು ಅಂದರೆ ಕೇಂದ್ರ ಸರ್ಕಾರ ಅಥವಾ ಸ್ಥಳೀಯ ಸಂಸ್ಥೆಗಳು ನೀಡುವ ಗುರುತಿನ ಚೀಟಿಗಳು, ಬ್ಯಾಂಕ್‌ಗಳು, ಅಂಚೆ ಕಚೇರಿ, ಎಲ್‌ಐಸಿಯಿಂದ ನೀಡಿರುವ ಗುರುತಿನ ಚೀಟಿಗಳು, ಜನನ ಪ್ರಮಾಣ ಪತ್ರ, ಪಾಸ್‌ಪೋರ್ಟ್, ಎಸ್‌ಎಸ್‌ಎಲ್‌ಸಿ ಪ್ರಮಾಣ ಪತ್ರ, ವಾಸದ ದೃಢೀಕರಣ ಪ್ರಮಾಣ ಪತ್ರ, ಒಬಿಸಿ, ಎಸ್‌ಸಿ ಅಥವಾ ಎಸ್‌ಟಿ ಜಾತಿ ಪ್ರಮಾಣ ಪತ್ರ, ಸರ್ಕಾರ ನೀಡಿರುವ ಭೂಮಿ ಅಥವಾ ನಿವೇಶನದ ಪ್ರಮಾಣ ಪತ್ರ ಇತ್ಯಾದಿ ದಾಖಲಾತಿಗಳನ್ನು ಸಂಬಂಧಿಸಿದವರು ಸಲ್ಲಿಸಬಹುದಾಗಿದೆ. ಆಗಸ್ಟ್ 5 ರಂದು ಕರಡು ಪಟ್ಟಿಯನ್ನು ಪ್ರಕಟಿಸಲಾಗುವುದು. ನಂತರ ಆಕ್ಷೇಪಣೆಗೆ ಒಂದು ತಿಂಗಳ ಕಾಲಾವಧಿ ನೀಡಲಾಗುವುದು. ಇದಾದ ನಂತರ ಆಕ್ಷೇಪಣೆಗಳನ್ನು ವಿಲೇವಾರಿ ಮಾಡಲು ಎರಡು ತಿಂಗಳು ಕಾಲಾವಕಾಶವಿರುತ್ತದೆ. ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದರು.

ವಿಶೇಷ ಸಮಗ್ರ ಪರಿಷ್ಕರಣಾ ಕಾರ್ಯಕ್ಕೆ ರಾಜಕೀಯ ಪಕ್ಷಗಳು ಸಹ ನೆರವು ನೀಡಲು ಅವಕಾಶ ಕಲ್ಪಿಸಿಲಾಗಿದೆ, ಈ ಪ್ರಕ್ರಿಯೆಯಲ್ಲಿ ರಾಜಕೀಯ ಪಕ್ಷಗಳು ಬೂತ್ ಲೆವೆಲ್ ಏಜೆಂಟರುಗಳನ್ನು ನೇಮಕ ಮಾಡಿಕೊಳ್ಳಬಹುದಾಗಿದೆ, ಬೂತ್ ಮಟ್ಟದ ಎಜೆಂಟರು ಬಿಎಲ್‌ಓ ಅವರೊಂದಿಗೆ ತೆರಳಿ ನೆರವು ನೀಡಬಹುದು. ಅದಕ್ಕಾಗಿ ರಾಜಕೀಯ ಪಕ್ಷಗಳು ಏಜೆಂಟರಿಗೆ ಗುರುತಿನ ಚೀಟಿ ನೀಡುತ್ತಾರೆ. ಇದರೊಂದಿಗೆ ಪ್ರತಿಯೊಂದು ಪಂಚಾಯತ್‌ಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ವಾರು ಮತದಾರರ ನೆರವು ಕೇಂದ್ರಗಳನ್ನು ರಚಿಸಲಾಗುವುದು, ಅಲ್ಲಿ ಕಂಪ್ಯೂಟರ್ ಹಾಗೂ ಇಂಟರ್‌ನೆಟ್ ಸಂಪರ್ಕ ಒದಗಿಸಲಾಗುವುದು. ಬಿಎಲ್‌ಓಗಳು ಅಲ್ಲಿ ದಾಖಲಾತಿಗಳನ್ನು ಅಪ್‌ಲೋಡ್ ಮಾಡಲು ಇದರಿಂದ ಅನುಕೂಲವಾಗಲಿದೆ. ನಾಗರೀಕರು ಕೂಡ ಅಲ್ಲಿ ಬಂದು ದಾಖಲಾತಿಗಳನ್ನು ನೀಡಬಹುದಾಗಿದೆ.

ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಸೂಕ್ಷ್ಮವಾದ ಪ್ರಕ್ರಿಯೆಯಾಗಿದ್ದು, ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವಂತೆ ಸಿಬ್ಬಂದಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ, ಯಾವುದೇ ಕಾರಣಕ್ಕೂ ಅರ್ಹ ಮತದಾರರ ಹೆಸರನ್ನು ಕೈಬಿಡದಂತೆ ಎಲ್ಲಾ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

# ಜಲಕ್ರೀಡಾ ತರಬೇತಿ ಯಶಸ್ವಿ ಸಮಾಪ್ತಿ

ತುಮಕೂರು

ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ನೋಂದಾಯಿತ ಸಂಸ್ಥೆಯಾದ ಕಯಾಕಿಂಗ್ ಮತ್ತು ಕನೋಯಿಂಗ್ ಅಸೋಸಿಯೇಷನ್ ಆಫ್ ಕರ್ನಾಟಕ ಸಹಯೋಗದೊಂದಿಗೆ ತುಮಕೂರು ನಗರದ ಅಮಾನಿಕೆರೆಯಲ್ಲಿ ಕಯಾಕಿಂಗ್ ಮತ್ತು ಕನೋಯಿಂಗ್ ಜಲಕ್ರೀಡಾ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿ ಮುಗಿದಿದೆ. ಇದು 2026ರ ಮಾರ್ಚ್ 15ರಂದು ಆರಂಭಿಸಲಾಗಿತ್ತು.

ಸುಮಾರು ಮೂರು ತಿಂಗಳ ಕಾಲ ನಡೆದ ಈ ತರಬೇತಿ ಕಾರ್ಯಾಗಾರದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸುಮಾರು 20 ಮಕ್ಕಳು ಭಾಗವಹಿಸಿ ಕಯಾಕಿಂಗ್ ಮತ್ತು ಕನೋಯಿಂಗ್ ಜಲಕ್ರೀಡೆಗಳ ಕುರಿತು ಪ್ರಾಯೋಗಿಕ ಹಾಗೂ ತಾಂತ್ರಿಕ ತರಬೇತಿಯನ್ನು ಪಡೆದರು. ಕಾರ್ಯಕ್ರಮವು ಗುರುವಾರ ಯಶಸ್ವಿಯಾಗಿ ಮುಕ್ತಾಯಗೊಂಡಿತು.

ತರಬೇತಿ ಸಮಾರೋಪ ಸಮಾರಂಭದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶುಭ ಕಲ್ಯಾಣ್ ಅವರು ತರಬೇತಿಯಲ್ಲಿ ಭಾಗವಹಿಸಿದ್ದ ಮಕ್ಕಳಿಗೆ ಪ್ಲೇಯಿಂಗ್ ಕಿಟ್‌ಗಳನ್ನು ವಿತರಿಸಿ ಶುಭ ಹಾರೈಸಿದರು. ಅಮಾನಿಕೆರೆಯಲ್ಲಿ ಈ ರೀತಿಯ ಜಲಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸುವ ಮೂಲಕ ಜಿಲ್ಲೆಯ ಕ್ರೀಡಾ ಪ್ರತಿಭೆಗಳನ್ನು ರಾಜ್ಯ ಹಾಗೂ ರಾಷ್ಟ್ರಮಟ್ಟಕ್ಕೆ ಬೆಳೆಸುವ ಉದ್ದೇಶವನ್ನು ಅವರು ವ್ಯಕ್ತಪಡಿಸಿದರು.



ಈ ತರಬೇತಿ ಪಡೆದ ಮಕ್ಕಳು ಇದೇ ಜೂನ್ 10 ರಿಂದ 14ರವರೆಗೆ ಛತ್ತೀಸ್‌ಗಢದಲ್ಲಿ ನಡೆಯಲಿರುವ 38ನೇ ರಾಷ್ಟ್ರೀಯ ಕಯಾಕಿಂಗ್ ಮತ್ತು ಕನೋಯಿಂಗ್ ಜಲಕ್ರೀಡಾ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಲು ತೆರಳಲಿದ್ದಾರೆ. ಈ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಜಿಲ್ಲೆಯ ಹಾಗೂ ರಾಜ್ಯದ ಕೀರ್ತಿಯನ್ನು ಹೆಚ್ಚಿಸುವಂತೆ ಎಲ್ಲಾ ಕ್ರೀಡಾಪಟುಗಳಿಗೆ ಜಿಲ್ಲಾಧಿಕಾರಿಗಳು ಶುಭ ಹಾರೈಸಿದರು.

ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಈ ಮಹತ್ವಾಕಾಂಕ್ಷಿ ಯೋಜನೆಯು ಜಿಲ್ಲೆಯ ಯುವ ಪ್ರತಿಭೆಗಳಿಗೆ ಜಲಕ್ರೀಡೆಗಳ ಕ್ಷೇತ್ರದಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸಿದ್ದು, ಭವಿಷ್ಯದಲ್ಲಿ ಇನ್ನಷ್ಟು ಕ್ರೀಡಾಪಟುಗಳು ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಲು ಸಹಕಾರಿಯಾಗಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಭಾಗವಹಿಸಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆಗೆ ಗಣತಿ ನಮೂನೆ ಸಲ್ಲಿಕೆ ಕಡ್ಡಾಯ



ಮಧುಗಿರಿ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ 2026ರ ಅಂಗವಾಗಿ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ತೆರಳಿ ವಿತರಿಸುವ ಗಣತಿ ನಮೂನೆಯನ್ನು ಭರ್ತಿ ಮಾಡಿ ನಿಗದಿತ ಅವಧಿಯಲ್ಲಿ ಸಲ್ಲಿಸಿದರೆ ಮಾತ್ರ ಪರಿಷ್ಕೃತ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಯಲಿದೆ ಎಂದು ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ ತಿಳಿಸಿದ್ದಾರೆ.

ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 20ರಿಂದ 29ರವರೆಗೆ ಸಿಬ್ಬಂದಿಗೆ ತರಬೇತಿ ಹಾಗೂ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ ಎಂದು ಹೇಳಿದರು.

2025ರ ಮತದಾರರ ಪಟ್ಟಿಯಲ್ಲಿರುವ ಮಾಹಿತಿಯನ್ನು ನಮೂನೆಯಲ್ಲಿ ಈಗಾಗಲೇ ಮುದ್ರಿಸಲಾಗಿರುತ್ತದೆ. ಉಳಿದ ವಿವರಗಳನ್ನು ಮತದಾರರು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಮತಗಟ್ಟೆ ಅಧಿಕಾರಿಗಳಿಗೆ ಸಲ್ಲಿಸಬೇಕು. ನಮೂನೆ ಸಲ್ಲಿಸದಿದ್ದಲ್ಲಿ ಅಂತಿಮ ಮತದಾರರ ಪಟ್ಟಿಯಿಂದ ಹೆಸರು ಕೈಬಿಡುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಒಂದು ನಿರಂತರ ಪ್ರಕ್ರಿಯೆಯಾಗಿದ್ದು, ಮತದಾರರ ಹೆಸರು ಸೇರ್ಪಡೆ, ಹೆಸರು ಕೈಬಿಡುವುದು, ವಿಳಾಸ ಬದಲಾವಣೆ ಸೇರಿದಂತೆ ವಿವಿಧ ತಿದ್ದುಪಡಿಗಳನ್ನು ಈ ವೇಳೆ ಕೈಗೊಳ್ಳಲಾಗುತ್ತದೆ. ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಹಕ್ಕು ದೊರೆಯುವಂತೆ ಮಾಡಲು ಈ ಸಮಗ್ರ ಪರಿಷ್ಕರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಈ ಪ್ರಕ್ರಿಯೆ ನಡೆಯುತ್ತಿದ್ದು, ಕರ್ನಾಟಕದಲ್ಲಿ 2002ರ ನಂತರ ಇದೀಗ 2026ರಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

# ಕೆ.ಲೀಲಾ ಅಧಿಕಾರ ಸ್ವೀಕಾರ– ನೌಕರರ ಶುಭ ಹಾರೈಕೆ



ಕೋಲಾರ

ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿಗಳಾಗಿ ಬಡ್ತಿ ಹೊಂದಿರುವ ಕೆ.ಲೀಲಾ ಅವರು ಇಂದು ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಅಧಿಕೃತವಾಗಿ ಪ್ರಭಾರ ದೈಹಿಕ ಶಿಕ್ಷಣ ಪರಿವೀಕ್ಷಕ ಎಸ್.ಚೌಡಪ್ಪ ಅವರಿಂದ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘದ ಅಧ್ಯಕ್ಷರೂ ಆಗಿರುವ ಚೌಡಪ್ಪ ಮಾತನಾಡಿ, ಇದೇ ತಾಲ್ಲೂಕಿನಲ್ಲಿ ದೈಹಿಕ ಶಿಕ್ಷಣ ಶಿಕ್ಷಕಿಯಾಗಿ ಉತ್ತಮ ಸೇವೆ ಮಾಡಿ ಹೆಸರುಗಳಿಸಿರುವ ಕೆ.ಲೀಲಾ ಅವರು ಇದೀಗ ಮುಂಬಡ್ತಿ ಹೊಂದಿ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾಗಿ ನೇಮಕಗೊಂಡಿರುವುದು ಸಂತಸದ ವಿಷಯವಾಗಿದೆ ಎಂದು ತಿಳಿಸಿ, ತಾಲ್ಲೂಕಿನ ಕ್ರೀಡಾ ಚಟುವಟಿಕೆಗಳಿಗೆ ಪೂರ್ಣ ಸಹಕಾರದ ಭರವಸೆ ನೀಡಿದರು.

ಕಳೆದ 8 ವರ್ಷಗಳಿಮದ ನಾನು ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾಗಿ ಪ್ರಭಾರ ವಹಿಸಿಕೊಂಡು ಕೆಲಸ ನಿರ್ವಹಿಸಿದ್ದು, ಈ ಸಂದರ್ಭದಲ್ಲಿ ತಾಲ್ಲೂಕಿನ ಎಲ್ಲಾ ದೈಹಿಕ ಶಿಕ್ಷಕರು ನೀಡಿರುವ ಸಹಕಾರ ಮರೆಯಲಾಗದು ಎಂದು ಧನ್ಯವಾದ ಸಲ್ಲಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಕ್ರೀಡಾಕೂಟಗಳು ಮತ್ತು ರಾಷ್ಟ್ರೀಯ/ನಾಡ ಹಬ್ಬಗಳನ್ನು ಯಶಸ್ವಿಯಾಗಿ ನಡೆಸಲು ನೀಡಿರುವ ಸಹಕಾರವನ್ನು ಲೀಲಾ ಅವರಿಗೂ ನೀಡಲು ಕೋರಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅಧೀಕ್ಷಕ ಪ್ರಕಾಶ್, ಎಸ್.ಜಯಶಂಕರ್ ಪ್ರಸಾದ್, ವಿನಯ್,ಸುದರ್ಶನ್, ಸುರೇಶ್, ಯಲ್ಲಮ್ಮ ಸೇರಿದಂತೆ ದೈಹಿಕ ಶಿಕ್ಷಕರು ಹಾಜರಿದ್ದು ಶುಭಕೋರಿದರು.

# ತಾಲೂಕು ಕಚೇರಿಗೆ ಜಿಲ್ಲಾಧಿಕಾರಿ ಜಿ.ಪ್ರಭು ಅನಿರೀಕ್ಷಿತ ಭೇಟಿ

ಗುಡಿಬಂಡೆ

ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ. ಪ್ರಭು ಅವರು ಗುಡಿಬಂಡೆ ತಾಲೂಕು ಕಚೇರಿಗೆ ಅನಿರೀಕ್ಷಿತ ಭೇಟಿ ನೀಡಿ ವಿವಿಧ ವಿಭಾಗಗಳ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿದರು. ಇದೇ ವೇಳೆ ಸಾರ್ವಜನಿಕರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು.

ತಾಲೂಕು ಕಚೇರಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಮೊದಲು ಟಪಾಲು ವಿಭಾಗ, ದಾಖಲೆ ಸಂಗ್ರಹ ಕೊಠಡಿ ಸೇರಿದಂತೆ ವಿವಿಧ ವಿಭಾಗಗಳ ಕಾರ್ಯವೈಖರಿಯನ್ನು ಪರಿಶೀಲಿಸಿದರು. ದಾಖಲೆಗಳ ನಿರ್ವಹಣೆ, ಸಾರ್ವಜನಿಕ ಸೇವೆಗಳ ಅನುಷ್ಠಾನ ಹಾಗೂ ಆಡಳಿತಾತ್ಮಕ ಕಾರ್ಯಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಬಳಿಕ ಸಭಾಂಗಣದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮ ನಡೆಸಿ, ಜನರಿಂದ ಬಂದ ಮನವಿಗಳನ್ನು ಆಲಿಸಿದರು. ಈ ವೇಳೆ ಪೋಡಿ, ಬಗರ್ ಹುಕುಂ, ಜಮೀನುಗಳಿಗೆ ರಸ್ತೆ ಸಂಪರ್ಕ, ಸರ್ಕಾರಿ ಭೂಮಿ ಒತ್ತುವರಿ ತೆರವು, ಜಮೀನು



ದುರಸ್ತಿ ಸೇರಿದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳನ್ನು ಸಾರ್ವಜನಿಕರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಅರ್ಜಿದಾರರ ಸಮಸ್ಯೆಗಳನ್ನು ಆಲಿಸಿದ ಜಿಲ್ಲಾಧಿಕಾರಿಗಳು ಸಂಬಂಧಿತ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ಸಂಗ್ರಹಿಸಿ, ನಿಯಮಾನುಸಾರ ಅರ್ಜಿಗಳ ವಿಲೇವಾರಿಯನ್ನು ತ್ವರಿತವಾಗಿ ಕೈಗೊಳ್ಳುವಂತೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳು ನೇರವಾಗಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ಸ್ಪಂದಿಸಿರುವುದಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದ್ದು, ತಮ್ಮ ಸಮಸ್ಯೆಗಳಿಗೆ ಶೀಘ್ರ ಪರಿಹಾರ ದೊರೆಯುವ ನಿರೀಕ್ಷೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಸಿಗ್ಬತ್ತುಲ್ಲಾ, ಉಪ ತಹಸೀಲ್ದಾರ್ ತುಳಸಿ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಆರತಿ, ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ರೈತರಿಂದ ಅರ್ಜಿಆಹ್ವಾನ

ರಾಮನಗರ

2026–27 ನೇ ಸಾಲಿನಲ್ಲಿ ಚನ್ನಪಟ್ಟಣ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಆರ್‌ಕೆವಿವೈ–ಪಿಡಿಎಂಸಿ ಹನಿ ನೀರಾವರಿ ಕಾರ್ಯಕ್ರಮದಡಿ ಎಲ್ಲಾ ರೀತಿಯ ತೋಟಗಾರಿಕೆ ಬೆಳೆಗಳಿಗೆ (ಅಡಿಕೆ ಬೆಳೆಗೆ ಹೊರತಪಡಿಸಿ) ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಎಲ್ಲಾ ವರ್ಗದ ರೈತರಿಗೆ ಮೊದಲ 2 ಹೆಕ್ಟೇರಿಗೆ ಶೇ. 90 ಹಾಗೂ 2 ಹೆಕ್ಟೇರ್ ಯಿಂದ 5 ಹೆಕ್ಟೇರ್ ರವರೆಗೆ ಶೇ. 45 ರಂತೆ ಸಹಾಯಧನ ನೀಡಲಾಗುವುದು. ರೈತರು ಈಗಾಗಲೆ ಸಹಾಯಧನ ಪಡೆದು 7 ವರ್ಷಗಳು ಕಳೆದಿದ್ದರೆ ಮತ್ತೊಮ್ಮೆ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾರೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಪ್ರದೇಶ ವಿಸ್ತರಣೆ, ಪಾಲಿಹೌಸ್, ಪ್ಲಾಸ್ಟಿಕ್ ಹೊದಿಕೆ ಕಾರ್ಯಕ್ರಮಗಳನ್ನು ಅನುಷ್ಟಾನ ಗೊಳಿಸಲಾಗುತ್ತಿದ್ದು, ಸಹಾಯಧನ ಸೌಲಭ್ಯಗಳನ್ನು ಪಡೆಯಲು ಆಸಕ್ತ ರೈತರು ಜೂ. 10ರೊಳಗೆ ಚನ್ನಪಟ್ಟಣ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬಹುದು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy